ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೪೨

**ಪಟ್ಟಿ – ೦೫**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಐವತ್ತೆಂಟನೇಯ ಮುಂದುವರೆದ ಅಧಿವೇಶನ**

**ಸೋಮವಾರ, ದಿನಾಂಕ : ೦೯ನೇ ಮಾರ್ಚ್, ೨೦೨೬**

---

## ಸಮೂಹ – I

೧. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು

೨. ಇಂಧನ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು

೫. ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು

೬. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

೭. ಉನ್ನತ ಶಿಕ್ಷಣ ಸಚಿವರು

---

## ಹೊಸದಾಗಿ ಶಾಲೆಗಳನ್ನು ಪ್ರಾರಂಭಿಸುವ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೮೮ (೫೫೮) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೦–೨೧, ೨೦೨೧–೨೨ ಹಾಗೂ ೨೦೨೨–೨೩ನೇ ಶೈಕ್ಷಣಿಕ ವರ್ಷದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ಹೊಸದಾಗಿ ಪ್ರಾರಂಭಿಸಲು ಕೋರಿ ಎಷ್ಟು ಅರ್ಜಿಗಳನ್ನು ಸ್ವೀಕರಿಸಲಾಗಿತ್ತು ; (ಅರ್ಜಿ ಸಲ್ಲಿಸಿದ ಸಂಸ್ಥೆಯ ಹೆಸರಿನೊಂದಿಗೆ ವರ್ಷವಾರು ವಿವರ ನೀಡುವುದು)

(ಆ) ೨೦೨೦–೨೧, ೨೦೨೧–೨೨ ಹಾಗೂ ೨೦೨೨–೨೩ನೇ ಶೈಕ್ಷಣಿಕ ವರ್ಷದಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ಹೊಸದಾಗಿ ಪ್ರಾರಂಭಿಸಲು ಕೋರಿ ಅರ್ಜಿ ಸಲ್ಲಿಸಿದ ಎಷ್ಟು ಸಂಸ್ಥೆಗಳಿಗೆ ಶಾಲೆಗಳನ್ನು ಪ್ರಾರಂಭಿಸಲು ಅನುಮತಿ ನೀಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ೨೦೨೦–೨೧, ೨೦೨೧–೨೨ ಹಾಗೂ ೨೦೨೨–೨೩ನೇ ಶೈಕ್ಷಣಿಕ ವರ್ಷದಲ್ಲಿ ಹೊಸದಾಗಿ ಪ್ರಾರಂಭವಾದ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಎಷ್ಟು ಶಾಲೆಗಳು ಪ್ರತಿ ವರ್ಷ ಅನುಮತಿ ನವೀಕರಣಕ್ಕಾಗಿ ಅರ್ಜಿ ಸಲ್ಲಿಸಿವೆ ; ಎಷ್ಟು ಶಾಲೆಗಳ ಅನುಮತಿ ನವೀಕರಣಗೊಂಡಿದೆ ? (ಜಿಲ್ಲಾವಾರು ಹೆಸರಿನೊಂದಿಗೆ ವಿವರ ನೀಡುವುದು)

# ಡೀಮ್ಡ್ ಯೂನಿವರ್ಸಿಟಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೮೯ (೫೫೯) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫–೨೬ನೇ ಶೈಕ್ಷಣಿಕ ಸಾಲಿನಲ್ಲಿ ರಾಜ್ಯದಲ್ಲಿರುವ ಡೀಮ್ಡ್ ಯೂನಿವರ್ಸಿಟಿ ವೈದ್ಯಕೀಯ ಕಾಲೇಜುಗಳು ಸರ್ಕಾರಕ್ಕೆ ಎಷ್ಟು ಪ್ರಮಾಣದ ವೈದ್ಯಕೀಯ ಸೀಟುಗಳನ್ನು ಬಿಟ್ಟು ಕೊಡಬೇಕಾಗಿದೆ ; ಈ ಕುರಿತು ಸರ್ಕಾರಕ್ಕೂ ವೈದ್ಯಕೀಯ ಕಾಲೇಜುಗಳ ಆಡಳಿತ ಮಂಡಳಿಗೂ ಇರುವ ಒಪ್ಪಂದವೇನು ;

(ಆ) ೨೦೨೫–೨೬ನೇ ಶೈಕ್ಷಣಿಕ ಸಾಲಿನಲ್ಲಿ ಎಷ್ಟು ಡೀಮ್ಡ್ ಯೂನಿವರ್ಸಿಟಿ ವೈದ್ಯಕೀಯ ಕಾಲೇಜುಗಳು ಸರ್ಕಾರಕ್ಕೆ ವೈದ್ಯಕೀಯ ಸೀಟುಗಳನ್ನು ಬಿಟ್ಟುಕೊಡುತ್ತಿವೆ ; ಎಷ್ಟು ಡೀಮ್ಡ್ ಯೂನಿವರ್ಸಿಟಿ ವೈದ್ಯಕೀಯ ಕಾಲೇಜುಗಳು ಸೀಟುಗಳನ್ನು ಸರ್ಕಾರಕ್ಕೆ ನೀಡುತ್ತಿಲ್ಲ ; (ಕಾರಣಗಳ ಸಹಿತ ಮಾಹಿತಿ ನೀಡುವುದು)

(ಇ) ಸರ್ಕಾರಕ್ಕೆ ಸೀಟುಗಳನ್ನು ಬಿಟ್ಟು ಕೊಡದಿರುವ ಡೀಮ್ಡ್ ಯೂನಿವರ್ಸಿಟಿ ವೈದ್ಯಕೀಯ ಕಾಲೇಜುಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ ; ಸೀಟು ಬಿಟ್ಟು ಕೊಡದಿರುವ ವೈದ್ಯಕೀಯ ಕಾಲೇಜುಗಳು ಸರ್ಕಾರಕ್ಕೆ ಈ ವಿಷಯಕ್ಕಾಗಿ ಪಾವತಿ ಮಾಡಿರುವ ದಂಡದ ಮೊತ್ತವೆಷ್ಟು ;

(ಈ) ಡೀಮ್ಡ್ ಯೂನಿವರ್ಸಿಟಿ ವೈದ್ಯಕೀಯ ಕಾಲೇಜುಗಳಿಗೆ ಸರ್ಕಾರವು ಯಾವ ಯಾವ ರಿಯಾಯಿತಿ ಸೌಲಭ್ಯಗಳನ್ನು ನೀಡುತ್ತಿದೆ ?

# ವೈದ್ಯಕೀಯ ಶಿಕ್ಷಣ ಇಲಾಖೆಯ ಅನುದಾನ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೯೦ (೫೬೦) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ವೈದ್ಯಕೀಯ ಶಿಕ್ಷಣ ಇಲಾಖೆಯಲ್ಲಿ ಅನುದಾನದ ಅಂದಾಜುಗಳು ಗಣನೀಯ ಇಳಿಕೆಯಾಗಲು ಕಾರಣವೇನು ; (ವಿವರ ನೀಡುವುದು)

(ಆ) ೨೦೨೫–೨೬ನೇ ಸಾಲಿನ ಪ್ರಸ್ತಾವನೆಗೂ ಅನುಮೋದಿತ ಅನುದಾನಕ್ಕೂ ರೂ.೨೬೫೧.೭೭ ಕೋಟಿ ಕೊರತೆಯಾಗಲು ಕಾರಣವೇನು ; (ವಿವರ ನೀಡುವುದು)

(ಇ) ಯು.ಜಿ.ಸಿ ಮತ್ತು ಪಿಜಿ ಸೀಟುಗಳಲ್ಲಿ ಶೇ.೧೫% ಎನ್.ಆರ್.ಐ ಸೀಟುಗಳನ್ನಾಗಿ ಪರಿವರ್ತಿಸುವ ಕುರಿತು ಸರ್ಕಾರದ ನಿಲುವೇನು ?

# ಹಲಾಲ್ ಪ್ರಮಾಣ ಪತ್ರದ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೯೧ (೫೬೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಲಾಲ್ ಪ್ರಾಮಾಣಿಕೃತ ಆಹಾರ ಪದಾರ್ಥಗಳನ್ನು ಸೇವಿಸಿದ ಸಂದರ್ಭದಲ್ಲಿ ಸದರಿ ಆಹಾರಗಳನ್ನು ಸೇವಿಸಿದವರಿಗೆ ಅನಾಹುತ, ಅವಗಡಗಳು ಸಂಭವಿಸಿದ್ದಲ್ಲಿ ಯಾರನ್ನು ಹೊಣೆಗಾರರನ್ನಾಗಿ ಮಾಡಲಾಗುವುದು ;

(ಆ) ಖಾಸಗಿ ವ್ಯಕ್ತಿಗಳು ನೀಡುವ ಹಲಾಲ್ ಪ್ರಮಾಣ ಪತ್ರಕ್ಕೆ ಸರ್ಕಾರದ ಮಾನ್ಯತೆ ಇದೆಯೇ ; ಈ ಕುರಿತು ಸರ್ಕಾರದ ನಿಲುವೇನು ;

(ಇ) ಆಹಾರ ಪಟ್ಟಣಗಳ ಮೇಲೆ ಹಲಾಲ್ ಪ್ರಮಾಣ ಪತ್ರಗಳನ್ನು ಮುದ್ರಿಸಿದ್ದಲ್ಲಿ ಅಂತಹ ಆಹಾರ ವಸ್ತುಗಳನ್ನು ಆಹಾರದಲ್ಲಿ ಕಲಬೆರಕೆ ಎಂಬುದಾಗಿ ಪರಿಗಣಿಸಿ ಕ್ರಮ ಕೈಗೊಳ್ಳಲು ಸರ್ಕಾರ ಕೈಗೊಂಡ ಕ್ರಮಗಳೇನು ; ಕಲಬೆರಕೆ ಆಹಾರ ಮಾರಾಟ ಮಾಡುವ ವರ್ತಕರ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಹಲಾಲ್ ಪ್ರಮಾಣ ಪತ್ರಗಳನ್ನು ಸರ್ಕಾರ ಒಪ್ಪುವುದಿಲ್ಲವೆಂದಾದಲ್ಲಿ ಅನಧಿಕೃತವಾಗಿ ಆಹಾರ ಪೊಟ್ಟಣಗಳ ಮೇಲೆ ಹಲಾಲ್ ಪ್ರಾಮಾಣಿಕೃತವಾಗಿದೆ ಎಂಬುದಾಗಿ ಮುದ್ರಿಸುವ ಕಂಪನಿಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಉ) ಹಲಾಲ್ ಎಂಬುದು ಒಂದು ಧರ್ಮ ಸಮುದಾಯದ ವಿಶೇಷ ವ್ಯವಸ್ಥೆ ಎಂದಾದಲ್ಲಿ ಅದನ್ನು ಇತರ ಧರ್ಮ ಸಮುದಾಯಗಳ ಆಹಾರ ಪದ್ಧತಿ ಮೇಲೆ ಬಲವಂತವಾಗಿ ಹೇರುವ ವಿಕೃತ ಪ್ರಯತ್ನಗಳನ್ನು ಮಾಡುವ ಮಾರಾಟಗಾರರ ಮೇಲೆ ಕ್ರಿಮಿನಲ್ ಮೊಖದ್ದಮೆ ದಾಖಲಿಸುವ ಕುರಿತು ಸರ್ಕಾರದ ನಿಲುವೇನು ; ಪೊಟ್ಟಣಗಳ ಮೂಲಕ ಮಾರಾಟವಾಗುವ ಆಹಾರ ಪದಾರ್ಥಗಳ ಶುದ್ಧತೆಯನ್ನು ಕಾಪಾಡುವಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ?

## ರಾಜ್ಯದ ಸರ್ಕಾರಿ ಶಾಲೆಗಳಲ್ಲಿ L.K.G, U.K.G ತೆರೆಯುವ ಬಗ್ಗೆ

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೯೨ (೫೬೩) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫–೨೬ ನೇ ಸಾಲಿನ ಬಜೆಟ್ ನಲ್ಲಿ ಎಷ್ಟು ಸಾವಿರ ಸರ್ಕಾರಿ ಶಾಲೆಗಳಲ್ಲಿ ಎಲ್.ಕೆ.ಜಿ ಮತ್ತು ಯು.ಕೆ.ಜಿ ತರಗತಿಗಳನ್ನು ಪ್ರಾರಂಭಿಸಲು ಘೋಷಣೆ ಮಾಡಲಾಗಿತ್ತು ; (ಮಾಹಿತಿ ನೀಡುವುದು)

(ಆ) ಬಜೆಟ್‌ನಲ್ಲಿ ಘೋಷಿಸಿದಂತೆ ಎಷ್ಟು ಸರ್ಕಾರಿ ಶಾಲೆಗಳಲ್ಲಿ ಎಲ್.ಕೆ.ಜಿ ಮತ್ತು ಯು.ಕೆ.ಜಿ ಶಾಲೆಗಳನ್ನು ತೆರೆಯಲಾಗಿದೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ಬೆಂಗಳೂರು ನಗರ ಯಶವಂತಪುರ ವಿಧಾನಸಭಾ ಕ್ಷೇತ್ರವು ಗ್ರಾಮೀಣ ಭಾಗದಲ್ಲಿ ೧೭ ಗ್ರಾಮ ಪಂಚಾಯಿತಿಗಳನ್ನು ಹೊಂದಿದ್ದು ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಎಷ್ಟು ಎಲ್.ಕೆ.ಜಿ ಮತ್ತು ಯು.ಕೆ.ಜಿ ಶಾಲೆಗಳನ್ನು ಪ್ರಾರಂಭಿಸಲಾಗಿದೆ ; (ವಿವರವಾದ ಮಾಹಿತಿ ಒದಗಿಸುವುದು)

(ಈ) ೨೦೨೫-೨೬ನೇ ಸಾಲಿನಲ್ಲಿ ಯಶವಂತಪುರ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಪ್ರಾಥಮಿಕ ಮತ್ತು ಪ್ರೌಢಶಾಲೆಯ ಕಟ್ಟಡಗಳ ದುರಸ್ತಿಗಾಗಿ ಹಾಗೂ ಹೊಸ ಕಟ್ಟಡಗಳನ್ನು ನಿರ್ಮಾಣ ಮಾಡಲು ಮಂಜೂರು ಮಾಡಿರುವ ಅನುದಾನವೆಷ್ಟು ; ಬಿಡುಗಡೆ ಮಾಡಿದ ಅನುದಾನದಲ್ಲಿ ಎಷ್ಟು ಶಾಲೆಗಳ ಕಟ್ಟಡಗಳನ್ನು ದುರಸ್ತಿ ಮಾಡಲಾಗಿದೆ ಹಾಗೂ ಎಷ್ಟು ಹೊಸ ಕಟ್ಟಡಗಳನ್ನು ನಿರ್ಮಿಸಲಾಗಿದೆ ; ಅವು ಯಾವುವು ? (ಮಾಹಿತಿ ಒದಗಿಸುವುದು)

## ಸರ್ಕಾರಿ ಪದವಿ ಕಾಲೇಜುಗಳಲ್ಲಿ ಬೋಧಕ ಸಿಬ್ಬಂದಿಗಳ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೯೩ (೫೬೪) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು; ಈ ಪದವಿ ಕಾಲೇಜುಗಳಿಗೆ ಮಂಜೂರಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ವಿಷಯವಾರು ಮಾಹಿತಿ ಒದಗಿಸುವುದು)

(ಆ) ಸರ್ಕಾರಿ ಪದವಿ ಕಾಲೇಜುಗಳಲ್ಲಿ ಖಾಲಿ ಇರುವ ವಿಷಯವಾರು ಹುದ್ದೆಗಳ ಸಂಖ್ಯೆ ಎಷ್ಟು ; ಖಾಲಿ ಹುದ್ದೆಗಳನ್ನು ತುಂಬದಿರಲು ಕಾರಣವೇನು ; (ವಿವರ ನೀಡುವುದು)

(ಇ) ಸರ್ಕಾರಿ ಪದವಿ ಕಾಲೇಜುಗಳಲ್ಲಿ ಬೋಧಕ ಹುದ್ದೆಗಳು ಖಾಲಿ ಇರುವುದರಿಂದ ವರ್ಷದಿಂದ ವರ್ಷಕ್ಕೆ ಶಿಕ್ಷಣದ ಗುಣಮಟ್ಟ ಕುಸಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಈ) ಸರ್ಕಾರಿ ಪದವಿ ಪೂರ್ವ ಪದವಿ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಎಷ್ಟು ಬೋಧಕ ಸಿಬ್ಬಂದಿಗಳು ಬೇರೆ ಇಲಾಖೆಗಳಲ್ಲಿ ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದಾರೆ ; (ಕಾಲೇಜುವಾರು/ ಸಿಬ್ಬಂದಿವಾರು ವಿವರ ಒದಗಿಸುವುದು)

(ಉ) ಕಾಲೇಜುಗಳಲ್ಲಿ ಸಂಬಳ ಪಡೆದು ಅನ್ಯ ಕರ್ತವ್ಯದ ಮೇರೆಗೆ ಎಷ್ಟು ಭೋದಕ ಸಿಬ್ಬಂದಿಗಳು ಬೇರೆ ಬೇರೆ ಇಲಾಖೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ ; (ವಿವರ ಒದಗಿಸುವುದು)

(ಊ) ಕಾಲೇಜುಗಳಲ್ಲಿ ಬೋಧಕ ಸಿಬ್ಬಂದಿಗಳ ಕೊರತೆಯಿಂದಾಗಿ ಶಿಕ್ಷಣದ ಗುಣಮಟ್ಟ ಕುಸಿಯುತ್ತಿರುವಾಗ ಬೋಧಕ ಸಿಬ್ಬಂದಿಗಳನ್ನು ನಿಯೋಜನೆ/ಅನ್ಯ ಕರ್ತವ್ಯಯುದ ಮೇರೆಗೆ ಬೇರೆ ಬೇರೆ ಇಲಾಖೆಗಳಿಗೆ ನಿಯೋಜಿಸಿರುವ ಬಗ್ಗೆ ಸರ್ಕಾರದ ನಿಲುವೇನು ;

(ಋ) ನಿಯೋಜನೆ/ಅನ್ಯ ಕರ್ತವ್ಯದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳನ್ನು ಹಿಂದಕ್ಕೆ ಕರೆಸಿಕೊಂಡು ಕಾಲೇಜುಗಳಲ್ಲಿ ಬೋಧನೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಸರ್ಕಾರಿ ಆಸ್ಪತ್ರೆಗಳಿಗೆ ಔಷಧಿ ಸರಬರಾಜು ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೯೪ (೫೬೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಬಡ ಮತ್ತು ಕೂಲಿ ಕಾರ್ಮಿಕರಿಗೆ ಹಾಗೂ ಮಧ್ಯಮ ವರ್ಗದ ಸಾರ್ವಜನಿಕರಿಗೆ ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧ ಲಭ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ೨೦೨೫–೨೬ನೇ ಸಾಲಿನ ಅಂತ್ಯಕ್ಕೆ ಸರ್ಕಾರಿ ಆಸ್ಪತ್ರೆಗಳಿಗೆ ಔಷಧಿಗಳನ್ನು ಸರಬರಾಜು ಮಾಡಲು ನೀಡಿರುವ ಅನುದಾನವೆಷ್ಟು; ನೀಡಿರುವ ಅನುದಾನದಲ್ಲಿ ಖರ್ಚು ಮಾಡಿರುವ ಅನುದಾನವೆಷ್ಟು ; (ವಿವರ ಒದಗಿಸುವುದು)

(ಇ) ನೀಡಿರುವ ಅನುದಾನ ರಾಜ್ಯದಲ್ಲಿರುವ ಸರ್ಕಾರಿ ಆಸ್ಪತ್ರೆಗಳಿಗೆ ಔಷಧಿ ಪೂರೈಸಲು ಸಾಧ್ಯವಿರುವುದರ ಬಗ್ಗೆ ಮಾಹಿತಿ ಒದಗಿಸುವುದು ?

## ಹೊಸದಾಗಿ ಬಿ.ಪಿ.ಎಲ್ ಕಾರ್ಡ್‌ಗಳ ವಿತರಣೆ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೯೫ (೫೬೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಬಡಜನರಿಗೆ ಹೊಸದಾಗಿ ಬಿ.ಪಿ.ಎಲ್ ಕಾರ್ಡ್‌ಗಳು ವಿತರಣೆ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ಈವರೆವಿಗೂ ಸರ್ಕಾರ ಎಷ್ಟು ಬಿ.ಪಿ.ಎಲ್ ಕಾರ್ಡ್‌ಗಳನ್ನು ವಿತರಣೆ ಮಾಡಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಬೆಂಗಳೂರು ನಗರ ಜಿಲ್ಲೆ ಯಶವಂತಪುರ ವಿಧಾನಸಭಾ ಕ್ಷೇತ್ರದಲ್ಲಿ ಹಾಲಿ ಇರುವ ಬಿ.ಪಿ.ಎಲ್ ಕಾರ್ಡ್‌ಗಳ ಸಂಖ್ಯೆ ಎಷ್ಟು; (ಮಾಹಿತಿ ನೀಡುವುದು)

(ಈ) ೨೦೨೫–೨೬ನೇ ಸಾಲಿನಿಂದ ಇಲ್ಲಿಯವರೆಗೆ ಯಶವಂತಪುರ ವಿಧಾನಸಭಾ ಕ್ಷೇತ್ರದ ಸಾರ್ವಜನಿಕರಿಂದ ಬಿ.ಪಿ.ಎಲ್ ಕಾರ್ಡ್ ಅನ್ನು ಪಡೆಯುವ ಸಲುವಾಗಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಬಂದಿರುವ ಅರ್ಜಿಗಳ ಪೈಕಿ ಎಷ್ಟು ಜನಕ್ಕೆ ಬಿ.ಪಿ.ಎಲ್ ಕಾರ್ಡ್‌ಗಳನ್ನು ವಿತರಣೆ ಮಾಡಲಾಗಿದೆ ;

(ಉ) ಬಾಕಿ ಇರುವ ಅರ್ಜಿಗಳನ್ನು ವಿಲೇವಾರಿ ಮಾಡುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿ ಪಡಿತರ ನ್ಯಾಯಬೆಲೆ ಅಂಗಡಿಗಳಲ್ಲಿ ಸೌಲಭ್ಯ ಒದಗಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೯೬ (೫೬೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನ್ಯಾಯಬೆಲೆ ಅಂಗಡಿಗಳಲ್ಲಿ ಸರ್ಕಾರದ ಯೋಜನೆಗಳ ವಿವರಗಳನ್ನು ಪ್ರದರ್ಶಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ನ್ಯಾಯಬೆಲೆ ಅಂಗಡಿಗಳಲ್ಲಿ ಕರಾವಳಿ ಭಾಗದಲ್ಲಿ ಕೆಂಪು ಕುಚ್ಚಲು ಅಕ್ಕಿ ನೀಡಬೇಕೆಂಬ ಜನರ ಬೇಡಿಕೆಯನ್ನು ಈಡೇರಿಸಲಾಗಿದೆಯೇ ; (ಮಾಹಿತಿ ನೀಡುವುದು)

(ಇ) ಎ.ಪಿ.ಎಲ್ ಕಾರ್ಡ್‌ದಾರರಿಗೆ ಅಕ್ಕಿ ದೊರಕುತ್ತಿಲ್ಲ ಎಂಬ ದೂರುಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ; ರಾಜ್ಯದಲ್ಲಿ ೨೦೨೩–೨೪ರಲ್ಲಿ ಎಷ್ಟು ಎ.ಪಿ.ಎಲ್ ಕಾರ್ಡ್‌ದಾರರಿಗೆ ಕುಚ್ಚಲು ಅಕ್ಕಿ ನೀಡಲಾಗಿದೆ ? (ವಿವರ ನೀಡುವುದು)

## ಮಂಗಳೂರಿನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಉನ್ನತೀಕರಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೯೭ (೫೬೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ಸರ್ಕಾರಿ ವೆನ್‌ಲಾಕ್ ಆಸ್ಪತ್ರೆಯ ಹೊರರೋಗಿ ಚಿಕಿತ್ಸೆ ವಿಭಾಗದ ಕಾಮಗಾರಿ ಯಾವ ಹಂತದಲ್ಲಿದೆ ; (ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಒಟ್ಟು ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರ ಉನ್ನತೀಕರಿಸಿದೆ ; (ವಿವರ ನೀಡುವುದು)

(ಇ) ಮಂಗಳೂರು ನಗರದ ಜಪ್ಪಿನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಉನ್ನತೀಕರಿಸಬೇಕೆಂಬ ಬೇಡಿಕೆ ಮತ್ತು ಹೆರಿಗೆ ಕೇಂದ್ರ ವಿಭಾಗದ ಬೇಡಿಕೆ ಇದ್ದು, ಇದನ್ನು ಯಾವಾಗ ಪ್ರಾರಂಭಿಸಲಾಗುವುದು ; ಈ ಬಗ್ಗೆ ಸರ್ಕಾರದ ಮುಂದೆ ಯೋಜನೆಗಳಿದೆಯೇ ;

(ಈ) ಮಂಗಳೂರಿನ ಜಪ್ಪುನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರವು ವೈದ್ಯಕೀಯ ಕಾಲೇಜುಗಳ ಜೊತೆ ಒಪ್ಪಂದದ ಮೇರೆಗೆ ಅದರ ಸಹಯೋಗದೊಂದಿಗೆ ಹೆರಿಗೆ ಆಸ್ಪತ್ರೆ ಪ್ರಾರಂಭಿಸಲು ಒಡಂಬಡಿಕೆ ಮಾಡಿಕೊಂಡು ಹೆರಿಗೆ ವಿಭಾಗವನ್ನು ಸ್ಥಾಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಾನವ–ಆನೆ ಸಂಘರ್ಷ ಹೆಚ್ಚಾಗುತ್ತಿರುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೯೮ (೫೭೦) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಾನವ–ಆನೆ ಸಂಘರ್ಷ ಹೆಚ್ಚಾಗುತ್ತಿದ್ದು, ಇದು ಅನೇಕ ಜೀವಗಳು ಕಳೆದುಕೊಳ್ಳುತ್ತಿದ್ದರೂ, ಸರ್ಕಾರ ಇದುವರೆವಿಗೂ ಯಾವುದೇ ಕ್ರಮ ಕೈಗೊಳ್ಳದೇ ವಿಫಲವಾಗಿದೆ ಎಂಬ ದೂರುಗಳಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ;

(ಆ) ಆನೆ ಸಂಘರ್ಷ ತಡೆಯಲು ಎಲಿಫೆಂಟ್ ಟಾಸ್ಕ್ ಫೋರ್ಸ್ ರಚಿಸುವುದಾಗಿ ತಿಳಿಸಿದ್ದರೂ ಇನ್ನೂ ಕಾರ್ಯಗತಗೊಳ್ಳದೇ ಇರಲು ಕಾರಣವೇನು ;

(ಇ) ಕಾಡುಗಳಲ್ಲಿರುವ ಪ್ರಾಣಿಗಳು ಇತ್ತೀಚೆಗೆ ರಸ್ತೆಗಳಿಗೆ ಬಂದು ಅಮಾಯಕರ ಜೀವ ತೆಗೆದುಕೊಳ್ಳುವುದರ ಜೊತೆಗೆ ಕೃಷಿ ನಾಶ ಮಾಡುತ್ತಿರುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

# ದಕ್ಷಿಣ ಕನ್ನಡ ಜಿಲ್ಲೆಯ ವೆನ್‌ಲಾಕ್ ಆಸ್ಪತ್ರೆಯಲ್ಲಿ ಜಯದೇವ ಹೃದ್ರೋಗ ಮತ್ತು ಕಿದ್ವಾಯಿ ಕ್ಯಾನ್ಸರ್ ಸಂಸ್ಥೆ ಸ್ಯಾಟ್‌ಲೈಟ್ ಸೆಂಟರ್ ಸ್ಥಾಪಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೯೯ (೫೭೧) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯ ವೆನ್‌ಲಾಕ್ ಆಸ್ಪತ್ರೆಯಲ್ಲಿ ಜಯದೇವ ಹೃದ್ರೋಗ ಸಂಸ್ಥೆ ಮತ್ತು ಕಿದ್ವಾಯಿ ಕ್ಯಾನ್ಸರ್ ಸಂಸ್ಥೆಯ ಸ್ಯಾಟಲೈಟ್ ಸೆಂಟರ್‌ನ್ನು ಮಂಗಳೂರಿನಲ್ಲಿ ಪ್ರಾರಂಭಿಸಬೇಕೆಂಬ ಬೇಡಿಕೆ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ; (ವಿವರ ನೀಡುವುದು)

(ಆ) ಕರಾವಳಿ ಭಾಗದಲ್ಲಿ ಹೃದ್ರೋಗ ಮತ್ತು ಕ್ಯಾನ್ಸರ್‌ಗೆ ಸಂಬಂಧಪಟ್ಟ ರೋಗಿಗಳನ್ನು ಯಾವ ಯಾವ ಆಸ್ಪತ್ರೆಗಳಿಗೆ ವರ್ಗಾಯಿಸಲಾಗುತ್ತದೆ ; (ವಿವರ ನೀಡುವುದು)

(ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ವೈದ್ಯಕೀಯ ಶಿಕ್ಷಣ ಇಲಾಖೆಯಿಂದ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಪ್ರಾರಂಭಿಸಲು ಇಲಾಖೆಗಳಿಗೆ ಇರುವ ತೊಂದರೆಗಳೇನು ? (ವಿವರ ನೀಡುವುದು)

# ನಲಿ–ಕಲಿ ಯೋಜನೆಯ ಬಗ್ಗೆ

**ಶ್ರೀ ಜಗದೇವ್ ಗುತ್ತೇದಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೦೦ (೫೭೨) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರ ನಲಿ–ಕಲಿ ಯೋಜನೆ ಸ್ಥಗಿತಗೊಳಿಸಲು ಕ್ರಮ ಕೈಗೊಳ್ಳುತ್ತಿದೆಯೇ ; ಕ್ರಮ ಕೈಗೊಳ್ಳುತ್ತಿದ್ದರೆ, ಅದಕ್ಕೆ ಕಾರಣಗಳೇನು ;

(ಆ) ನಲಿ–ಕಲಿ ಯೋಜನೆಯಿಂದ ಸರ್ಕಾರಿ ಶಾಲೆಗಳ ಮಕ್ಕಳಿಗೆ ಕಲಿಕೆಯಲ್ಲಿ ಸುಧಾರಣೆಯಾಗುತ್ತಿರುವುದು ನಿಜವೇ ;

(ಇ) ನಲಿ–ಕಲಿ ಯೋಜನೆ ಸ್ಥಗಿತಗೊಳಿಸಬಾರದು ಎಂಬ ಸಾಧಕ–ಬಾಧಕಗಳ ಬಗ್ಗೆ ಸರ್ಕಾರ ವರದಿಯನ್ನು ತಯಾರಿಸಿದೆಯೇ ?

## ರಾಜ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಶಿಕ್ಷಕರ ಸಮಸ್ಯೆಗಳ ಬಗ್ಗೆ

**ಶ್ರೀ ಡಿ.ಟಿ ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ):–**

೫೦೧ (೫೭೩) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಶಿಕ್ಷಕರ/ಉಪನ್ಯಾಸಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಅತಿಥಿ ಶಿಕ್ಷಕರಿಗೆ/ಉಪನ್ಯಾಸಕರಿಗೆ ಸರ್ಕಾರ ನೀಡುತ್ತಿರುವ ವೇತನ ಎಷ್ಟು ಮತ್ತು ವೇತನದ ಜೊತೆಗೆ ನೀಡುತ್ತಿರುವ ಇನ್ನಿತರೆ ಸೌಲಭ್ಯಗಳಾವುವು ;

(ಇ) ಅತಿಥಿ ಶಿಕ್ಷಕರ/ಉಪನ್ಯಾಸಕರ ವೇತನ ಹೆಚ್ಚಳ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದರೆ, ಯಾವಾಗ ಹೆಚ್ಚಳ ಮಾಡಲಾಗುವುದು ; (ವಿವರ ಒದಗಿಸುವುದು)

(ಈ) ಸದರಿ ಶಿಕ್ಷಕರ/ಉಪನ್ಯಾಸಕರ ಬದಲಾಗಿ ಅರೆಕಾಲಿಕ ಶಿಕ್ಷಕರಾಗಿ ನೇಮಕ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಕಾರಣಗಳೇನು ?

## ರಾಜ್ಯದಲ್ಲಿರುವ ಸರ್ಕಾರಿ ಮತ್ತು ಖಾಸಗಿ ವಿಶ್ವವಿದ್ಯಾನಿಲಯಗಳ ಮಾಹಿತಿ ಕುರಿತು

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೫೦೨ (೫೭೪) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇರುವ ಒಟ್ಟು ಸರ್ಕಾರಿ ಮತ್ತು ಖಾಸಗಿ ವಿಶ್ವವಿದ್ಯಾನಿಲಯಗಳ ಸಂಖ್ಯೆ ಎಷ್ಟು ಮತ್ತು ಯಾವುವು ;

(ಆ) ವಿಶ್ವವಿದ್ಯಾಲಯಗಳಿಗೆ ಸಿಂಡಿಕೇಟ್ ಸದಸ್ಯರನ್ನು ನೇಮಕ ಮಾಡಲು ಇರುವ ಮಾನದಂಡಗಳು ಯಾವುವು ;

(ಇ) ಈ ವಿಶ್ವವಿದ್ಯಾಲಯಗಳಿಗೆ ಸರ್ಕಾರದಿಂದ ನೇಮಕ ಮಾಡಿರುವ ಸಿಂಡಿಕೇಟ್ ಸದಸ್ಯರ ಸಂಖ್ಯೆ ಎಷ್ಟು ಮತ್ತು ಯಾವ ಯಾವ ವಿಶ್ವವಿದ್ಯಾನಿಲಯಗಳಿಗೆ ಸಿಂಡಿಕೇಟ್ ಸದಸ್ಯರನ್ನು ನೇಮಕ ಮಾಡಲಾಗಿದೆ ; (ಮಾಹಿತಿಯನ್ನು ನೀಡುವುದು)

(ಈ) ಅತೀ ಹಿಂದುಳಿದ ಪ್ರವರ್ಗ–೧ರ ಜಾತಿಗಳ ಅಭ್ಯರ್ಥಿಗಳಿಗೆ ಎಷ್ಟು ವಿಶ್ವವಿದ್ಯಾಲಯಗಳಲ್ಲಿ ಸಿಂಡಿಕೇಟ್ ಸದಸ್ಯರನ್ನಾಗಿ ನೇಮಕ ಮಾಡಲಾಗಿದೆ ? (ಹೆಸರು, ಜಿಲ್ಲೆ ಮತ್ತು ವಿವರಗಳನ್ನು ನೀಡುವುದು)

## ಖಾಸಗಿ ITI ತರಬೇತಿ ಪಡೆಯುತ್ತಿರುವ Cat–೧ ವಿದ್ಯಾರ್ಥಿಗಳ ವಿದ್ಯಾರ್ಥಿ ವೇತನದ ಬಗ್ಗೆ

**ಶ್ರೀ ಡಿ.ಟಿ.ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೫೦೩ (೫೭೬) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಖಾಸಗಿ ITI ಗಳಲ್ಲಿ ತರಬೇತಿ ಪಡೆಯುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ವಿದ್ಯಾರ್ಥಿ ವೇತನದ ಹೆಚ್ಚಳದ ಬಗ್ಗೆ ಸರ್ಕಾರ ಕ್ರಮ ಕೈಗೊಂಡಿದೆಯೇ ; ಕೈಗೊಂಡಿದ್ದಲ್ಲಿ, ಸರ್ಕಾರದ ಕ್ರಮಗಳೇನು ;

(ಆ) ಸರ್ಕಾರಿ ಮತ್ತು ಖಾಸಗಿ ಐಟಿಐಗಳಲ್ಲಿ ತರಬೇತಿ ಪಡೆಯುತ್ತಿರುವ ಎಸ್.ಸಿ ಮತ್ತು ಎಸ್.ಟಿ ವಿದ್ಯಾರ್ಥಿಗಳಿಗೆ ಸರ್ಕಾರದಿಂದ ನೀಡುವ ಪರಿಕರಗಳನ್ನು ಸಕಾಲದಲ್ಲಿ ಒದಗಿಸುತ್ತಿದೆಯೇ ; ಒದಗಿಸಿದ್ದಲ್ಲಿ, ಯಾವ ಯಾವ ಸೌಲಭ್ಯಗಳನ್ನು ನೀಡಲಾಗುತ್ತಿದೆ ; (ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿರುವ ಖಾಸಗಿ ಐಟಿಐಗಳಲ್ಲಿ ತರಬೇತಿ ಪಡೆಯುತ್ತಿರುವ ವಿದ್ಯಾರ್ಥಿಗಳ ಅಖಿಲ ಭಾರತ ವೃತ್ತಿ ಪರೀಕ್ಷೆಯ (AITT) ಪ್ರಾಯೋಗಿಕ ಪರೀಕ್ಷೆಯ ಪರೀಕ್ಷಾ ಶುಲ್ಕವನ್ನು Online ನಲ್ಲಿ ಪಾವತಿಸಲು ಅವಕಾಶ ಕಲ್ಪಿಸುವ ಬಗ್ಗೆ ಸರ್ಕಾರ ಕ್ರಮಕೈಗೊಂಡಿದೆಯೇ ; ಕೈಗೊಂಡಿದ್ದಲ್ಲಿ, ತೆಗೆದುಕೊಂಡ ಕ್ರಮಗಳೇನು ?

## ಚಿತ್ರದುರ್ಗ ಜಿಲ್ಲೆ ಹಿರಿಯೂರು ಬೆಸ್ಕಾಂ ೨೦೨೨ರ ಸಮಸ್ಯೆಯ ಬಗ್ಗೆ

**ಶ್ರೀ ಡಿ.ಟಿ.ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೫೦೪ (೫೭೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿತ್ರದುರ್ಗ ಜಿಲ್ಲೆ ಹಿರಿಯೂರು ಬೆಸ್ಕಾಂ ವಿಭಾಗದಲ್ಲಿ ೨೦೨೨ ರಿಂದ ಇಲ್ಲಿಯವರೆಗೆ ನೋಂದಣಿಯಾದ ಅಕ್ರಮ ಸಕ್ರಮ ಯೋಜನೆಯ ಅರ್ಜಿಗಳು ಎಷ್ಟು ; ನೋಂದಣಿಯಾದ ಅರ್ಜಿಗಳಲ್ಲಿ ಎಷ್ಟು ಸಕ್ರಮ ಪಡಿಸಲಾಗಿದೆ ; ಇನ್ನು ಅನೇಕ ಅರ್ಜಿಗಳು ಬಾಕಿ ಇರಲು ಕಾರಣ ಏನು ;

(ಆ) ಚಿತ್ರದುರ್ಗ ಜಿಲ್ಲೆ ಹಿರಿಯೂರು ಬೆಸ್ಕಾಂ ವಿಭಾಗದಲ್ಲಿ ೨೦೨೨ ರಿಂದ ಇದುವರೆಗೆ ಎಷ್ಟು ಶೀಘ್ರ ಸಂಪರ್ಕ ಯೋಜನೆಯ ಅರ್ಜಿಗಳಿಗೆ ಕಾಮಗಾರಿ ಪೂರ್ಣಗೊಳಿಸಲಾಗಿದೆ ; ಈ ಕಾಮಗಾರಿಗಳಿಗೆ ಆದ ಒಟ್ಟು ವೆಚ್ಚ ಎಷ್ಟು ;

(ಇ) ಚಿತ್ರದುರ್ಗ ಜಿಲ್ಲೆ ಹಿರಿಯೂರು ಬೆಸ್ಕಾಂ ವಿಭಾಗದಲ್ಲಿ ೨೦೨೨ ರಿಂದ ಇಲ್ಲಿಯವರೆಗೆ ಎಷ್ಟು ಕಂದಾಯ ವಸೂಲಿ ಮಾಡಲಾಗಿದೆ ಮತ್ತು ಸಾಮಾನ್ಯ ನಿರ್ವಹಣೆಯಲ್ಲಿ ಎಷ್ಟು ವೆಚ್ಚದಲ್ಲಿ ಕಾಮಗಾರಿಗಳನ್ನು ನಿರ್ವಹಿಸಲಾಗಿದೆ ; (ಸದರಿ ಕಾಮಗಾರಿಗಳ ಮಾಹಿತಿ ನೀಡುವುದು)

(ಈ) ಚಿತ್ರದುರ್ಗ ಜಿಲ್ಲೆ ಹಿರಿಯೂರು ಬೆಸ್ಕಾಂ ವಿಭಾಗದಲ್ಲಿ ರೈತರಿಗೆ ಪದೇ ಪದೇ ವಿದ್ಯುತ್ ಓವರ್‌ಲೋಡ್ ಆಗುತ್ತಿದ್ದು, ಇದಕ್ಕೆ ಸರ್ಕಾರದಿಂದ ತೆಗೆದುಕೊಂಡ ಕ್ರಮವೇನು ;

(ಉ) ರೈತರ ಪರಿವರ್ತಕಗಳು ಪದೇ ಪದೇ ಸುಟ್ಟು ಹೋಗುತ್ತಿದ್ದು, ಇವುಗಳನ್ನು ಶೀಘ್ರದಲ್ಲಿ ಮರುಬಳಕೆ ಮಾಡಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ? (ಮಾಹಿತಿ ನೀಡುವುದು)

## ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ತಾಂತ್ರಿಕ ಶಿಕ್ಷಣ ಇಲಾಖೆಯಡಿಯಲ್ಲಿನ ಕಾಲೇಜುಗಳ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :–**

೫೦೫ (೫೮೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾಲೇಜು ಶಿಕ್ಷಣ ಹಾಗೂ ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ಸರ್ಕಾರಿ ಇಂಜಿನಿಯರಿಂಗ್, ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜುಗಳ ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಸಂಖ್ಯೆ ಎಷ್ಟು ; (ಹೆಸರು, ವಿಳಾಸದೊಂದಿಗೆ ವಿವರ ನೀಡುವುದು)

(ಆ) ಸದರಿ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಸದರಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಕಾಲೇಜುವಾರು ವಿವರ ನೀಡುವುದು)

(ಈ) ಇತ್ತೀಚೆಗೆ ಕಾಲೇಜುಗಳಲ್ಲಿ ಡ್ರಗ್, ಗಾಂಜಾ, ಅಫೀಮು ಇನ್ನಿತರೆ ಅಮಲು ಪದಾರ್ಥಗಳನ್ನು ಸೇವನೆ ಮಾಡುತ್ತಿರುವುದಾಗಿ ತಿಳಿದು ಬಂದಿದ್ದು, ಇದರ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಉ) ಸಾಮಾಜಿಕ ಮಾಧ್ಯಮಗಳಿಂದ ಕಾಲೇಜು ವಿದ್ಯಾರ್ಥಿಗಳ ಮೇಲೆ ಆಗುತ್ತಿರುವ ದುಷ್ಪರಿಣಾಮಗಳ ಬಗ್ಗೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ? (ವಿವರ ನೀಡುವುದು)

## ರಾಜ್ಯದ ಅರಣ್ಯದಲ್ಲಿ ಸಫಾರಿಯ ಆದಾಯ ಮತ್ತು ಪ್ರಾರಂಭದ ಬಗ್ಗೆ

**ಶ್ರೀ ಶಿವಕುಮಾರ್ ಕೆ (ನಾಮನಿರ್ದೇಶನ ಹೊಂದಿದವರು) :–**

೫೦೬ (೫೮೨) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಅಭಯಾರಣ್ಯ ಪ್ರದೇಶದಲ್ಲಿ ಸಫಾರಿ ಚಾಲ್ತಿಯಲ್ಲಿದೆ ; ಎಷ್ಟು ಅಭಯಾರಣ್ಯ ಪ್ರದೇಶದಲ್ಲಿ ಸಫಾರಿ ನಿಷೇಧಿಸಲಾಗಿದೆ ;

(ಆ) ಸಫಾರಿಯಿಂದ ಸರ್ಕಾರಕ್ಕೆ ಬರುತ್ತಿದ್ದ ವಾರ್ಷಿಕ ಆದಾಯವೆಷ್ಟು ; ಪ್ರಸ್ತುತ ಸಫಾರಿ ನಿಷೇಧಿಸಿರುವುದರಿಂದ ಸರ್ಕಾರಕ್ಕೆ ಆದಾಯದಲ್ಲಿ ಆಗಿರುವ ನಷ್ಟವೆಷ್ಟು ;

(ಇ) ಬಂಡೀಪುರ ಮತ್ತು ನಾಗರಹೊಳೆ ಅಭಯಾರಣ್ಯ ಪ್ರದೇಶದಲ್ಲಿ ನಿಷೇಧಿಸಲಾಗಿರುವ ಸಫಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು ?

## ಸರ್ಕಾರಿ ಆಸ್ಪತ್ರೆಗಳ ಯೋಜನೆ, ಔಷಧಿ ಮತ್ತು ಗೋದಾಮಿನ ಬಗ್ಗೆ

**ಶ್ರೀ ಶಿವಕುಮಾರ್ ಕೆ (ನಾಮನಿರ್ದೇಶನ ಹೊಂದಿದವರು) :–**

೫೦೭ (೫೮೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆಯುಷ್ಮಾನ್ ಭಾರತ್ ಆರೋಗ್ಯ ಯೋಜನೆಯು ರಾಜ್ಯದಲ್ಲಿ ಜಾರಿಯಾಗಿದೆಯೇ ; ಆಗಿದ್ದಲ್ಲಿ, ಈ ಯೋಜನೆಯಡಿ ಕಳೆದ ಎರಡು ವರ್ಷಗಳಿಂದ ಎಷ್ಟು ರೋಗಿಗಳು ಉಪಯೋಗ ಪಡೆದಿದ್ದಾರೆ ;

(ಆ) ಈ ಯೋಜನೆಯಡಿ ಖಾಸಗಿ ಆಸ್ಪತ್ರೆಯಲ್ಲಿ ಹೆಚ್ಚಿನ ಚಿಕಿತ್ಸೆ ಪಡೆಯಲು referal letter ಅಗತ್ಯವಿದೆಯೇ ; ಈ ಪದ್ಧತಿಯನ್ನು ಕೈಬಿಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಇ) ಸರ್ಕಾರಿ ಆಸ್ಪತ್ರೆಗಳಲ್ಲಿ ಕಡ್ಡಾಯವಾಗಿ ಲಭ್ಯವಾಗುವ ಔಷಧಿಗಳ ಪಟ್ಟಿ ಯಾವುದು ; ಪ್ರಸ್ತುತ ಎಷ್ಟು ಬಗೆಯ ಔಷಧಿಗಳು ಲಭ್ಯವಾಗುತ್ತಿವೆ ; ಎಲ್ಲಾ ಜಿಲ್ಲೆಗಳ ಗೋದಾಮುಗಳಲ್ಲಿ ಸಂಗ್ರಹವಿರುವ ಔಷಧಿಗಳ ಶೇಖರಣೆ ಎಷ್ಟು ? (ವಿವರ ನೀಡುವುದು)

## ಚಾಮರಾಜನಗರ ಮತ್ತು ಮಂಡ್ಯ ಜಿಲ್ಲೆಯ ವಿಶ್ವವಿದ್ಯಾನಿಲಯಗಳ ಬಗ್ಗೆ

**ಶ್ರೀ ಶಿವಕುಮಾರ್ ಕೆ (ನಾಮನಿರ್ದೇಶನ ಹೊಂದಿದವರು) :–**

೫೦೮ (೫೮೪) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಾಮರಾಜನಗರ ಮತ್ತು ಮಂಡ್ಯ ವಿಶ್ವವಿದ್ಯಾನಿಲಯದಲ್ಲಿ ಎಷ್ಟು ಬೋಧಕ, ಬೋಧಕೇತರ ಸಿಬ್ಬಂದಿ ಸೇವೆ ಸಲ್ಲಿಸುತ್ತಿದ್ದಾರೆ ಹಾಗೂ ಎಷ್ಟು ಮಂದಿ ವಿದ್ಯಾರ್ಥಿಗಳು ಕಲಿಯುತ್ತಿದ್ದಾರೆ ; (ವಿಭಾಗವಾರು ಮಾಹಿತಿ ಒದಗಿಸುವುದು)

(ಆ) ಈ ವಿಶ್ವವಿದ್ಯಾನಿಲಯಗಳಿಗೆ ಸರ್ಕಾರದಿಂದ ಒದಗಿಸಿರುವ ಸವಲತ್ತುಗಳು ಹಾಗೂ ಎಷ್ಟು ಅನುದಾನ ನೀಡಲಾಗಿದೆ ; (ಮಾಹಿತಿ ಒದಗಿಸುವುದು)

(ಇ) ಮಂಡ್ಯ, ಚಾಮರಾಜನಗರ ಹಾಗೂ ಇನ್ನಿತರೆ ಹೊಸ ವಿಶ್ವವಿದ್ಯಾನಿಲಯಗಳನ್ನು ವಿಲೀನಗೊಳಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ ; ಇದ್ದರೆ, ಯಾವ ಹಂತದಲ್ಲಿದೆ ?

## ಕಾನೂನು ಮತ್ತು ಮಾಪನ ಶಾಸ್ತ್ರ ಇಲಾಖೆಯಲ್ಲಿನ ಪ್ರಕರಣಗಳ ಬಗ್ಗೆ

**ಶ್ರೀ ಶಿವಕುಮಾರ್ ಕೆ (ನಾಮನಿರ್ದೇಶನ ಹೊಂದಿದವರು) :–**

೫೦೯ (೫೮೫) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾನೂನು ಮತ್ತು ಮಾಪನ ಶಾಸ್ತ್ರ ಇಲಾಖೆಯಡಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳು ಹಾಗೂ ಸಿಬ್ಬಂದಿ ಸಂಖ್ಯೆ ಎಷ್ಟು; ೨೦೧೫–೧೬ ನೇ ಸಾಲಿನಲ್ಲಿ ರಾಜ್ಯದಲ್ಲಿ ಎಷ್ಟು ಪರಿಶೀಲನೆ ಮಾಡಲಾಗಿದೆ ; ಎಷ್ಟು ಪ್ರಕರಣಗಳು ದಾಖಲಾಗಿವೆ ಹಾಗೂ ಎಷ್ಟು ದಂಡದ ಮೊತ್ತ ಸಂಗ್ರಹವಾಗಿದೆ ;

(ಆ) ಕಾನೂನು ಮತ್ತು ಮಾಪನ ಶಾಸ್ತ್ರ ಇಲಾಖೆಯಿಂದ ಸರ್ಕಾರಕ್ಕೆ ಬರುತ್ತಿರುವ ವಾರ್ಷಿಕ ಆದಾಯ ಎಷ್ಟು ;

(ಇ) ಕಾನೂನ ಮತ್ತು ಮಾಪನ ಶಾಸ್ತ್ರ ಇಲಾಖೆಯನ್ನು ಕೇಂದ್ರ ಸರ್ಕಾರವು ಖಾಸಗೀಕರಣ ಮಾಡುತ್ತಿರುವ ಮಾಹಿತಿ ರಾಜ್ಯ ಸರ್ಕಾರದ ಗಮನದಲ್ಲಿದೆಯೇ ; ಖಾಸಗೀಕರಣ ಮಾಡಿದರೆ ರಾಜ್ಯ ಸರ್ಕಾರದ ಬೊಕ್ಕಸಕ್ಕೆ ಉಂಟಾಗುವ ನಷ್ಟ ಎಷ್ಟು ?

## ಸರ್ಕಾರಿ ಶಾಲಾ ಮಕ್ಕಳಿಂದ ಶಾಲೆಗಳಲ್ಲಿ ಕೆಲಸ ಮಾಡಿಸಿಕೊಳ್ಳುತ್ತಿರುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೫೧೦ (೫೯೨) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಮಖಂಡಿ ತಾಲ್ಲೂಕು ಆಲಬಾಳ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮಕ್ಕಳು ಕೊಳಚೆ ನೀರಿನಲ್ಲಿ ಊಟದ ತಟ್ಟೆ ತೊಳೆಯುವ ದೃಶ್ಯ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದ್ದ ಪ್ರಕರಣ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಪ್ರಕರಣದಲ್ಲಿ ಭಾಗಿಯಾಗಿರುವ ಸಿಬ್ಬಂದಿ ಮತ್ತು ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮವೇನು ;

(ಇ) ಸರ್ಕಾರಿ ಶಾಲಾ ಮಕ್ಕಳಿಂದ ಶಾಲೆಗಳಲ್ಲಿ ಕೆಲಸ ಮಾಡಿಸಿಕೊಳ್ಳುತ್ತಿರುವ ಬಗ್ಗೆ ದೂರುಗಳು ದಾಖಲಾಗಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಎಷ್ಟು ದೂರುಗಳು ದಾಖಲಾಗಿವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಇಂತಹ ದೂರುಗಳನ್ನು ಇತ್ಯರ್ಥ ಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಅನರ್ಹ ಪಡಿತರ ಚೀಟಿಗಳನ್ನು ಗುರುತಿಸುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೫೧೧ (೫೯೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಹಾಗೂ ರಾಜ್ಯ ಸರ್ಕಾರ ಗುರುತಿಸಿದ ಅನರ್ಹ ಪಡಿತರ ಚೀಟಿಗಳ ಪರಿಶೀಲನಾ ಕಾರ್ಯದಲ್ಲಿ ಎಷ್ಟು ಪಡಿತರ ಚೀಟಿಗಳನ್ನು ಅನರ್ಹ ಎಂದು ಗುರುತಿಸಲಾಗಿದೆ ;

(ಆ) ಈ ಕಾರ್ಯದಲ್ಲಿನ ಸಾಕಷ್ಟು ಬಡ, ಮಧ್ಯಮ ವರ್ಗದ ಬಿಪಿಎಲ್ ಪಡಿತರ ಚೀಟಿ ರದ್ದಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದುವರೆಗೊ ಎಷ್ಟು ನೈಜ ಬಿಪಿಎಲ್ ಕಾರ್ಡ್‌ಗಳನ್ನು ರದ್ದು ಮಾಡಲಾಗಿದೆ ;

(ಇ) ಸರ್ಕಾರಿ ನೌಕರರು ಸಹ ಬಿಪಿಲ್ ಪಡಿತರ ಚೀಟಿಯನ್ನು ಪಡೆದಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಂತಹವರ ವಿರುದ್ಧ ಸರ್ಕಾರ ಯಾವ ರೀತಿ ಕ್ರಮ ಕೈಗೊಂಡಿದೆ ? (ವಿವರ ನೀಡುವುದು)

## ರಾಜ್ಯದಲ್ಲಿ ಹೊಸ ಪಡಿತರ ಚೀಟಿಯನ್ನು ವಿತರಣೆ ಮಾಡುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೫೧೨ (೫೯೪) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಿಂದ ರಾಜ್ಯದಲ್ಲಿ ಹೊಸ ಪಡಿತರ ಚೀಟಿ ಪಡೆಯಲು ಎಷ್ಟು ಅರ್ಜಿಗಳು ಸ್ವೀಕೃತವಾಗಿವೆ ; ಇದರಲ್ಲಿ ಎಷ್ಟು ಜನರಿಗೆ ಹೊಸ ಪಡಿತರ ಚೀಟಿಯನ್ನು ವಿತರಿಸಲಾಗಿದೆ ; ಇಲ್ಲದಿದ್ದಲ್ಲಿ, ಯಾವಾಗ ವಿತರಿಸಲಾಗುವುದು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಪಡಿತರ ಅಂಗಡಿಗಳ ಮೂಲಕ ಪೌಷ್ಠಿಕ ಆಹಾರ ನೀಡಲು ಸರ್ಕಾರ ಕ್ರಮ ಕೈಗೊಂಡಿದೆಯೇ ; ಕೈಗೊಂಡಿದ್ದಲ್ಲಿ, ಸರ್ಕಾರ ಈ ಸಂಬಂಧ ಯಾವ ಯೋಜನೆಯನ್ನು ಕೈಗೊಳ್ಳಲಿದೆ ; ಈ ಯೋಜನೆಗೆ ಸರ್ಕಾರ ಎಷ್ಟು ಅನುದಾನ ನಿಗದಿಪಡಿಸಿದೆ ; ಈ ಯೋಜನೆಯು ಯಾವಾಗ ಪ್ರಾರಂಭವಾಗುವುದು ?

## ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ದೈಹಿಕ ಶಿಕ್ಷಕರನ್ನು ನೇಮಕ ಮಾಡುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೫೧೩ (೫೯೫) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರಿ ಪ್ರಾಥಮಿಕ ಪ್ರೌಢ ಶಾಲೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ದೈಹಿಕ ಶಿಕ್ಷಕರ ನೇಮಕಕ್ಕೆ ಆರ್ಥಿಕ ಇಲಾಖೆ ಅನುಮೋದನೆ ನೀಡಿದ್ದರೂ, ಇನ್ನೂ ನೇಮಕಾತಿ ಪ್ರಕ್ರಿಯೆ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ನೇಮಕಾತಿ ಪ್ರಕ್ರಿಯೆ ಯಾವಾಗ ಪ್ರಾರಂಭ ಮಾಡಲಾಗುವುದು ;

(ಆ) ಶಾಲಾ ಶಿಕ್ಷಣ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇಮಕಾತಿ ಅಥವಾ ಬಡ್ತಿ ಮೂಲಕ ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು ?

## ಆಯುಷ್ ಇಲಾಖೆಯಲ್ಲಿ ಔಷಧಿಗಳ ಖರೀದಿಯಲ್ಲಿನ ಭ್ರಷ್ಟಾಚಾರದ ಬಗ್ಗೆ

**ಶ್ರೀ ವೈ.ಎಂ.ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೧೪ (೫೯೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆಯುಷ್ ಇಲಾಖೆಯಲ್ಲಿ ಔಷಧಿಗಳ ಖರೀದಿಯನ್ನು ಮಾಡಲು ಇರುವ ಕಾನೂನು ಮತ್ತು ಮಾನದಂಡಗಳೇನು ; ಯಾವ ಆಧಾರದ ಮೇಲೆ ಯಾವ ಹುದ್ದೆಯ ಅಧಿಕಾರಿ, ಯಾವ ಆಧಾರದ ಮೇಲೆ ಔಷಧಿಗಳನ್ನು ಖರೀದಿ ಮಾಡುವರು ; (ಸರ್ಕಾರಿ ಆದೇಶದ ಪ್ರತಿಗಳೊಂದಿಗೆ ಮಾಹಿತಿ ಒದಗಿಸುವುದು)

(ಆ) ಆಯುಷ್ ಇಲಾಖೆಯ ಔಷಧಿಗಳ ಖರೀದಿಯಲ್ಲಿ ಗುಣಮಟ್ಟವಿಲ್ಲದ ಮತ್ತು ಭ್ರಷ್ಟಾಚಾರ ಮಾಡಿ ಕಡಿಮೆ ಗುಣಮಟ್ಟದ ಔಷಧಿಯನ್ನು ಖರೀದಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಪೂರ್ಣ ಮಾಹಿತಿ ಒದಗಿಸುವುದು)

(ಇ) ಇತ್ತೀಚೆಗೆ ಗದಗ ಜಿಲ್ಲೆಯ ಆಯುಷ್ ಅಧಿಕಾರಿಯವರು ಸರಬರಾಜು ಮಾಡಿದ ಕಂಪನಿಯವರೊಂದಿಗೆ ಮಾತನಾಡಿರುವ ಆಡಿಯೋದಲ್ಲಿ ೩೦% ಕಮೀಷನ್ ನೀಡುವ ಕುರಿತು ಮಾತನಾಡಿರುವ ಪ್ರಕರಣ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದರ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ವಿವರಗಳನ್ನು ಒದಗಿಸುವುದು)

(ಈ) ರಾಜ್ಯದಲ್ಲಿ ಆಯುಷ್ ಇಲಾಖೆಯಲ್ಲಿ ಪಾರದರ್ಶಕವಾಗಿ ಗುಣಮಟ್ಟದ ಔಷಧಿಯನ್ನು ಖರೀದಿ ಮಾಡಲು ಸರ್ಕಾರದ ಸೂಕ್ತ ಕ್ರಮಗಳೇನು ; ಯಾವ ಕಾಲಮಿತಿಯಲ್ಲಿ ಮಾಡಲಾಗುವುದು ? (ವಿವರಗಳೊಂದಿಗೆ ಮಾಹಿತಿ ನೀಡುವುದು)

## ನಕಲಿ ಅಂಗವಿಕಲ ಪ್ರಮಾಣ ಪತ್ರ ನೀಡುತ್ತಿರುವ ವೈದ್ಯರುಗಳ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೧೫ (೫೯೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಂಗವಿಕಲರಿಗೆ ನೀಡುವ ಪಿಂಚಣಿ ಹಣಕ್ಕಾಗಿ ನಕಲಿ ಅಂಗವಿಕಲ ಪ್ರಮಾಣ ಪತ್ರಗಳನ್ನು ಆರೋಗ್ಯ ಇಲಾಖೆಯಲ್ಲಿನ ವೈದ್ಯರುಗಳು ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅವರುಗಳ ಮೇಲೆ ಸರ್ಕಾರ ಕೈಗೊಂಡ ಕಾನೂನು ಕ್ರಮಗಳೇನು ;

(ಆ) ಕಳೆದ ಐದು ವರ್ಷಗಳಲ್ಲಿ ಅನರ್ಹರಿಗೆ ಅಂಗವಿಕಲ ಪ್ರಮಾಣ ಪತ್ರಗಳನ್ನು ನೀಡಿರುವ ಪ್ರಕರಣಗಳು ಎಷ್ಟು ; ಅವರುಗಳ ಮೇಲೆ ಕಾನೂನು ಕ್ರಮ ಕೈಗೊಂಡ ಪ್ರಕರಣಗಳೆಷ್ಟು ; (ಸಂಪೂರ್ಣ ಆದೇಶ ಪ್ರತಿಗಳೊಂದಿಗೆ ವಿವರಗಳನ್ನು ಒದಗಿಸುವುದು)

(ಇ) ವಿಜಯಪುರ ಜಿಲ್ಲೆ, ಇಂಡಿ ತಾಲ್ಲೂಕಿನಲ್ಲಿ ಅಕ್ರಮವಾಗಿ/ ಅನುಮಾನಸ್ಪದವಾಗಿ ಅಂಗವಿಕಲ ಪ್ರಮಾಣ ಪತ್ರಗಳನ್ನು ಪಡೆದು ಪಿಂಚಣಿ ಪಡೆಯುತ್ತಿರುವ ಪ್ರಕರಣ ಕಂಡು ಬಂದಿದ್ದು, ಇದಕ್ಕೆ ಕಂದಾಯ ಇಲಾಖೆ ವತಿಯಿಂದ ತನಿಖೆ ನಡೆಸಲಾಗುತ್ತಿದೆಯೇ ; ನಕಲಿ ಅಂಗವಿಕಲರುಗಳಿಗೆ ಪ್ರಮಾಣ ಪತ್ರ ನೀಡಿರುವವರುಗಳ ಮೇಲೆ ತನಿಖೆ ನಡೆಸಿ ಕಾನೂನಿನ ಕಠಿಣ ಕ್ರಮ ಕೈಗೊಳ್ಳಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದ ಐದು ವಿದ್ಯುತ್ ಕಂಪನಿಗಳು ನಷ್ಟದಲ್ಲಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೧೬ (೫೯೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಐದು ವಿದ್ಯುತ್ ಸರಬರಾಜು ಕಂಪನಿಗಳು ತೀವ್ರ ಆರ್ಥಿಕ ಸಂಕಷ್ಟದ ಸುಳಿಗೆ ಸಿಲುಕಿರುವುದು ನಿಜವೇ ಸರ್ಕಾರದಿಂದ ಪಾವತಿಯಲ್ಲಿ ಕೊರತೆಯಾಗುವ ಮೊತ್ತ ಸರಿದೂಗಿಸಿಕೊಳ್ಳಲು ಐದು ಕಂಪನಿಗಳು ಸಾಲದ ಮೊರೆ ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯ ಸರ್ಕಾರವು ಕೇಂದ್ರ ಸರ್ಕಾರಕ್ಕೆ ಒದಗಿಸಿರುವ ಮಾಹಿತಿಯಂತೆ ಎಸ್ಕಾಂಗಳ ಒಟ್ಟು ಸಾಲದ ಮೊತ್ತ ೪೫ ಸಾವಿರ ಕೋಟಿ ರೂ. ದಾಟಿದೆ ; ಈ ಪೈಕಿ ಬೆಸ್ಕಾಂ ಅತ್ಯಧಿಕ ೧೯,೦೨೯ ಕೋಟಿ ರೂ. ಕೆಪಿಸಿಎಲ್ ಗೆ ಬರಬೇಕಾದ ಬಾಕಿ ಮೊತ್ತ ೧೯ ಸಾವಿರ ಕೋಟಿ ರೂ. ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಇದಕ್ಕೆ ಯಾರು ಹೊಣೆ ; ಯಾವ ಕಾರಣಗಳಿಂದ ಈ ಪರಿಸ್ಥಿತಿ ಎದುರಾಗಿದೆ ;

(ಇ) ಸರ್ಕಾರದ ನಗರಾಭಿವೃದ್ಧಿ ಇಲಾಖೆ, ಸ್ಥಳೀಯ ಸಂಸ್ಥೆಗಳು ಹಾಗೂ ಸರ್ಕಾರಿ ಸಂಸ್ಥೆಗಳಿಂದ ಇದುವರೆಗೂ ಎಷ್ಟು ವಿದ್ಯುತ್ ಬಾಕಿ ಉಳಿಸಿಕೊಂಡಿದೆ ; ಇದರ ವಸೂಲಿಗೆ ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಈ) ರಾಜ್ಯದ 5 ವಿದ್ಯುತ್ ವಿತರಣೆ ಕಂಪನಿಗಳು ಸಾಲ ಮತ್ತು ನಷ್ಟ ಅನುಭವಿಸುತ್ತಿದ್ದು, ಸರ್ಕಾರವು ಸಕಾಲಕ್ಕೆ ಸಹಾಯಧನ ಪಾವತಿಸದೇ ಇರಲು ಕಾರಣಗಳೇನು ?

## ರೈತರ ಮಕ್ಕಳಿಗೆ ಶೈಕ್ಷಣಿಕ ವೆಚ್ಚವನ್ನು ನೀಡುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೧೭ (೬೦೦) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬರ ಪರಿಸ್ಥಿತಿಯಿಂದ ಆತ್ಮಹತ್ಯೆ ಮಾಡಿಕೊಂಡ ರೈತರ ಮಕ್ಕಳಿಗೆ ಶೈಕ್ಷಣಿಕ ವೆಚ್ಚವನ್ನು ಸರ್ಕಾರದಿಂದಲೇ ಭರಿಸಲಾಗುತ್ತಿದೆಯೇ ;

(ಆ) ಹಾಗಿದ್ದರೆ, ಕಳೆದ ೦೫ ವರ್ಷಗಳಿಂದ ಇಲ್ಲಿಯವರೆಗೂ ಎಷ್ಟು ವಿದ್ಯಾರ್ಥಿಗಳಿಗೆ ಶೈಕ್ಷಣಿಕ ವೆಚ್ಚವನ್ನು ಭರಿಸಲಾಗಿದೆ, ಸರ್ಕಾರದಿಂದ ಎಷ್ಟು ಹಣವನ್ನು ಒದಗಿಸಿದೆ ಹಾಗೂ ಎಷ್ಟು ಬಾಕಿ ಇದೆ ; (ವಿವರ ಒದಗಿಸುವುದು)

(ಇ) ರಾಜ್ಯದಲ್ಲಿ ಶೈಕ್ಷಣಿಕ ವೆಚ್ಚದ ಪರಿಹಾರ ನೀಡುವ ಯೋಜನೆಯು ಯಾವ ವರ್ಷದಿಂದ ಪ್ರಾರಂಭಗೊಂಡಿದೆ ಹಾಗೂ ಇದರ ಉದ್ದೇಶವೇನು ;

(ಈ) ಕಳೆದ ೦೮ ವರ್ಷದಿಂದ ಇಲ್ಲಿಯವರೆಗೂ ಶೈಕ್ಷಣಿಕ ವೆಚ್ಚಕ್ಕಾಗಿ ಎಷ್ಟು ಅರ್ಜಿಗಳು ಸ್ವೀಕೃತವಾಗಿದೆ ; ಎಷ್ಟು ಅರ್ಜಿಗಳು ತಿರಸ್ಕಾರಗೊಂಡಿದೆ ಹಾಗೂ ಅರ್ಹತೆ ಹೊಂದಲು ಇರುವ ಮಾನದಂಡವೇನು ?

## ಕೌನ್ಸಿಲಿಂಗ್ ಮೂಲಕ ವರ್ಗಾವಣೆಗೊಂಡ ಶಾಲಾ ಶಿಕ್ಷಕರನ್ನು ಬಿಡುಗಡೆ ಮಾಡುವ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೧೮ (೬೦೧) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚೆಗೆ ಕೌನ್ಸಿಲಿಂಗ್ ಮೂಲಕ ವರ್ಗಾವಣೆಗೊಂಡ ಶಿಕ್ಷಕರನ್ನು ಬಿಡುಗಡೆ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ವರ್ಗಾವಣೆಗೊಂಡರೂ ಬಿಡುಗಡೆ ಮಾಡದೇ ಇರಲು ಕಾರಣವೇನು ;

(ಇ) ವರ್ಗಾವಣೆಗೊಂಡ ಶಿಕ್ಷಕರನ್ನು ಯಾವಾಗ ಬಿಡುಗಡೆ ಮಾಡಲಾಗುವುದು ?

## ರಾಜ್ಯದ ಸರ್ಕಾರಿ ಪದವಿ ಮಹಾವಿದ್ಯಾಲಯಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಕುರಿತು

**ಶ್ರೀ ಎಸ್.ವ್ಹಿ.ಸಂಕನೂರ (ಪದವೀಧರರ ಕ್ಷೇತ್ರ) :–**

೫೧೯ (೬೦೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨೦೨೪–೨೫ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ರಾಜ್ಯದ ವಿವಿಧ ಸರ್ಕಾರಿ ಪದವಿ ಮಹಾವಿದ್ಯಾಲಯಗಳಲ್ಲಿ ಒಟ್ಟು ಎಷ್ಟು ಅತಿಥಿ ಉಪನ್ಯಾಸಕರು ಕಾರ್ಯನಿರ್ವಹಿಸುತ್ತಿದ್ದರು ; (ವಿಷಯವಾರು ಮಾಹಿತಿ ನೀಡುವುದು)

(ಆ) ಯು.ಜಿ.ಸಿ. ನಿಯಮಾವಳಿಯಂತೆ ನಿಗದಿಪಡಿಸಿದ ವಿದ್ಯಾರ್ಹತೆಯ ಹಿನ್ನೆಲೆಯಲ್ಲಿ ೨೦೨೫–೨೬ನೇ ಶೈಕ್ಷಣಿಕ ವರ್ಷದಲ್ಲಿ ಹಿಂದೆ ಕಾರ್ಯನಿರ್ವಹಿಸುತ್ತಿದ್ದ ಎಷ್ಟು ಅತಿಥಿ ಉಪನ್ಯಾಸಕರು ಉದ್ಯೋಗವನ್ನು ಕಳೆದುಕೊಂಡಿದ್ದಾರೆ ; (ವಿಷಯವಾರು ಮಾಹಿತಿ ನೀಡುವುದು)

(ಇ) ಉದ್ಯೋಗ ಕಳೆದುಕೊಂಡ ನಾನ್–ಯು.ಜಿ.ಸಿ. ಅತಿಥಿ ಉಪನ್ಯಾಸಕರನ್ನು ಪುನ: ಸೇವೆಗೆ ತೆಗೆದುಕೊಳ್ಳಲು ಸರ್ಕಾರ ಚಿಂತನೆ ನಡೆಸಿದೆಯೇ ; ಹಾಗಿದ್ದಲ್ಲಿ, ಯಾವ ರೀತಿಯ ಕ್ರಮ ಕೈಗೊಳ್ಳಲಾಗುವುದು ? (ವಿವರವಾದ ಮಾಹಿತಿ ನೀಡುವುದು)

# ರಾಜ್ಯದಲ್ಲಿ ಸರ್ಕಾರಿ ಶಾಲೆಗಳು ಮುಚ್ಚಿರುವ ಹಾಗೂ ಶಿಕ್ಷಕರ ಖಾಲಿ ಹುದ್ದೆಗಳನ್ನು ತುಂಬುವ ಕುರಿತು

**ಶ್ರೀ ಎಸ್.ವ್ಹಿ.ಸಂಕನೂರ (ಪದವೀಧರರ ಕ್ಷೇತ್ರ) :–**

೫೨೦ (೬೦೪) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೪ ವರ್ಷಗಳಲ್ಲಿ (೨೦೨೨–೨೬) ಸಾಕಷ್ಟು ಸರ್ಕಾರಿ ಪ್ರಾಥಮಿಕ ಶಾಲೆಗಳು ಮುಚ್ಚಿರುತ್ತವೆ ಎಂದು ವರದಿಯಾಗಿರುವುದು ನಿಜವೇ ; (ಶೈಕ್ಷಣಿಕ ವರ್ಷವಾರು ಮಾಹಿತಿ ನೀಡುವುದು)

(ಆ) ಕಳೆದ ೪ ವರ್ಷಗಳಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಹಾಗೂ ಖಾಸಗಿ ಶಾಲೆಗಳಿಗೆ ಒಟ್ಟು ಎಷ್ಟು ವಿದ್ಯಾರ್ಥಿಗಳು ಪ್ರವೇಶ ಪಡೆದಿದ್ದಾರೆ ; (ವರ್ಷವಾರು ಮಾಹಿತಿ ನೀಡುವುದು)

(ಇ) ಸರ್ಕಾರಿ ಶಾಲೆಗಳನ್ನು ಮುಚ್ಚಲು ಕಾರಣಗಳೇನು ಎಂಬುದರ ಕುರಿತು ಶಾಲಾ ಶಿಕ್ಷಣ ಅಧ್ಯಯನ ಮಾಡಿದೆಯೇ ; ಮಾಡಿದ್ದಲ್ಲಿ, ಸಂಪೂರ್ಣ ಮಾಹಿತಿ ಒದಗಿಸುವುದು ;

(ಈ) ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಇಂದಿನವರೆಗೆ ಎಷ್ಟು ಹುದ್ದೆಗಳು ನಿವೃತ್ತಿ, ರಾಜಿನಾಮೆ ಹಾಗೂ ಪದೋನ್ನತಿಯಿಂದ ಖಾಲಿಯಾಗಿವೆ ; ಈ ರೀತಿ ಖಾಲಿ ಇರುವ ಹುದ್ದೆಗಳಲ್ಲಿ ಎಷ್ಟು ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ನೇಮಕಾತಿ ಮಾಡಿಕೊಳ್ಳಲು ಸರ್ಕಾರ ಕ್ರಮಕ್ಕೈಗೊಂಡಿದೆ ? (ಮಾಹಿತಿ ನೀಡುವುದು)

## ರಾಜ್ಯದಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳ ಬಗ್ಗೆ

**ಶ್ರೀ ರಾಮೋಜಿ ಗೌಡ (ಪದವೀಧರರ ಕ್ಷೇತ್ರ) :–**

೫೨೧ (೬೦೬) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಶಿಕ್ಷಕರ ಹುದ್ದೆಗಳು ಖಾಲಿ ಇವೆ ; (ವಿವರ ನೀಡುವುದು)

(ಆ) ಶಿಕ್ಷಕರ ನೇಮಕಾತಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ವಿಳಂಬಕ್ಕೆ ಕಾರಣಗಳೇನು ; (ವಿವರ ನೀಡುವುದು)

(ಇ) ಸರ್ಕಾರವು ಪ್ರತಿ ವರ್ಷ ಎಷ್ಟು ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳುತ್ತಿದೆ ; (ವಿವರ ನೀಡುವುದು)

(ಈ) ಶಿಕ್ಷಕರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕೆ.ಪಿ.ಟಿ.ಸಿ.ಎಲ್.ನಲ್ಲಿ ಬಾಕಿ ಇರುವ ನೇಮಕಾತಿ ಅಧಿಸೂಚನೆಗಳ ಬಗ್ಗೆ

**ಶ್ರೀ ರಾಮೋಜಿ ಗೌಡ (ಪದವೀಧರರ ಕ್ಷೇತ್ರ) :–**

೫೨೨ (೬೦೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ಕೆ.ಪಿ.ಟಿ.ಸಿ.ಎಲ್‌ನಲ್ಲಿ ಬಾಕಿ ಇರುವ ನೇಮಕಾತಿ ಅಧಿಸೂಚನೆಗಳ ಸ್ಥಿತಿ ಏನು ; (ಮಾಹಿತಿ ನೀಡುವುದು)

(ಆ) ಕೆ.ಪಿ.ಟಿ.ಸಿ.ಎಲ್.ನಲ್ಲಿ ತಾಂತ್ರಿಕ ಸಿಬ್ಬಂದಿ ಮತ್ತು ಇಂಜಿನಿಯರ್‌ಗಳು ಇರುವುದರಿಂದ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ನಿರುದ್ಯೋಗ ಸಮಸ್ಯೆ ಕಡಿಮೆ ಮಾಡಲು ಕೆ.ಪಿ.ಟಿ.ಸಿ.ಎಲ್‌ನಲ್ಲಿ ಯಾವ ಹೊಸ ಯೋಜನೆಗಳನ್ನು ಸರ್ಕಾರ ಕೈಗೊಂಡಿದೆ ; (ವಿವರ ನೀಡುವುದು)

(ಈ) ವಿದ್ಯುತ್ ಕ್ಷೇತ್ರದಲ್ಲಿ ಕೌಶಲ್ಯ ತರಬೇತಿ ನೀಡಿದರೆ ಉದ್ಯೋಗಾವಕಾಶ ಹೆಚ್ಚಿಸುವುದಕ್ಕೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ಮತ್ತು ಯೋಜನೆ ಯಾವುವು ?

## ರೆವಿನ್ಯೂ ನಿವೇಶನಗಳಲ್ಲಿ ವಿದ್ಯುತ್ ಸಂಪರ್ಕ ನಿರಾಕರಿಸುತ್ತಿರುವ ಬಗ್ಗೆ

**ಶ್ರೀ ರಾಮೋಜಿ ಗೌಡ (ಪದವೀಧರರ ಕ್ಷೇತ್ರ) :–**

೫೨೩ (೬೦೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೆವಿನ್ಯೂ ನಿವೇಶನಗಳಲ್ಲಿ ೬೦x೪೦ ಅಳತೆ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ನಿರಾಕರಿಸುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮಾನವೀಯ ಮತ್ತು ನ್ಯಾಯಯುತ ಆಧಾರದ ಮೇಲೆ ಅಂತಹ ಪ್ರದೇಶಗಳ ನಿವಾಸಿಗಳಿಗೆ ಗೃಹಬಳಕೆಯ ವಿದ್ಯುತ್ ಸಂಪರ್ಕಗಳನ್ನು ಒದಗಿಸುವಂತೆ ಬೆಸ್ಕಾಂ/ಎಸ್ಕಾಂಗೆ ಸೂಚಿಸಲು ಸರ್ಕಾರ ತುರ್ತು ಕ್ರಮಗಳನ್ನು ತೆಗೆದುಕೊಳ್ಳುತ್ತದೆಯೇ ;

(ಇ) ರೆವಿನ್ಯೂ ನಿವೇಶನಗಳಲ್ಲಿ ಮೂಲಭೂತ ಸೌಕರ್ಯ ಕಲ್ಪಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಸರ್ಕಾರಿ ಆಸ್ಪತ್ರೆಗಳಲ್ಲಿ ಸಿಬ್ಬಂದಿಗಳ ಕೊರತೆ ಬಗ್ಗೆ

**ಶ್ರೀ ರಾಮೋಜಿ ಗೌಡ (ಪದವೀಧರರ ಕ್ಷೇತ್ರ) :–**

೫೨೪ (೬೦೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರು, ನರ್ಸ್ ಮತ್ತು ಅರೆ ವೈದ್ಯಕೀಯ ಸಿಬ್ಬಂದಿಗಳ ಕೊರತೆ ಇದೆಯೇ ; ಎಷ್ಟು ಹುದ್ದೆಗಳು ಖಾಲಿ ಇವೆ ;

(ಆ) ಪ್ರಾಥಮಿಕ ಆರೋಗ್ಯ ಕೇಂದ್ರಗಳು (ಪಿಎಚ್‌ಸಿ) ಮತ್ತು ಜಿಲ್ಲಾ ಆಸ್ಪತ್ರೆಗಳಲ್ಲಿನ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಬಿಎಸ್ಸಿ ನರ್ಸಿಂಗ್ ಪದವಿ ಪಡೆದರೂ ಅನೇಕ ಯುವಕರು ನಿರುದ್ಯೋಗಿಗಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಸರ್ಕಾರದ ನೇಮಕಾತಿ ಪ್ರಕ್ರಿಯೆ ತಡವಾಗುವುದರಿಂದ ನರ್ಸಿಂಗ್ ಪದವಿ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಸರ್ಕಾರಿ ಶಾಲೆಗಳನ್ನು ಮುಚ್ಚಿರುವ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೨೫ (೬೧೦) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೫ ವರ್ಷಗಳಲ್ಲಿ ಎಷ್ಟು ಸರ್ಕಾರಿ ಶಾಲೆಗಳನ್ನು ಮುಚ್ಚಲಾಗಿದೆ ; ಎಷ್ಟು ಸರ್ಕಾರಿ ಶಾಲೆಗಳನ್ನು ವಿಲೀನಗೊಳಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ೨೦೨೫–೨೬ನೇ ಸಾಲಿನಲ್ಲಿ ಅತೀ ಹೆಚ್ಚು ಸರ್ಕಾರಿ ಶಾಲೆಗಳನ್ನು ಮುಚ್ಚಲಾಗಿರುವುದು ನಿಜವೇ ;

(ಇ) ಈ ರೀತಿಯಾಗಿ ಶಾಲೆಗಳನ್ನು ವಿಲೀನಗೊಳಿಸಿ ಮುಚ್ಚುವುದರಿಂದ ಹಲವಾರು ವಿದ್ಯಾರ್ಥಿಗಳು ಶಿಕ್ಷಣದಿಂದ ವಂಚಿತರಾಗುವುದಿಲ್ಲವೇ ; ಇದು ಮಕ್ಕಳ ಶಿಕ್ಷಣ ಹಕ್ಕಿನ ಉಲ್ಲಂಘನೆಯಲ್ಲವೇ ;

(ಈ) ಸರ್ಕಾರಿ ಶಾಲೆಗಳಲ್ಲಿ ಕಳೆದ ೫ ವರ್ಷಗಳ ಮಕ್ಕಳ ದಾಖಲಾತಿ ಎಷ್ಟು ; (ಶೈಕ್ಷಣಿಕ ವರ್ಷವಾರು, ಜಿಲ್ಲಾವಾರು ವಿವರ ನೀಡುವುದು)

(ಉ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಕಳೆದ ೫ ವರ್ಷಗಳಲ್ಲಿ ಎಷ್ಟು ಶಾಲೆಗಳನ್ನು ಮುಚ್ಚಲಾಗಿದೆ ; ಯಾವುವು ; (ತಾಲ್ಲೂಕುವಾರು, ಶೈಕ್ಷಣಿಕ ವರ್ಷವಾರು ಮುಚ್ಚಿರುವ ವಿವರ ನೀಡುವುದು)

(ಊ) ಕಳೆದ ೩ ವರ್ಷಗಳಲ್ಲಿ ರಾಜ್ಯಾದ್ಯಂತ ೫೦ಕ್ಕಿಂತ ಕಡಿಮೆ ಮಕ್ಕಳಿರುವ ಎಷ್ಟು ಶಾಲೆಗಳನ್ನು ವಿಲೀನಗೊಳಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಋ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ೫೦ಕ್ಕಿಂತ ಕಡಿಮೆ ಮಕ್ಕಳಿರುವ ಎಷ್ಟು ಶಾಲೆಗಳನ್ನು ವಿಲೀನಗೊಳಿಸಲಾಗಿದೆ ; ಯಾವುವು ? (ತಾಲ್ಲೂಕುವಾರು ವಿವರ ನೀಡುವುದು)

## ವನ್ಯಜೀವಿ – ಮಾನವ ಸಂಘರ್ಷ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೨೬ (೬೧೧) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೆಚ್ಚುತ್ತಿರುವ ವನ್ಯಜೀವಿ–ಮಾನವ ಸಂಘರ್ಷದಿಂದಾಗಿ ಜೀವಹಾನಿ, ಕೃಷಿ ಬೆಳೆ ನಷ್ಟ, ಪಶು–ಪ್ರಾಣಿಗಳಿಗೆ ಹಾನಿ ಮತ್ತು ಸಂಭವಿಸಿರುವ ಇತರ ಹಾನಿಗಳ ಕುರಿತು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ಐದು ವರ್ಷಗಳಲ್ಲಿ ಮಾನವ ಜೀವಹಾನಿ, ಗಾಯಗೊಂಡವರ ಸಂಖ್ಯೆ ಹಾಗೂ ಆಸ್ತಿ ಮತ್ತು ಕೃಷಿ ಬೆಳೆ ನಷ್ಟ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ವನ್ಯ ಜೀವಿಗಳಿಂದ ಉಂಟಾದ ಕೃಷಿ/ಬೆಳೆ ಹಾನಿಗಳಿಗೆ ನೀಡುತ್ತಿರುವ ನಷ್ಟದ ಪರಿಹಾರ ಮೊತ್ತ ತುಂಬಾ ಕಡಿಮೆ ಇದ್ದು ಇದರ ಹೆಚ್ಚಳಕ್ಕೆ ಏನೇನು ಕ್ರಮ ವಹಿಸಲಾಗಿದೆ ; ವಿವಿಧ ಬೆಳೆಗಳ (ತೆಂಗು/ಅಡಿಕೆ/ಕಾಫಿ/ಭತ್ತ/ರಬ್ಬರ್/ಬಾಳೆ ಮುಂತಾದ) ಸಂಪೂರ್ಣ ಹಾನಿಗೆ ಎಷ್ಟು ಪರಿಹಾರ ನೀಡಲಾಗುತ್ತಿದೆ ; ಕಳೆದ ೦೫ ವರ್ಷಗಳಲ್ಲಿ ನೀಡಿದ ಪರಿಹಾರದ ಮೊತ್ತ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು) ಪರಿಹಾರ ವಿತರಣೆಯಲ್ಲಿ ವಿಳಂಬವಾಗುತ್ತಿರುವುದಕ್ಕೆ ಕಾರಣವೇನು ;

(ಈ) ವನ್ಯಜೀವಿ ದಾಳಿ ತಡೆಗಟ್ಟಲು ಸರ್ಕಾರ ಕೈಗೊಂಡಿರುವ ತುರ್ತು ಮತ್ತು ದೀರ್ಘಕಾಲೀನ ಕ್ರಮಗಳು ಯಾವುವು ; ಅರಣ್ಯ ಅಂಚಿನ ಗ್ರಾಮಗಳಲ್ಲಿ ಸೌರ ವಿದ್ಯುತ್ ಬೇಲಿ, ಕಂದಕ ನಿರ್ಮಾಣ, ಜಾಗೃತಿ ಕಾರ್ಯಕ್ರಮಗಳು ಮತ್ತು ತ್ವರಿತ ಪ್ರತಿಕ್ರಿಯಾ ಪಡೆ (Rapid Response Team) ಗಳನ್ನು ಸ್ಥಾಪಿಸುವ ಬಗ್ಗೆ ಸರ್ಕಾರದ ಯೋಜನೆಗಳೇನು ; ಈ ಕಾರ್ಯಕ್ಕೆ ಎಷ್ಟು ಅನುದಾನ ಮೀಸಲಿಡಲಾಗಿದೆ ? (ಜಿಲ್ಲಾವಾರು ವಿವರ ಒದಗಿಸುವುದು)

(ಉ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಆನೆ ಹಾವಳಿ ತಡೆಗಟ್ಟಲು ಆನೆ ಕಾರ್ಯಪಡೆ ರಚಿಸುವ (ETF) ಸರ್ಕಾರದ ತೀರ್ಮಾನ ಯಾವ ಹಂತದಲ್ಲಿದೆ ; ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ಒದಗಿಸುವುದು)

## ಪದವಿ ಪೂರ್ವ ಕಾಲೇಜುಗಳಲ್ಲಿ ಉಪನ್ಯಾಸಕರ ನೇಮಕಾತಿ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೨೭ (೬೧೨) ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಸರ್ಕಾರಿ ಪದವಿ ಪೂರ್ವ ಕಾಲೇಜುಗಳು ಹಾಗೂ ಅನುದಾನಿತ ಪದವಿ ಪೂರ್ವ ಕಾಲೇಜುಗಳು ಇವೆ ; ಸದರಿ ಸರ್ಕಾರಿ ಹಾಗೂ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳು ಎಷ್ಟು; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳಿಗೆ ಒಟ್ಟು ಎಷ್ಟು ಮಂದಿ ಅತಿಥಿ ಉಪನ್ಯಾಸಕರನ್ನು ನೇಮಕಾತಿ ಮಾಡಿಕೊಳ್ಳಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು) ಹಾಗೂ ಅತಿಥಿ ಉಪನ್ಯಾಸಕರನ್ನು ನೇಮಕಾತಿ ಮಾಡಿಕೊಳ್ಳುವ ಸಂದರ್ಭದಲ್ಲಿ ವಿವಿಧ ಬೋಧನಾ ಹುದ್ದೆಗಳಿಗೆ ಏನೇನು ಶೈಕ್ಷಣಿಕ ವಿದ್ಯಾರ್ಹತೆಯನ್ನು ನಿಗದಿಪಡಿಸಲಾಗಿದೆ ; ಪ್ರತಿಯೊಂದು ಬೋಧನಾ ವಿಷಯದ ಶೈಕ್ಷಣಿಕ ವಿದ್ಯಾರ್ಹತೆಯನ್ನು ವಿವರವಾಗಿ ನೀಡುವುದು ;

(ಇ) ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ಬೋಧಕ ಹುದ್ದೆಗಳು ಎಷ್ಟು ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಅನುದಾನಿತ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕ ಹುದ್ದೆಗಳನ್ನು ಯಾವ ಮಾನದಂಡದಲ್ಲಿ ಭರ್ತಿ ಮಾಡಲಾಗುತ್ತಿದೆ; ವಿವಿಧ ಬೋಧನಾ ಹುದ್ದೆಗಳಿಗೆ ಏನೇನು ವಿದ್ಯಾರ್ಹತೆಯನ್ನು ನಿಗದಿಪಡಿಸಲಾಗಿದೆ ; ಪ್ರತಿ ಬೋಧನಾ ವಿಷಯದ ಶೈಕ್ಷಣಿಕ ವಿದ್ಯಾರ್ಹತೆಯನ್ನು ವಿವರವಾಗಿ ನೀಡುವುದು ;

(ಉ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಹಾಗೂ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಗಣಕ ವಿಜ್ಞಾನ (Computer Science) ಹಾಗೂ ಎಲೆಕ್ಟ್ರಾನಿಕ್ಸ್ (Electronics) ಬೋಧನಾ ವಿಷಯದ ಖಾಯಂ ಉಪನ್ಯಾಸಕರು ಹಾಗೂ ಅತಿಥಿ ಉಪನ್ಯಾಸಕರುಗಳು ಇವರುಗಳಿಗೆ ಈ ವಿಷಯದ ಬೋಧನಾ ಹುದ್ದೆಗೆ ಪದವಿಪೂರ್ವ ಶಿಕ್ಷಣ ಇಲಾಖೆ ವೃಂದ ಹಾಗೂ ನೇಮಕಾತಿ ನಿಯಮಾನುಸಾರ ಏನೇನು ಶೈಕ್ಷಣಿಕ ವಿದ್ಯಾರ್ಹತೆಯನ್ನು ನಿಗದಿಪಡಿಸಲಾಗಿದೆ ; (ವಿವರ ನೀಡುವುದು)

(ಊ) ಗಣಕ ವಿಜ್ಞಾನ (Computer Science) ಹಾಗೂ ಎಲೆಕ್ಟ್ರಾನಿಕ್ಸ್ (Electronics) ವಿಷಯವನ್ನು ಬೋಧನೆ ಮಾಡುವ ಉಪನ್ಯಾಸಕರಿಗೆ ಬಿ.ಇಡಿ. ಪದವಿ ಶಿಕ್ಷಣದಲ್ಲಿ (B.Ed Education) ನಿರ್ದಿಷ್ಟವಾದ ಮೆತಡ್ (Methodology subject) ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದರ ಬಗ್ಗೆ ಸರ್ಕಾರದ ನಿಲುವೇನು ;

(ಋ) ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ಹುದ್ದೆಗಳನ್ನು ತುಂಬಿಕೊಳ್ಳುವ ಸಂದರ್ಭದಲ್ಲಿ ಹಾಗೂ ಸರ್ಕಾರಿ

ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ಹುದ್ದೆಗಳನ್ನು ಮುಂಬರುವ ಸಿ.ಇ.ಟಿ. ಪರೀಕ್ಷೆಯ ಮೂಲಕ ನೇಮಕಾತಿ ಮಾಡಿಕೊಳ್ಳುವ ಸಂದರ್ಭದಲ್ಲಿ ಈ ಎರಡು ಬೋಧನಾ ವಿಷಯಗಳಾದ ಗಣಕ ವಿಜ್ಞಾನ (Computer Science) ಹಾಗೂ ಎಲೆಕ್ಟ್ರಾನಿಕ್ಸ್ (Electronics) ವಿಷಯಗಳಿಗೆ ಬಿ.ಇಡಿ ಪದವಿಯಿಂದ ವಿನಾಯಿತಿ ನೀಡುವ ಸಲುವಾಗಿ ಪದವಿ ಪೂರ್ವ ಶಿಕ್ಷಣ ಇಲಾಖೆಯು ವೃಂದ ಹಾಗೂ ನೇಮಕಾತಿ ನಿಯಮಾವಳಿಗಳಲ್ಲಿ ತಿದ್ದುಪಡಿ ಮಾಡಲಾಗುವುದೇ ; ಈ ಬಗ್ಗೆ ಸರ್ಕಾರದ ನಿಲುವೇನು ?

## ಅನುದಾನಿತ ಪದವಿ ಪೂರ್ವ ಕಾಲೇಜುಗಳ ಖಾಲಿ ಹುದ್ದೆಗಳ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೨೮ (೬೧೪) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಅನುದಾನಿತ ಪದವಿಪೂರ್ವ ಕಾಲೇಜುಗಳಲ್ಲಿ ದಿನಾಂಕ: ೦೧–೦೧–೨೦೧೬ರಿಂದ ೩೧–೧೨–೨೦೨೫ರವರೆಗೆ ಖಾಲಿಯಿರುವ ಬೋಧಕ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಯಾವ ಶೈಕ್ಷಣಿಕ ವರ್ಷದಿಂದ, ಯಾವ ಶೈಕ್ಷಣಿಕ ವರ್ಷದವರೆಗೆ ಖಾಲಿಯಿರುವ ಬೋಧಕ ಹುದ್ದೆಗಳನ್ನು ತುಂಬಿಕೊಳ್ಳಲು ಅನುಮತಿ ನೀಡಲಾಗಿದೆ ;

(ಇ) ಪ್ರಸ್ತುತ ಅನುದಾನಿತ ಪದವಿಪೂರ್ವ ಕಾಲೇಜುಗಳಲ್ಲಿ ದಿನಾಂಕ: ೦೧-೦೧-೨೦೧೬ರಿಂದ ೩೧-೧೨-೨೦೨೦ರವರೆಗೆ ಖಾಲಿ ಇರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಅವಕಾಶ ನೀಡಲಾಗಿದ್ದು ನೇಮಕಾತಿ ವಿಳಂಬ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದರ ಕುರಿತು ಸರ್ಕಾರದ ನಿಲುವೇನು ; ಹಾಗೂ ಈ ಸಮಸ್ಯೆಯನ್ನು ಸರ್ಕಾರ ಯಾವಾಗ ಪರಿಹರಿಸುತ್ತದೆ ;

(ಈ) ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿಮಾಡಿಕೊಳ್ಳುವ ಸಂದರ್ಭದಲ್ಲಿ ಪ್ರತಿ ವಿಭಾಗದಲ್ಲಿ ಅಂದರೆ ಕಲಾ ವಿಭಾಗ, ವಾಣಿಜ್ಯ ವಿಭಾಗ ಹಾಗೂ ವಿಜ್ಞಾನ ವಿಭಾಗದಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಎಷ್ಟಿರಬೇಕು ;

(ಉ) ಅನುದಾನಿತ ಪದವಿಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡುವ ಸಂದರ್ಭದಲ್ಲಿ ಭಾಷಾ ವಿಷಯಗಳಾದ ಕನ್ನಡ, ಹಿಂದಿ, ತಮಿಳು, ತೆಲುಗು, ಮಲೆಯಾಳಂ, ಮರಾಠಿ, ಉರ್ದು, ಸಂಸ್ಕೃತ, ಅರೇಬಿಕ್, ಫ್ರೆಂಚ್ ಈ ಭಾಷಾ ವಿಷಯಗಳಿಗೂ ಸಹ ಕನಿಷ್ಠ ೪೦ ಮಂದಿ ವಿದ್ಯಾರ್ಥಿಗಳ ಸಂಖ್ಯೆ ಇರಬೇಕೆಂದು ಷರತ್ತು ವಿಧಿಸಿರುವುದರಿಂದ ಭಾಷಾ ವಿಷಯಗಳ ಹುದ್ದೆಯನ್ನು ಭರ್ತಿ ಮಾಡಲು ಸಮಸ್ಯೆ ಎದುರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದನ್ನು ಸರಿಪಡಿಸಲು ಸರ್ಕಾರದ ನಿಲುವೇನು ;

(ಊ) ಪ್ರತಿ ವಿಭಾಗಗಳಾದ (combination) ಕಲಾ ವಿಭಾಗ, ವಾಣಿಜ್ಯ ವಿಭಾಗ ಹಾಗೂ ವಿಜ್ಞಾನ ವಿಭಾಗದಲ್ಲಿ ವಿದ್ಯಾರ್ಥಿಗಳ ಸಂಖ್ಯೆ

೪೦ ಇರಬೇಕೆಂದಾದರೆ ಪ್ರತಿ ವಿಭಾಗದ (combination) ಭಾಷಾ ವಿಷಯಗಳ ವಿದ್ಯಾರ್ಥಿಗಳು ತಮಗೆ ಇಷ್ಟವಾದ ಭಾಷಾ ವಿಷಯವನ್ನು ಆಯ್ಕೆ ಮಾಡಿಕೊಳ್ಳುವಾಗ ಭಾಷಾ ವಿಷಯದಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಕನಿಷ್ಠ ೪೦ ಇರಲು ಹೇಗೆ ಸಾಧ್ಯ ; ಈ ಹಿಂದಿನ ಆದೇಶದಲ್ಲಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರತಿಭಾಷಾ ವಿಷಯಕ್ಕೆ ವಿದ್ಯಾರ್ಥಿಗಳ ಸಂಖ್ಯೆ ಕನಿಷ್ಠ ೧೦ ಸಂಖ್ಯೆ ಇದ್ದು, ಪ್ರಸ್ತುತ ಇರುವ ಷರತ್ತನ್ನು ಸಡಿಲಿಸಿ ಪ್ರತಿಯೊಂದು ಭಾಷಾ ವಿಷಯಕ್ಕೆ ವಿದ್ಯಾರ್ಥಿಗಳ ಸಂಖ್ಯೆಯನ್ನು ಕನಿಷ್ಠ ೧೦ ಸಂಖ್ಯೆಗೆ ಮಾರ್ಪಾಡು ಮಾಡಲು ಸರ್ಕಾರ ಕೈಗೊಂಡಿರುವ ಕ್ರಮವೇನು ?

## ರಾಜ್ಯದಲ್ಲಿ ಕುಸುಮ್ "ಸಿ" ಯೋಜನೆ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೨೯ (೬೧೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕುಸುಮ್ "ಸಿ" ಯೋಜನೆಯನ್ನು ಯಾವಾಗ ಜಾರಿಗೊಳಿಸಲಾಗಿದೆ ; ಇದರ ಮುಖ್ಯ ಉದ್ದೇಶವೇನು ; ಸದರಿ ಯೋಜನೆಯನ್ನು ಅನುಷ್ಠಾನ ಮಾಡಲು ಟೆಂಡರ್ ಪಡೆದ ಸಂಸ್ಥೆ ಯಾವುದು ; ಸದರಿ ಯೋಜನೆಯಡಿ ವಿವಿಧ ಎಸ್ಕಾಂಗಳ ವ್ಯಾಪ್ತಿಯಲ್ಲಿ ಉತ್ಪಾದನೆಯಾಗುವ ಸೌರ ವಿದ್ಯುತ್‌ನ ಪ್ರಮಾಣವೆಷ್ಟು;

(ಆ) ಸದರಿ ಯೋಜನೆಯಡಿ ರಾಜ್ಯಾದ್ಯಂತ ಈವರೆಗೆ ಎಷ್ಟು ಫಲಾನುಭವಿಗಳು ಇದರ ಉಪಯೋಗವನ್ನು ಪಡೆದುಕೊಂಡಿದ್ದಾರೆ ; ಎಷ್ಟು ಸಹಾಯಧನವನ್ನು ನೀಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಈ ಯೋಜನೆಯಡಿ ಒಂದು ಮೆಗಾವ್ಯಾಟ್ ಸೌರ ವಿದ್ಯುತ್ ಉತ್ಪಾದನೆಗೆ ತಗಲುವ ವೆಚ್ಚವೆಷ್ಟು ; ಕೇಂದ್ರ/ರಾಜ್ಯ ಸರ್ಕಾರ ನೀಡುವ ಸಹಾಯಧನದ ಮೊತ್ತವೆಷ್ಟು ; ಹೆಚ್ಚುವರಿ ವೆಚ್ಚವನ್ನು ಹೇಗೆ ಭರಿಸಲಾಗುತ್ತದೆ ; (ಮಾಹಿತಿ ನೀಡುವುದು)

(ಈ) ಈ ಯೋಜನೆಯ ಫಲಾನುಭವಿಗಳು ಯಾರು ಮತ್ತು ಅವರಿಗೆ ಆಗುವ ಪ್ರಯೋಜನಗಳು ಏನು ;

(ಉ) ಸದರಿ ಯೋಜನೆಯ ಅನುಷ್ಠಾನಕ್ಕೆ ಭೂಮಿಯನ್ನು ಒದಗಿಸುವವರು ಯಾರು ; ಸದರಿ ಭೂಮಿಯ ಗುತ್ತಿಗೆ ಅಥವಾ ಬಾಡಿಗೆ ಮೊತ್ತ ಎಷ್ಟು ?

## ಕಲ್ಯಾಣ ಕರ್ನಾಟಕ ಭಾಗದಲ್ಲಿರುವ ಸಿಂಧನೂರು ತಾಲ್ಲೂಕನ್ನು ನೂತನ ಪ್ರತ್ಯೇಕ ಜಿಲ್ಲೆ ಎಂದು ಘೋಷಿಸುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು):–**

೫೩೦ (೬೧೫) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ತಾಲ್ಲೂಕು ಇಡೀ ಕಲ್ಯಾಣ ಕರ್ನಾಟಕ ಭಾಗದಲ್ಲೇ ಅತೀ ಹೆಚ್ಚು ಶಿಕ್ಷಣ ಸಂಸ್ಥೆಗಳನ್ನು ಹೊಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸಿಂಧನೂರು ತಾಲ್ಲೂಕನ್ನು ಶೈಕ್ಷಣಿಕ ಜಿಲ್ಲೆಯೆಂದು ಘೋಷಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಯಾವ ಹಂತದಲ್ಲಿದೆ ;

(ಇ) ಸಿಂಧನೂರು ತಾಲ್ಲೂಕಿನ ಶಾಲಾ–ಕಾಲೇಜುಗಳ ಸಂಖ್ಯೆ, ವಿದ್ಯಾರ್ಥಿಗಳ ಸಂಖ್ಯೆ ಹಾಗೂ ಭೌಗೋಳಿಕ ವ್ಯಾಪ್ತಿಯನ್ನು ಪರಿಗಣಿಸಿ, ಯಾವ ಕಾಲಮಿತಿಯೊಳಗೆ ಸಿಂಧನೂರು ತಾಲ್ಲೂಕನ್ನು ಪ್ರತ್ಯೇಕ ಶೈಕ್ಷಣಿಕ ಜಿಲ್ಲೆಯೆಂದು ಘೋಷಿಸಲಾಗುವುದು ?

## ಸಿಂಧನೂರು ತಾಲ್ಲೂಕಿಗೆ ಹೊಸ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಮಂಜೂರು ಮಾಡುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೩೧ (೬೧೬) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದಿಂದ ಹೊಸ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಮಂಜೂರು ಮಾಡಲು ಇರುವ ಮಾನದಂಡಗಳೇನು ;

(ಆ) ಶೈಕ್ಷಣಿಕವಾಗಿ ಮುಂದುವರೆಯುತ್ತಿರುವ ಸಿಂಧನೂರು ತಾಲ್ಲೂಕು ಇಂಜಿನಿಯರಿಂಗ್ ಕಾಲೇಜನ್ನು ಮಂಜೂರು ಮಾಡಲು ಪೂರೈಸದಿರುವ ಅಗತ್ಯ ಮಾನದಂಡಗಳೇನು ;

(ಇ) ಯಾವ ಕಾಲಮಿತಿಯೊಳಗೆ ಸರ್ಕಾರದಿಂದ ಸಿಂಧನೂರು ತಾಲ್ಲೂಕಿನಲ್ಲಿ ಇಂಜಿನಿಯರಿಂಗ್ ಕಾಲೇಜನ್ನು ತೆರೆಯಲಾಗುವುದು ?

## ಸಿಂಧನೂರು ತಾಲ್ಲೂಕಿಗೆ ಸರ್ಕಾರಿ ವೈದ್ಯಕೀಯ ಕಾಲೇಜು ಮಂಜೂರು ಮಾಡುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೩೨ (೬೧೭) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಮಂಜೂರು ಮಾಡಲು ಇರುವ ಸರ್ಕಾರದ ಮಾನದಂಡಗಳೇನು ;

(ಆ) ತಾಲ್ಲೂಕು ಕೇಂದ್ರಗಳಿಗೆ ಈವರೆಗೆ ಎಷ್ಟು ವೈದ್ಯಕೀಯ ಕಾಲೇಜುಗಳನ್ನು ಸರ್ಕಾರ ಮಂಜೂರು ಮಾಡಿದೆ ;

(ಇ) ಮಾಡಿದ್ದಲ್ಲಿ, ಸಿಂಧನೂರು ತಾಲ್ಲೂಕಿಗೆ ಸರ್ಕಾರಿ ವೈದ್ಯಕೀಯ ಕಾಲೇಜನ್ನು ಮಂಜೂರು ಮಾಡಲು ಪೂರೈಕೆಯಾಗದಿರುವ ಮಾನದಂಡಗಳೇನು ;

(ಈ) ಯಾವ ಕಾಲಮಿತಿಯೊಳಗೆ ಸಿಂಧನೂರು ತಾಲ್ಲೂಕಿಗೆ ವೈದ್ಯಕೀಯ ಕಾಲೇಜನ್ನು ಮಂಜೂರು ಮಾಡಲಾಗುವುದು ?

## ಸರ್ಕಾರದಿಂದ ಅನ್ನಭಾಗ್ಯ ಯೋಜನೆಯಡಿ ನೀಡಲಾಗುವ ಪಡಿತರ ಅಕ್ಕಿಯನ್ನು ನೇರವಾಗಿ ರಾಜ್ಯದ ರೈತರಿಂದ ಖರೀದಿಸುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೩೩ (೬೧೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ರೈತರು ಬೆಳೆಯುವ ಅಕ್ಕಿಯು ಸ್ಥಳೀಯ ಬೇಡಿಕೆಯ ಕೊರತೆಯಿಂದಾಗಿ ಬೇರೆ ರಾಜ್ಯಗಳಿಗೆ ಸರಬರಾಜು ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯ ಸರ್ಕಾರವು ಅನ್ನಭಾಗ್ಯ ಯೋಜನೆಯಡಿ ಬಿಪಿಎಲ್ ಪಡಿತರದಾರರಿಗೆ ಉಚಿತವಾಗಿ ವಿತರಿಸುವ ಅಕ್ಕಿಯನ್ನು ಸ್ಥಳೀಯ ರೈಸ್‌ಮಿಲ್‌ಗಳಿಂದ ನೇರವಾಗಿ ಖರೀದಿಸುವ ಬಗ್ಗೆ ಸರ್ಕಾರದ ನಿಲುವೇನು ;

(ಇ) ರೈತರು ಬೆಳೆದ ಭತ್ತವನ್ನು ನೇರವಾಗಿ ಸ್ಥಳೀಯ ರೈಸ್‌ಮಿಲ್‌ಗಳಿಂದ ಖರೀದಿಸಿದಲ್ಲಿ ರಾಜ್ಯದ ರೈತರಿಗೆ ಆರ್ಥಿಕ ಲಾಭವಾಗುವ ಕುರಿತು ಸರ್ಕಾರ ಚಿಂತಿಸಿದೆಯೇ ; ಚಿಂತಿಸಿದ್ದಲ್ಲಿ, ಈ ಬಗ್ಗೆ ಸರ್ಕಾರದ ಅನುಸರಣಾ ಕ್ರಮಗಳೇನು ?

## ಸಿಂಧನೂರು ತಾಲ್ಲೂಕಿನ PHCಗಳನ್ನು ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೩೪ (೬೧೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ತಾಲ್ಲೂಕಿನಲ್ಲಿ ಪ್ರಸ್ತುತ ಕರ್ತವ್ಯನಿರ್ವಹಿಸುತ್ತಿರುವ ಒಟ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು ;

(ಆ) ಸದರಿ ಆರೋಗ್ಯ ಕೇಂದ್ರಗಳಲ್ಲಿ ಹೆಚ್ಚಿನ ಜನಸಂಖ್ಯೆ, ರೋಗಿಗಳ ಸಂಖ್ಯೆ ಹಾಗೂ ಭೌಗೋಳಿಕ ಅಗತ್ಯತೆಗಳನ್ನು ಆಧರಿಸಿ ಎಷ್ಟು PHCಗಳನ್ನು ಮೇಲ್ದರ್ಜೆಗೇರಿಸಲು ಸರ್ಕಾರದ ಮುಂದೆ ಪ್ರಸ್ತಾವನೆಯಿದೆ ;

(ಇ) ಯಾವ ಕಾಲಮಿತಿಯೊಳಗೆ ಸದರಿ PHCಗಳನ್ನು ಮೇಲ್ದರ್ಜೆಗೇರಿಸಲಾಗುವುದು ?

# BPL ಪಡಿತರ ಚೀಟಿಗಳನ್ನು ನೀಡದಿರುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೩೫ (೬೨೦) + ೫೩೬ (೬೨೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಬಿ.ಪಿ.ಎಲ್ ಮತ್ತು ಎ.ಪಿ.ಎಲ್ ಪಡಿತರ ಚೀಟಿಗಳಿವೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ದಿನಾಂಕ: ೩೧.೦೧.೨೦೨೬ ರವರೆಗೆ ಹೊಸದಾಗಿ ಬಿ.ಪಿ.ಎಲ್. ಮತ್ತು ಎ.ಪಿ.ಎಲ್. ಪಡಿತರ ಚೀಟಿ ಕೋರಿ ಸಲ್ಲಿಕೆಯಾಗಿರುವ ಅರ್ಜಿಗಳು ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ದಿನಾಂಕ: ೦೧.೦೬.೨೦೨೩ ರಿಂದ ೩೧.೦೧.೨೦೨೬ ರವರೆಗೆ ಎಷ್ಟು ಎ.ಪಿ.ಎಲ್ ಮತ್ತು ಬಿ.ಪಿ.ಎಲ್ ಪಡಿತರ ಚೀಟಿಗಳು ವಿತರಣೆ ಆಗಿವೆ ; (ವರ್ಷವಾರು, ಜಿಲ್ಲಾವಾರು ವಿವರಗಳನ್ನು ನೀಡುವುದು)

(ಈ) ಕಳೆದ ೩ ವರ್ಷಗಳಿಂದ ಎಷ್ಟು ಬಿ.ಪಿ.ಎಲ್ ಚೀಟಿಗಳನ್ನು ಸರ್ಕಾರ ರದ್ದು ಮಾಡಿದೆ ; ಎಷ್ಟು ಬಿ.ಪಿ.ಎಲ್ ಪಡಿತರ ಚೀಟಿಗಳನ್ನು ಎ.ಪಿ.ಎಲ್ ಪಡಿತರ ಚೀಟಿಗಳಾಗಿ ಪರಿವರ್ತಿಸಿದೆ ; (ಜಿಲ್ಲಾವಾರು, ವರ್ಷವಾರು ವಿವರವನ್ನು ನೀಡುವುದು)

(ಉ) ಹೊಸ ಬಿಪಿಎಲ್ ಪಡಿತರ ಚೀಟಿ ನೀಡುವುದನ್ನು ಸ್ಥಗಿತಗೊಳಿಸಲಾಗಿದೆಯೇ ; ಸ್ಥಗಿತಗೊಳಿಸಿದ್ದಲ್ಲ, ಕಾರಣವೇನು ;

(ಊ) ಹೊಸ ಬಿಪಿಎಲ್ ಪಡಿತರ ಚೀಟಿ ಕೋರಿ ಅರ್ಜಿ ಸಲ್ಲಿಸಿರುವವರಿಗೆ ಯಾವ ಕಾಲಮಿತಿಯೊಳಗೆ ಸರ್ಕಾರ ಬಿ.ಪಿ.ಎಲ್ ಕಾರ್ಡ್ ವಿತರಿಸಲಿದೆ ; ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

# ವಿದ್ಯುತ್ ಪರಿವರ್ತಕಗಳನ್ನು ಸರಿಪಡಿಸಲು ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೩೭ (೬೨೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ರೈತರು ಐ.ಪಿ. ಸೆಟ್ ಗಳಿಗೆ ಅಳವಡಿಸಿರುವ ವಿದ್ಯುತ್ ಪರಿವರ್ತಕಗಳು ಸುಟ್ಟುಹೋದಲ್ಲಿ ದುರಸ್ತಿಪಡಿಸಿ ಪುನರ್ ಸ್ಥಾಪಿಸಲು ಸರ್ಕಾರದಿಂದ ನಿಗದಿಪಡಿಸಿರುವ ಕಾಲಮಿತಿ ಎಷ್ಟು ;

(ಆ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಅದರಲ್ಲೂ ವಿಶೇಷವಾಗಿ ಬಯಲು ಸೀಮೆ ಭಾಗದ ಕಡೂರು ತಾಲ್ಲೂಕಿನಲ್ಲಿ ಸುಟ್ಟು ಹೋದ ವಿದ್ಯುತ್ ಪರಿವರ್ತಕಗಳನ್ನು ದುರಸ್ತಿಪಡಿಸಲು ೧೫–೨೦ ದಿನಗಳು ತೆಗೆದುಕೊಳ್ಳುತ್ತಿರುವುದರಿಂದ ಬೆಳೆಗಳಿಗೆ ಸಕಾಲದಲ್ಲಿ ನೀರುಣಿಸಲು ಸಾಧ್ಯವಾಗದೇ ಬೆಳೆ ನಷ್ಟವಾಗಿ ರೈತರಿಗೆ ತೀವ್ರ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಕಾಲಮಿತಿಯಲ್ಲಿ ವಿದ್ಯುತ್ ಪರಿವರ್ತಕ ದುರಸ್ತಿಪಡಿಸಿ ಪುನರ್ ಸ್ಥಾಪಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ವಿವರ ಒದಗಿಸುವುದು)

# ಗಡಿಭಾಗದ ಶಾಲೆಗಳನ್ನು ಅಭಿವೃದ್ಧಿಪಡಿಸುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೩೮ (೬೨೩) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗಡಿ ಪ್ರದೇಶಗಳಲ್ಲಿ ಎಷ್ಟು ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿವೆ ; ಕಳೆದ ೩ ವರ್ಷದಿಂದ ದಾಖಲಾತಿ ಕೊರತೆಯ ಕಾರಣ ಮುಚ್ಚಿರುವ ಶಾಲೆಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; ಶಾಲೆಗಳಲ್ಲಿ ಕನಿಷ್ಠ ಇರಬೇಕಾದ ವಿದ್ಯಾರ್ಥಿಗಳ ದಾಖಲಾತಿ ಸಂಖ್ಯೆ ಎಷ್ಟು ;

(ಇ) ಗಡಿ ಪ್ರದೇಶದಲ್ಲಿರುವ ಈ ಶಾಲೆಗಳಿಗೆ ಸರ್ಕಾರ ವಿಶೇಷ ಗಮನ ನೀಡದೇ ಇರುವ ಕಾರಣ ವಿದ್ಯಾರ್ಥಿಗಳ ಕೊರತೆಯಿಂದಾಗಿ ಶಾಲೆಗಳನ್ನು ಮುಚ್ಚಿರುವುದು ನಿಜವೇ ;

(ಈ) ಗಡಿ ಪ್ರದೇಶಗಳಲ್ಲಿರುವ ಶಾಲೆಗಳನ್ನು ಅಭಿವೃದ್ಧಿಪಡಿಸಿ, ವಿದ್ಯಾರ್ಥಿಗಳ ಹಾಜರಾತಿಯನ್ನು ಹೆಚ್ಚಿಸಲು ಸರ್ಕಾರ ನೀಡಿರುವ ವಿಶೇಷ ಆದ್ಯತೆಗಳೇನು ಮತ್ತು ಕೈಗೊಂಡಿರುವ ಕ್ರಮಗಳೇನು ?

## ಅನುದಾನಿತ ಶಾಲಾ–ಕಾಲೇಜುಗಳಲ್ಲಿ ಖಾಲಿ ಇರುವ ಹುದೆಗಳನ್ನು ನೇಮಕ ಮಾಡುವ ಕುರಿತು

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) :–**

೫೩೯ (೬೨೫) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಅನುದಾನಿತ ಶಾಲಾ/ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಪೂರ್ಣ ಮಾಹಿತಿ ನೀಡುವುದು)

(ಆ) ಶಾಲಾ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ಬೋಧಕೇತರ ಖಾಲಿ ಹುದ್ದೆಗಳನ್ನು ಸರ್ಕಾರರಿಂದ ಭರ್ತಿ ಮಾಡಲು ವಿಳಂಬ ವಾಗುತ್ತಿರುವುದಕ್ಕೆ ಕಾರಣವೇನು ;

(ಇ) ಶಾಲಾ ಶಿಕ್ಷಣ ಇಲಾಖೆ ಈ ಅನುದಾನಿತ ಶಾಲಾ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವುದಕ್ಕೆ ದಿನೇ ದಿನೇ ಹೊಸ ನಿಯಮಗಳನ್ನು ಜಾರಿಗೆ ತರುತ್ತಿರುವುದರಿಂದ ಈ ಖಾಲಿ ಹುದ್ದೆಯನ್ನು ಭರ್ತಿ ಮಾಡಲು ಕಷ್ಟ ಸಾಧ್ಯವಾಗಿದೆ ; ಆದ್ದರಿಂದ ಸರ್ಕಾರ ಈ ನಿಯಮಗಳನ್ನು ಸಡಿಲ ಮಾಡಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಯಾವ ಕ್ರಮಗಳನ್ನು ಕೈಗೊಂಡಿದೆ ?

## ಪ್ರೌಢ ಶಾಲಾ ಸಹ ಶಿಕ್ಷಕರಿಗೆ ಉಪ ನ್ಯಾಸಕರ ಹುದ್ದೆಗೆ ಮುಂಬಡ್ತಿ ನೀಡುವ ಬಗ್ಗೆ

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) :–**

೫೪೦ (೭೨೬) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರೌಢ ಶಾಲಾ ಸಹ ಶಿಕ್ಷಕರ ಹುದ್ದೆಯಿಂದ ಪದವಿ ಪೂರ್ವ ಕಾಲೇಜು ಉಪನ್ಯಾಸಕರ ಹುದ್ದೆಗೆ ಮುಂಬಡ್ತಿ ನೀಡಲು ಸರ್ಕಾರ ಜಾರಿಗೆ ತಂದಿರುವ ನಿಯಮಗಳು ಯಾವುವು ;

(ಆ) ಸರ್ಕಾರ ಪ್ರೌಢಶಾಲಾ ಸಹ ಶಿಕ್ಷಕರ ಹುದ್ದೆಯಿಂದ ಪದವಿ ಪೂರ್ವ ಕಾಲೇಜು ಉಪನ್ಯಾಸಕರ ಹುದ್ದೆಗೆ ಮುಂಬಡ್ತಿ ನೀಡಲು ಈ ಸಹ ಶಿಕ್ಷಕರಿಗೆ ಅರ್ಹತೆ ಪರೀಕ್ಷೆಯನ್ನು ನಡೆಸಿ ಇದರ ಮುಖಾಂತರ ಮುಂಬಡ್ತಿ ನೀಡಲು ನಡೆಸುತ್ತಿರುವ ಪ್ರಕ್ರಿಯೆಗಳು

ಅವೈಜ್ಞಾನಿಕವಾಗಿರುವುದರಿಂದ ಸಹ ಶಿಕ್ಷಕರಿಗೆ ಬಹಳ ತೊಂದರೆಯಾಗುತ್ತಿದ್ದು ಇದನ್ನು ತಡೆಗಟ್ಟಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಇ) ಈ ಪ್ರೌಢ ಶಾಲಾ ಸಹ ಶಿಕ್ಷಕರಿಗೆ ಮುಂಬಡ್ತಿ ನೀಡಲು ಅರ್ಹತಾ ಪರೀಕ್ಷೆಯನ್ನು ನಡೆಸುತ್ತಿರುವುದರಿಂದ ಈ ಪರೀಕ್ಷೆಗೆ ಸಹ ಶಿಕ್ಷಕರು ತಯಾರಿ ಮಾಡಿಕೊಳ್ಳಬೇಕಾಗಿರುವುದರಿಂದ ಶಾಲಾ ವಿದ್ಯಾರ್ಥಿಗಳಿಗೆ ಪಾಠ ಪ್ರವಚನ ಮಾಡಲು ತುಂಬಾ ಅನಾನುಕೂಲವಾಗುತ್ತದೆ; ಈ ನಿಟ್ಟಿನಲ್ಲಿ ಹಿಂದೆ ಇದ್ದಂತೆ ನಿಯಮಗಳ ಪ್ರಕಾರ ಜ್ಯೇಷ್ಠತೆ ಆಧಾರದ ಮೇರೆಗೆ ಈ ಪ್ರೌಢಶಾಲಾ ಸಹ ಶಿಕ್ಷಕರಿಗೆ ಮುಂಬಡ್ತಿ ನೀಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಶಾಲಾ ಶಿಕ್ಷಣ ಇಲಾಖೆಯಲ್ಲಿ ಖಾಲಿ ಇರುವ ಕ್ಷೇತ್ರಶಿಕ್ಷಣಾಧಿಕಾರಿ ಹುದ್ದೆಗೆ ಬಡ್ತಿ ನೀಡುವ ಕುರಿತು

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) :–**

೫೪೧ (೬೨೭) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಲಾ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಖಾಲಿ ಇರುವ ಕ್ಷೇತ್ರ ಶಿಕ್ಷಣಾಧಿಕಾರಿಗಳ ಅಥವಾ ತತ್ಸಮಾನ ಹುದ್ದೆಗಳ ಸಂಖ್ಯೆ ಎಷ್ಟು;

(ಆ) ಈ ಹಿಂದೆ ಸದರಿ ಹುದ್ದೆಗಳಿಗೆ ಯಾವಾಗ ಬಡ್ತಿ ನೀಡಲಾಗಿದೆ ;

(ಇ) ಖಾಲಿ ಇರುವ ಕ್ಷೇತ್ರ ಶಿಕ್ಷಣಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡಲು/ಬಡ್ತಿ ಪ್ರಕ್ರಿಯೆ ಕೈಗೊಳ್ಳಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಸರ್ಕಾರಿ ಪ್ರಥಮ ದರ್ಜೆ ಮತ್ತು ಸ್ನಾತಕೋತ್ತರ ಕಾಲೇಜುಗಳ ವಿದ್ಯಾರ್ಥಿಗಳ ದಾಖಲಾತಿ ಬಗ್ಗೆ

**ಶ್ರೀ ಕೆ. ವಿವೇಕಾನಂದ (ಶಿಕ್ಷಕರು ಕ್ಷೇತ್ರ) :–**

೫೪೨ (೬೨೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಾದ್ಯಂತ ಇರುವ ಸರ್ಕಾರಿ ಪ್ರಥಮ ದರ್ಜೆ ಮತ್ತು ಸ್ನಾತಕೋತ್ತರ ಕಾಲೇಜಿನಲ್ಲಿ ಬೋಧಿಸುವ ಕೋರ್ಸ್‌ಗಳಲ್ಲಿ ಯಾವ ಯಾವ ಕೋರ್ಸ್‌ಗಳಿಗೆ ವಿದ್ಯಾರ್ಥಿಗಳ ದಾಖಲಾತಿ ಆಗಿರುವುದಿಲ್ಲ ;

(ಆ) ದಾಖಲಾಗಿದ್ದರೂ, ವಿದ್ಯಾರ್ಥಿಗಳ ಸಂಖ್ಯೆ ಒಂದಂಕಿ ದಾಟದಿರುವ ಕೋರ್ಸ್‌ಗಳು ಯಾವುವು ; (ವಿವರ ನೀಡುವುದು)

(ಇ) ಇಂತಹ ಕೋರ್ಸ್‌ಗಳನ್ನು ಮುಂದುವರೆಸುವ ಇಲ್ಲವೇ ಅವಶ್ಯವಿರುವ ಬೇರೆ ಬೇರೆ ಕಾಲೇಜುಗಳಿಗೆ ಸ್ಥಳಾಂತರ ಮಾಡುವ ಬಗ್ಗೆ ಸರ್ಕಾರದ ಕ್ರಮವೇನು ?

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಾಡಾನೆ ಹಾವಳಿ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೫೪೩ (೬೩೦) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯ ಅರಂತೋಡು ಗ್ರಾಮದ ಅಡ್ತಲೆ ಭಾಗ ಸೇರಿದಂತೆ ಜಿಲ್ಲೆಯ ಹಲವಾರು ಭಾಗಗಳಲ್ಲಿ ಕಾಡಾನೆಗಳ ಹಾವಳಿ ವಿಪರೀತವಾಗಿದ್ದು, ಸತತವಾಗಿ ಅಪಾರ ಪ್ರಮಾಣದಲ್ಲಿ ಬೆಳೆ ಹಾನಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದಲ್ಲಿ, ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಂದಲ್ಲ ಒಂದು ಕಡೆ ಕಾಡಾನೆಗಳು ಪ್ರತಿದಿನ ದೊಡ್ಡ ಮಟ್ಟದಲ್ಲಿ ನಿರಂತರವಾಗಿ ಹಾನಿ ಮಾಡುತ್ತಿದ್ದು, ಇದರಿಂದಾಗಿ ಕೃಷಿಕರು ಅತ್ಯಂತ ಸಂಕಷ್ಟಕ್ಕೆ ಸಿಲುಕಿದ್ದರೂ ಸಹ ಈ ತೊಂದರೆಯನ್ನು ತಪ್ಪಿಸಲು ಸರ್ಕಾರ ಇದುವರೆಗೆ ಯಾವುದೇ ಸೂಕ್ತ ಹಾಗೂ ಶಾಶ್ವತ ಪರಿಹಾರದ ಕ್ರಮಗಳನ್ನು ಕೈಗೊಳದಿರಲು ಕಾರಣಗಳೇನು ;

(ಇ) ಜಿಲ್ಲೆಯಲ್ಲಿ ೨೦೨೪–೨೫ ಮತ್ತು ೨೦೨೫–೨೬ ನೇ ಸಾಲಿನಲ್ಲಿ ಕಾಡಾನೆ ದಾಳಿಯಿಂದಾಗಿ ಬೆಳೆ ಹಾನಿಯಾಗಿರುವ ಎಷ್ಟು ಪ್ರಕರಣಗಳು ಇದುವರೆಗೆ ವರದಿಯಾಗಿವೆ ; ಸಂಭವಿಸಿರುವ ನಷ್ಟದ ವಿವರಗಳೇನು ; ಹಾಗೂ ಸದರಿ ಪ್ರಕರಣಗಳಲ್ಲಿ ಸರ್ಕಾರ ತೆಗೆದುಕೊಂಡಿರುವ ಪರಿಹಾರದ ಕ್ರಮಗಳೇನು ; ಹಾಗೂ ಇದುವರೆಗೆ ವಿತರಿಸಿರುವ ಪರಿಹಾರದ ಮೊತ್ತವೆಷ್ಟು ; (ತಾಲ್ಲೂಕುವಾರು ಮತ್ತು ಪ್ರಕಾರಣವಾರು ಸಂಪೂರ್ಣ ವಿವರ ನೀಡುವುದು)

(ಈ) ಜಿಲ್ಲೆಯಲ್ಲಿ ಕಾಡಾನೆಗಳ ಹಾವಳಿಯನ್ನು ಪರಿಣಾಮಕಾರಿಯಾಗಿ ತಡೆಯಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ? (ವಿವರ ನೀಡುವುದು)

## ನಕಲಿ ಪಿ.ಹೆಚ್.ಡಿ ಪ್ರಮಾಣ ಪತ್ರಗಳು ಸಲ್ಲಿಕೆಯಾಗಿರುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೫೪೪ (೬೩೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು ಮತ್ತು ೨೦೨೫–೨೬ನೇ ಸಾಲಿಗೆ ಸದರಿ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಲು ನೇಮಕವಾಗಿರುವವರ ಸಂಖ್ಯೆ ಎಷ್ಟು ;

(ಆ) ಸದರಿ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸಲು ಆಯ್ಕೆಯಾಗಿರುವ ಹಲವಾರು ಅತಿಥಿ ಉಪನ್ಯಾಸಕರು ಸಲ್ಲಿಸಿರುವ ಪಿ.ಹೆಚ್.ಡಿ ಪ್ರಮಾಣಪತ್ರಗಳು ನಕಲಿ ಎಂಬ ದೂರುಗಳು ಕೇಳಿಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದು, ಸದರಿ ಪ್ರಮಾಣಪತ್ರಗಳ ನೈಜತೆ ಪತ್ತೆ ಹಚ್ಚಲು ಸರ್ಕಾರ ಇದುವರೆಗೆ ಕೈಗೊಂಡಿರುವ ಕ್ರಮಗಳೇನು ಹಾಗೂ ನಕಲಿ ಪಿ.ಎಚ್.ಡಿ ಪ್ರಮಾಣಪತ್ರಗಳನ್ನು ಸಲ್ಲಿಸಿ ಅತಿಥಿ ಉಪನ್ಯಾಸಕರ ಹುದ್ದೆಗೆ ಆಯ್ಕೆಯಾಗಿರುವ ವ್ಯಕ್ತಿಗಳ ವಿರುದ್ದ ಇದುವರೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಯಾವ ಕಾಲಮಿತಿಯೊಳಗೆ, ಈ ರೀತಿ ನಕಲಿ ಪಿ.ಹೆಚ್.ಡಿ ಪ್ರಮಾಣಪತ್ರಗಳನ್ನು ಸಲ್ಲಿಸಿ ಅತಿಥಿ ಉಪನ್ಯಾಸಕರ ಹುದ್ದೆಗಳಗೆ ಅಕ್ರಮವಾಗಿ ಆಯ್ಕೆಯಾಗಿರುವವರ ವಿರುದ್ಧ ಕಠಿಣ ಕಾನೂನು ಕ್ರಮಗಳನ್ನು ಕೈಗೊಳ್ಳಲಾಗುವುದು ;

(ಉ) ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಗುಣಮಟ್ಟ ಮತ್ತು ವಿಶ್ವಾಸಾರ್ಹತೆ ಕಾಪಾಡಿಕೊಳ್ಳುವ ನಿಟ್ಟಿನಲ್ಲಿ, ನಕಲಿ ಪಿ.ಹೆಚ್.ಡಿ ಪ್ರಮಾಣಪತ್ರಗಳ ಹಾವಳಿಯನ್ನು ಶಾಶ್ವತವಾಗಿ ತಡೆಯಲು ಅತ್ಯಂತ ಕಠಿಣ ಕಾನೂನು ಕ್ರಮಗಳನ್ನು ಜರುಗಿಸುವ ಅವಶ್ಯಕತೆ ಇದ್ದು, ಈ ಕುರಿತು ಸರ್ಕಾರದ ಕ್ರಮಗಳೇನು ?

## ಬೆಳ್ತಂಗಡಿ ತಾಲ್ಲೂಕಿನ ಆರೋಗ್ಯ ಕೇಂದ್ರಗಳಲ್ಲಿ ಹುದ್ದೆಗಳು ಖಾಲಿ ಇರುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೫೪೫ (೬೩೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನಲ್ಲಿ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು ಮತ್ತು ಸರ್ಕಾರಿ ಆಸ್ಪತ್ರೆಗಳು ಎಷ್ಟು ; ಮತ್ತು ಯಾವುವು ; (ವಿವರ ನೀಡುವುದು)

(ಆ) ಸದರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು ಮತ್ತು ಸರ್ಕಾರಿ ಆಸ್ಪತ್ರೆಗಳಿಗೆ ಮಂಜೂರಾಗಿರುವ, ಕರ್ತವ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ವಿವಿಧ ಸ್ತರದ ಹುದ್ದೆಗಳ ವಿವರಗಳೇನು ;

(ಇ) ಸದರಿ ಆಸ್ಪತ್ರೆಗಳಲ್ಲಿ ಸಾಕಷ್ಟು ಹುದ್ದೆಗಳು ದೀರ್ಘಕಾಲದಿಂದ ಖಾಲಿ ಇರುವುದರಿಂದ ಜನಸಾಮಾನ್ಯರಿಗೆ ದೊರೆಯುತ್ತಿರುವ ವೈದ್ಯಕೀಯ ಸೇವೆಗಳಲ್ಲಿ ತೀವ್ರ ವ್ಯತ್ಯಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಇದುವರೆಗೆ ಪೂರ್ಣ ಪ್ರಮಾಣದಲ್ಲಿ ವೈದ್ಯರು ಹಾಗೂ ಸಿಬ್ಬಂದಿಗಳನ್ನು ನಿಯುಕ್ತಿಗೊಳಿಸದಿರಲು ಕಾರಣಗಳೇನು ಹಾಗೂ ಯಾವ ಕಾಲಮಿತಿಯೊಳಗೆ ಖಾಲಿ ಇರುವ ಹುದ್ದೆಗಳಿಗೆ ಪೂರ್ಣ ಪ್ರಮಾಣದಲ್ಲಿ ವೈದ್ಯರು ಹಾಗೂ ಸಿಬ್ಬಂದಿಗಳನ್ನು ನಿಯುಕ್ತಿಗೊಳಿಸಲಾಗುವುದು ;

(ಉ) ಕಳೆದ ಎರಡು ವರ್ಷಗಳಲ್ಲಿ ಸದರಿ ಆಸ್ಪತ್ರೆಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ವಿನಿಯೋಗಿಸಿರುವ ಅನುದಾನದ ವಿವರಗಳೇನು ಮತ್ತು ಸದರಿ ಅನುದಾನದಲ್ಲಿ ಕೈಗೊಂಡಿರುವ ಕಾಮಗಾರಿಗಳ ವಿವರಗಳೇನು ?

# ಉಜಿರೆ ಗ್ರಾಮದಲ್ಲಿ ೩೦ ಕೆ.ವಿ ವಿದ್ಯುತ್ ಘಟಕ ಪ್ರಾರಂಭದ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೫೪೬ (೬೩೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆ, ಬೆಳ್ತಂಗಡಿ ತಾಲ್ಲೂಕು, ಉಜಿರೆ ಗ್ರಾಮದಲ್ಲಿ ೩೦ ಕೆ.ವಿ ವಿದ್ಯುತ್ ಘಟಕ ಪ್ರಾರಂಭ ಮಾಡುವ ಪ್ರಕ್ರಿಯೆ ಪ್ರಸ್ತುತ ಯಾವ ಹಂತದಲ್ಲಿದೆ ;

(ಆ) ಸದರಿ ಕಾಮಗಾರಿಗೆ ಬೇಕಾಗಿರುವ ಜಾಗವನ್ನು ನಿಗದಿ ಮಾಡಿ, ಸಂಬಂಧಿಸಿದ ಟೆಂಡರ್ ಪ್ರಕ್ರಿಯೆಯನ್ನು ಈಗಾಗಲೇ ಪೂರ್ಣಗೊಳಿಸಲಾಗಿದೆಯೇ ;

(ಇ) ಸದರಿ ಕಾಮಗಾರಿಗೆ ಮಂಜೂರಾಗಿರುವ, ಬಿಡುಗಡೆಯಾಗಿರುವ ಹಾಗೂ ಇಲ್ಲಿಯವರೆಗೆ ವಿನಿಯೋಗಿಸಿರುವ ಅನುದಾನದ ವಿವರಗಳೇನು ;

(ಈ) ಸದರಿ ಕಾಮಗಾರಿಗೆ ಬೇಕಾಗಿರುವ ಜಾಗವನ್ನು ಈಗಾಗಲೇ ನಿಗದಿ ಮಾಡಿ, ಸಂಬಂಧಿಸಿದ ಟೆಂಡರ್ ಪ್ರಕ್ರಿಯೆಯನ್ನು ಸಹ ಪೂರ್ಣಗೊಳಿಸಲಾಗಿದ್ದಲ್ಲಿ, ಕಾಮಗಾರಿಯ ಪ್ರಗತಿ ಪ್ರಸ್ತುತ ಯಾವ ಹಂತದಲ್ಲಿದೆ ;

(ಉ) ದಕ್ಷಿಣ ಕನ್ನಡ ಜಿಲ್ಲೆ, ಬೆಳ್ತಂಗಡಿ ತಾಲ್ಲೂಕು, ಉಜಿರೆ ಗ್ರಾಮದಲ್ಲಿನ ೩೦ ಕೆ.ವಿ ವಿದ್ಯುತ್ ಘಟಕವನ್ನು ಯಾವ ಕಾಲಮಿತಿಯೊಳಗೆ ಲೋಕಾರ್ಪಣೆಗೊಳಿಸಲಾಗುವುದು ?

## ಶಾಲಾ ಶಿಕ್ಷಣ ಇಲಾಖೆಯ ಯೋಜನೆಗಳು ಮತ್ತು ಕಾರ್ಯಕ್ರಮಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೪೭ (೬೩೪) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಜಾರಿಯಲ್ಲಿರುವ Samagra Shiksha Abhiyan ಯೋಜನೆಯಡಿ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಅನುದಾನ ಬಿಡುಗಡೆಯಾಗಿದೆ ; ಅದರ ಬಳಕೆ ಪ್ರಮಾಣ ಎಷ್ಟು ;

(ಆ) Right to Education Act ಅನುಷ್ಠಾನದ ಸ್ಥಿತಿ ಏನು ; ಖಾಸಗಿ ಶಾಲೆಗಳಲ್ಲಿ ೨೫% ಮೀಸಲಾತಿ ಅಡಿಯಲ್ಲಿ ಎಷ್ಟು ವಿದ್ಯಾರ್ಥಿಗಳು ಪ್ರವೇಶ ಪಡೆದಿದ್ದಾರೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ಗ್ರಾಮೀಣ ಪ್ರದೇಶಗಳಲ್ಲಿ ಶಾಲಾ ಬಿಟ್ಟು ಹೋಗುವಿಕೆ ಪ್ರಮಾಣ ಕಡಿಮೆ ಮಾಡಲು ಸರ್ಕಾರ ಯಾವ ವಿಶೇಷ ಯೋಜನೆಗಳನ್ನು ಜಾರಿಗೆ ತರಲಾಗಿದೆ ;

(ಈ) ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳ ದಾಖಲಾತಿ ಹೆಚ್ಚಿಸಲು ಸರ್ಕಾರದಿಂದ ಯಾವ ಹೊಸ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ ?

## ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಆಸ್ಪತ್ರೆಗಳು ಮತ್ತು ಮೂಲಸೌಕರ್ಯ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೪೮ (೬೩೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳ (PHC) ಸಂಖ್ಯೆ ಎಷ್ಟು ; ಅವುಗಳಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಜಿಲ್ಲಾಸ್ಪತ್ರೆಗಳಲ್ಲಿ ICU ಮತ್ತು ವೆಂಟಿಲೇಟರ್ ಸೌಲಭ್ಯಗಳ ಸಂಖ್ಯೆ ಎಷ್ಟು ; ಅವುಗಳ ಸ್ಥಿತಿ ಹೇಗಿದೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ಗ್ರಾಮೀಣ ಪ್ರದೇಶಗಳಲ್ಲಿ ಹೊಸ ಸರ್ಕಾರಿ ಆಸ್ಪತ್ರೆಗಳನ್ನು ಸ್ಥಾಪಿಸುವ ಯೋಜನೆ ಇದೆಯೇ ; ಇದ್ದಲ್ಲಿ, ಮಾಹಿತಿ ಒದಗಿಸುವುದು ;

(ಈ) National Health Mission ಅಡಿಯಲ್ಲಿ ರಾಜ್ಯಕ್ಕೆ ಎಷ್ಟು ಅನುದಾನ ಲಭಿಸಿದೆ ಅದರ ಬಳಕೆಯ ಅನುಸರಣಾ ಕ್ರಮಗಳೇನು ?

## ಸಾರ್ವಜನಿಕ ವಿತರಣೆ ವ್ಯವಸ್ಥೆ (PDS) ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೪೯ (೬೩೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಾರ್ವಜನಿಕ ವಿತರಣೆ ವ್ಯವಸ್ಥೆಯಡಿಯಲ್ಲಿ ಒಟ್ಟು ಎಷ್ಟು ರೇಷನ್ ಕಾರ್ಡ್‌ಗಳು ಜಾರಿಯಲ್ಲಿವೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ರೇಷನ್ ವಿತರಣೆ ಕುರಿತು ಎಷ್ಟು ದೂರುಗಳು ದಾಖಲಾಗಿವೆ ; ಅವುಗಳಲ್ಲಿ ಎಷ್ಟು ಪರಿಹರಿಸಲಾಗಿದೆ ;

(ಇ) ರೇಷನ್ ಅಂಗಡಿಗಳಲ್ಲಿ ತೂಕದ ಅಕ್ರಮ, ನಕಲಿ ಕಾರ್ಡ್‌ಗಳ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳು ಯಾವುವು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ರೇಷನ್ ವಿತರಣೆ ಗುಣಮಟ್ಟವನ್ನು ಮೇಲ್ವಿಚಾರಣೆ ಮಾಡಲು ಸರ್ಕಾರ ಯಾವ ಕ್ರಮವಹಿಸಿದೆ ?

## ಇಂಧನ ಇಲಾಖೆಯ ಹೊಸ ಯೋಜನೆಗಳು ಮತ್ತು ಹೂಡಿಕೆಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೫೦ (೬೩೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೊಸ ವಿದ್ಯುತ್ ಉತ್ಪಾದನಾ ಘಟಕಗಳ ಸ್ಥಾಪನೆಗೆ ಸರ್ಕಾರದ ಯೋಜನೆಗಳೇನು ;

(ಆ) ಖಾಸಗಿ ವಲಯದ ಹೂಡಿಕೆಗಳಿಗೆ ನೀಡಿರುವ ಅನುಮತಿಗಳು ಮತ್ತು ಒಪ್ಪಂದಗಳ ವಿವರ ಒದಗಿಸುವುದು ;

(ಇ) ಕೇಂದ್ರ ಸರ್ಕಾರದ ಸಹಾಯಧನದಡಿ ರಾಜ್ಯಕ್ಕೆ ದೊರೆತಿರುವ ಅನುದಾನ ಎಷ್ಟು ;

(ಈ) ಸ್ಮಾರ್ಟ್ ಮೀಟರ್ ಯೋಜನೆಯ ಪ್ರಗತಿ ಯಾವ ಹಂತದಲ್ಲಿದೆ ? (ಸಂಪೂರ್ಣ ವಿವರ ಒದಗಿಸುವುದು)

## ಅರಣ್ಯ ವಿಸ್ತೀರ್ಣ ಮತ್ತು ಸಂರಕ್ಷಣೆ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೫೧ (೬೩೮) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪ್ರಸ್ತುತ ಒಟ್ಟು ಅರಣ್ಯ ವಿಸ್ತೀರ್ಣ ಎಷ್ಟು ; ಕಳೆದ ಮೂರು ವರ್ಷಗಳಲ್ಲಿ ಏರಿಕೆ/ಇಳಿಕೆ ಪ್ರಮಾಣ ಎಷ್ಟು ;

(ಆ) ಅಕ್ರಮ ಅರಣ್ಯ ನಾಶ ತಡೆಯಲು ಸರ್ಕಾರ ಕೈಗೊಂಡ ಕ್ರಮಗಳು ಯಾವುವು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಅರಣ್ಯ ಅಗ್ನಿ ಪ್ರಕರಣಗಳ ಸಂಖ್ಯೆ ಹಾಗೂ ಅವುಗಳನ್ನು ನಿಯಂತ್ರಿಸಲು ತೆಗೆದುಕೊಂಡ ಕ್ರಮಗಳ ವಿವರವೇನು ;

(ಈ) ಅರಣ್ಯ ಸಂರಕ್ಷಣಾ ಕಾಯ್ದೆಗಳ ಅನುಷ್ಠಾನದ ಪ್ರಗತಿಯ ವಿವರ ನೀಡುವುದು ?

## ವಿಶ್ವವಿದ್ಯಾಲಯಗಳ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೫೨ (೬೪೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಕಾರ್ಯನಿರ್ವಹಿಸುತ್ತಿರುವ ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ವಿಶ್ವವಿದ್ಯಾಲಯಗಳ ಅಭಿವೃದ್ಧಿಗಾಗಿ ಬಿಡುಗಡೆ ಮಾಡಿದ ಒಟ್ಟು ಅನುದಾನ ಎಷ್ಟು ;

(ಇ) ವಿಶ್ವವಿದ್ಯಾಲಯಗಳ ಅಭಿವೃದ್ಧಿಗಾಗಿ ಸೂಕ್ತ ಅನುದಾನ ಬಿಡುಗಡೆ ಮಾಡದೇ ಇರುವುದರಿಂದ ವಿವಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳು ಸಂಬಳ ಹಾಗೂ ಇನ್ನಿತರ ಸೌಲಭ್ಯಗಳಿಂದ ವಂಚಿತರಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಈ) ಯಾವ ಕಾರಣಕ್ಕಾಗಿ ವಿವಿಗಳಿಗೆ ಸೂಕ್ತ ಅನುದಾನ ನೀಡಲಾಗುತ್ತಿಲ್ಲ ? (ಸಂಪೂರ್ಣ ಮಾಹಿತಿ ನೀಡುವುದು)

## ಶಿಕ್ಷಣ ಇಲಾಖೆಗೆ ಸೇರಿದ ಸ್ಥಳದ ಬಗ್ಗೆ

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೫೩ (೬೪೧) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ಜಿಲ್ಲೆಯ ಮಾಲೂರು ತಾಲ್ಲೂಕಿನ ಅಗಲಕೋಟೆ ಗ್ರಾಮದಲ್ಲಿ ಶಿಕ್ಷಣ ಇಲಾಖೆಗೆ ಸೇರಿದ ಜಾಗ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಶಿಕ್ಷಣ ಇಲಾಖೆಗೆ ಸೇರಿದ ಜಾಗ ಒತ್ತುವರಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಕೋಲಾರ ಜಿಲ್ಲೆಯ ಮಾಲೂರು ತಾಲ್ಲೂಕಿನ ಅಗಲಕೋಟೆ ಗ್ರಾಮದಲ್ಲಿ ಶಿಕ್ಷಣ ಇಲಾಖೆಗೆ ದಾನವಾಗಿ ಬಂದಂತಹ ಭೂಮಿ ಎಷ್ಟು ; ಯಾರಿಂದ, ಯಾವ ವರ್ಷದಲ್ಲಿ ಎಷ್ಟು ಜಮೀನು ದಾನವಾಗಿ ಬಂದಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಶಿಕ್ಷಣ ಇಲಾಖೆಗೆ ದಾನವಾಗಿ ನೀಡಲಾದ ಭೂಮಿಯನ್ನು ಅತಿಕ್ರಮವಾಗಿ ಭೂಕಬಳಿಕೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಶ್ರೀ ಟಿ.ಜಿ. ಶ್ರೀನಿವಾಸಲು ರವರು ದಿ: ೧೭.೦೫.೧೯೫೫ರಲ್ಲಿ ಶಿಕ್ಷಣ ಇಲಾಖೆಗೆ ೫೦ ಎಕರೆ ೨೬ ಗುಂಟೆ ಜಮೀನು ನೀಡಿರುವುದು ನಿಜವೇ ? (ಸಂಪೂರ್ಣ ಮಾಹಿತಿ ನೀಡುವುದು)

## ಶಾಲಾ ಪ್ರವೇಶಾತಿ ಬಗ್ಗೆ

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೫೪ (೬೪೨) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸಕ್ತ ವರ್ಷದಲ್ಲಿ ಸರ್ಕಾರಿ ಶಾಲೆ ಬಿಟ್ಟು ಖಾಸಗಿ ಶಾಲೆಗಳಲ್ಲಿ ಪ್ರವೇಶ ಪಡೆಯುತ್ತಿರುವ ವಿದ್ಯಾರ್ಥಿಗಳ ಪ್ರಮಾಣ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕಾನ್ವೆಂಟ್ ಸೇರುವುದನ್ನು ತಡೆಯಲು ತೆಗೆದುಕೊಂಡಿರುವ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸರ್ಕಾರಿ ಶಾಲೆಗಳು ಖಾಸಗಿ ಶಾಲೆಗಳ ರೀತಿ ಅಭಿವೃದ್ಧಿ ಮಾಡಲು ಸರ್ಕಾರ ಯೋಜನೆಗಳನ್ನು ರೂಪಿಸಿದೆಯೇ ; (ಯೋಜನೆಯ ಮಾಹಿತಿಯನ್ನು ಒದಗಿಸುವುದು)

(ಇ) ವಿಜಯಪುರ ಜಿಲ್ಲೆಯಲ್ಲಿ ೨೦೨೨–೨೩ ರಿಂದ ೨೦೨೫–೨೬ನೇ ಸಾಲಿನಲ್ಲಿ ಹೊಸದಾಗಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ತೆರೆಯಲು ಕೋರಿ ಸ್ವೀಕೃತಗೊಂಡಿರುವ ಮನವಿ/ಅರ್ಜಿಗಳೆಷ್ಟು ; (ವಿಧಾನಸಭಾ ಕ್ಷೇತ್ರವಾರು ಮಾಹಿತಿ ಒದಗಿಸುವುದು)

(ಈ) ಅನುಮತಿ ಪಡೆದು ಕಾರ್ಯಾರಂಭ ಮಾಡಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳೆಷ್ಟು ; ಶಾಲೆಗಳ ಅನುಮತಿಗೆ ನೀಡಿದ ವಿಳಾಸ, ಸ್ಥಳದ ನಕ್ಷೆ, ಸಲ್ಲಿಸಿದ ದಾಖಲೆಗಳನ್ನು ಒದಗಿಸುವುದು ? (ಸರ್ಕಾರ/ಖಾಸಗಿ ಶಾಲೆಗಳ ಸಂಪೂರ್ಣ ಮಾಹಿತಿ ಒದಗಿಸುವುದು)

# ಕಲ್ಯಾಣ ಕರ್ನಾಟಕ ಆರೋಗ್ಯ ಕ್ಷೇತ್ರದಲ್ಲಿ ಹಿಂದುಳಿದಿರುವ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೫೫ (೬೪೩) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪ್ರಾದೇಶಿಕ ಅಸಮತೋಲನ ನಿವಾರಣೆ ಕುರಿತು ಪ್ರೊ.ಎಂ.ಗೋವಿಂದರಾವ್ ಸಮಿತಿಯು ಸರ್ಕಾರಕ್ಕೆ ಸಲ್ಲಿಸಿರುವ ಅಂತಿಮ ವರದಿಯಲ್ಲಿ ಕಲ್ಯಾಣ ಕರ್ನಾಟಕ ಭಾಗದ ಹಿಂದುಳಿದಿರುವಿಕೆ ಶೇ.೬೫ ರಿಂದ ಶೇ.೭೨.೮ಕ್ಕೆ ಏರಿಕೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಸಮಿತಿಯು ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಕ್ಷೇತ್ರಕ್ಕೆ ಶಿಫಾರಸ್ಸು ಮಾಡಿರುವ ೧೧,೭೭೦ಕೋಟಿ ರೂ.ಗಳ ವಿಶೇಷ ಅನುದಾನದಲ್ಲಿ ಅತೀ ಹೆಚ್ಚು ಹಿಂದುಳಿದ ಜಿಲ್ಲೆಯಾಗಿರುವ ಕಲಬುರಗಿಯ ಆರೋಗ್ಯ ಮೂಲ ಸೌಕರ್ಯಕ್ಕೆ ಎಷ್ಟು ಮೊತ್ತವನ್ನು ಮೀಸಲಿಡಲು ಸರ್ಕಾರ ಯೋಜಿಸಿದೆ ;

(ಇ) ಕಲಬುರಗಿಯ ಕಿದ್ವಾಯಿ ಪೆರಿಫೆರಲ್ ಆಸ್ಪತ್ರೆಯಲ್ಲಿ ಕಳೆದ ೬ ವರ್ಷಗಳಿಂದ ಒಬ್ಬರೇ ಒಬ್ಬರು ಕಿಮೋಥೆರಪಿ ತಜ್ಞರಿಲ್ಲದೆ (Medical Oncologist) ಬಡ ರೋಗಿಗಳು ಸಾವನ್ನಪ್ಪುತ್ತಿರುವುದು ಈ ವರದಿಯಲ್ಲಿ ಉಲ್ಲೇಖಿಸಲಾದ "ನಿರ್ಲಕ್ಷ್ಯ"ಕ್ಕೆ ಸಾಕ್ಷಿಯಲ್ಲವೇ ; ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರಕ್ಕೆ ಇರುವ ಅಡಚಣೆಗಳೇನು ;

(ಈ) ಡಾ॥ ನಂಜುಂಡಪ್ಪ ವರದಿಯಡಿ ಮಂಜೂರಾದ ೪೩,೪೫೩ ಕೋಟಿ ರೂ.ಗಳಲ್ಲಿ ಸುಮಾರು ೧೧,೦೦೦ ಕೊಟ್ಟ ರೂ.ಗಳಷ್ಟು

ಹಣ ಬಳಕೆಯಾಗದೆ ಬಾಕಿ ಉಳಿಯಲು ಕಾರಣಗಳೇನು ; ಇದರಿಂದ ಉತ್ತರ ಕರ್ನಾಟಕದ ತಾಲ್ಲೂಕುಗಳು ಅಭಿವೃದ್ಧಿಯಲ್ಲಿ ಹಿಂದುಳಿಯಲು ಕಾರಣರಾದ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆಯೇ ;

(ಉ) ಗೋವಿಂದರಾವ್ ಸಮಿತಿಯು ಶಿಫಾರಸ್ಸು ಮಾಡಿರುವ ೪೩,೯೧೪ ಕೋಟಿ ರೂ.ಗಳ ಹೆಚ್ಚುವರಿ ಆರ್ಥಿಕ ನೆರವನ್ನು ಜಾರಿಗೊಳಿಸಲು ಸರ್ಕಾರ ಕಾಲಮಿತಿಯ ಯೋಜನೆಯನ್ನು ರೂಪಿಸಿದೆಯೇ ; ಈ ಅನುದಾನದಲ್ಲಿ ಕಲಬುರಗಿಯ ೨೫೦ ಹಾಸಿಗೆಗಳ ನೂತನ ಆಸ್ಪತ್ರೆಗೆ ವಿಶೇಷ ಅನುದಾನ ನೀಡಲಾಗುವುದೇ ?

## ಕಲಬುರಗಿ ಕಿದ್ವಾಯಿ ಆಸ್ಪತ್ರೆಯಲ್ಲಿ ತಜ್ಞ ವೈದ್ಯರ ಕೊರತೆ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೫೬ (೬೪೫) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಿಂದ ಕಲಬುರಗಿ ಕಿದ್ವಾಯಿ ಪೆರಿಫೆರಲ್ ಆಸ್ಪತ್ರೆಗೆ ಅತ್ಯಗತ್ಯವಾಗಿರುವ ಮೆಡಿಕಲ್ ಅಂಕೊಲಜಿಸ್ಟ್ (Medical Oncologist) ಹುದ್ದೆ ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈವರೆಗೆ ನೇಮಕಾತಿ ಮಾಡದಿರಲು ಕಾರಣಗಳೇನು ;

(ಆ) ಕಳೆದ ಮೂರು ವರ್ಷಗಳಲ್ಲಿ ಸದರಿ ಆಸ್ಪತ್ರೆಯಲ್ಲಿ ಎಷ್ಟು ಮಂದಿ ಕ್ಯಾನ್ಸರ್ ರೋಗಿಗಳು ಮರಣ ಹೊಂದಿದ್ದಾರೆ ; ತಜ್ಞ ವೈದ್ಯರ ಕೊರತೆಯಿಂದಲೇ ಸಾವುಗಳು ಸಂಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವರ್ಷವಾರು ಮಾಹಿತಿ ನೀಡುವುದು)

(ಇ) ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಅಡಿ ಬಡ ರೋಗಿಗಳು ಚಿಕಿತ್ಸೆ ಪಡೆಯಲು ಸ್ಥಳೀಯವಾಗಿ ಅಂಕೊಲಜಿಸ್ಟ್ ಸಹ ಇಲ್ಲದೆ ಬೆಂಗಳೂರಿನ ಮೇಲೆ ಅವಲಂಬಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಪ್ರಕ್ರಿಯೆಯಿಂದಾಗಿ ರೋಗಿಗಳಿಗೆ ಆಗುತ್ತಿರುವ ವಿಳಂಬವನ್ನು ತಪ್ಪಿಸಲು ಕೈಗೊಂಡಿರುವ ಕ್ರಮಗಳೇನು ;

(ಈ) ಸದರಿ ಕೇಂದ್ರದಲ್ಲಿ ಮಂಜೂರಾದ ಒಟ್ಟು ತಜ್ಞ ವೈದ್ಯರ ಹುದ್ದೆಗಳೆಷ್ಟು ; ಅದರಲ್ಲಿ ಭರ್ತಿಯಾದ ಮತ್ತು ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಖಾಯಂ ಮತ್ತು ಹೊರಗುತ್ತಿಗೆ ಆಧಾರಿತ ಹುದ್ದೆಗಳ ಪ್ರತ್ಯೇಕ ಮಾಹಿತಿ ನೀಡುವುದು)

(ಉ) ಕಲಬುರಗಿಯಲ್ಲಿ ನೂತನವಾಗಿ ನಿರ್ಮಾಣವಾಗುತ್ತಿರುವ ೨೫೦ ಹಾಸಿಗೆಗಳ ಕ್ಯಾನ್ಸರ್ ಆಸ್ಪತ್ರೆಯ ಕಾಮಗಾರಿ ಪ್ರಸ್ತುತ ಯಾವ ಹಂತದಲ್ಲಿದೆ ; ಈ ಆಸ್ಪತ್ರೆಯು ಯಾವ ಕಾಲಮಿತಿಯೊಳಗೆ ಪೂರ್ಣಗೊಂಡು ಸಾರ್ವಜನಿಕರ ಸೇವೆಗೆ ಲಭ್ಯವಾಗಲಿದೆ ?

## ವಿಶ್ವವಿದ್ಯಾಲಯಗಳಲ್ಲಿನ ಖಾಲಿ ಹುದ್ದೆಗಳ ಭರ್ತಿ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೫೭ (೬೪೬) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿನ ಬೋಧಕ ಸಿಬ್ಬಂದಿ ಕೊರತೆ ಮತ್ತು ಶೈಕ್ಷಣಿಕ ಒತ್ತಡದಿಂದಾಗಿ ವಿದ್ಯಾರ್ಥಿಗಳ ಮಾನಸಿಕ ಆರೋಗ್ಯದ ಮೆಲೆ ಉಂಟಾಗುತ್ತಿರುವ ದುಷ್ಪರಿಣಾಮಗಳ ಕುರಿತು ಸುಪ್ರೀಂ ಕೋರ್ಟ್ ನೀಡಿರುವ ಇತ್ತೀಚೀನ ನಿರ್ದೇಶನಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದ ಸರ್ಕಾರಿ ವಿಶ್ವವಿದ್ಯಾಲಯಗಳಲ್ಲಿ ಪ್ರಸ್ತುತ ಎಷ್ಟು ಕುಲಪತಿ(VC), ಕುಲಸಚಿವ (Register) ಮತ್ತು ಬೋಧಕ ಹುದ್ದೆಗಳು ಖಾಲಿ ಇವೆ ; (ವಿಶ್ವವಿದ್ಯಾಲಯವಾರು ಹಾಗೂ ಹುದ್ದೆವಾರು ಸಂಪೂರ್ಣ ವಿವರ ನೀಡುವುದು)

(ಇ) ಸುಪ್ರೀಂ ಕೋರ್ಟ್ ಸೂಚಿಸಿರುವಂತೆ ನಾಲ್ಕು ತಿಂಗಳ ಕಾಲಮಿತಿಯೊಳಗೆ ಈ ಎಲ್ಲಾ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ರಾಜ್ಯ ಸರ್ಕಾರ ಮತ್ತು ರಾಜ್ಯಪಾಲರ ನಡುವಿನ ಸಂಘರ್ಷದಿಂದಾಗಿ ಕುಲಪತಿಗಳ ನೇಮಕಾತಿ ಪ್ರಕ್ರಿಯೆ ನನೆಗುದಿಗೆ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕಾನೂನಾತ್ಮಕ ಸವಾಲುಗಳನ್ನು ಬಗೆಹರಿಸಿ ಶೈಕ್ಷಣಿಕ ಹಿತದೃಷ್ಟಿಯಿಂದ ತ್ವರಿತ ನೇಮಕಾತಿ ಮಾಡಲು ಸರ್ಕಾರ ರೂಪಿಸಿರುವ ಕಾರ್ಯತಂತ್ರವೇನು ;

(ಉ) ಬಾಕಿ ಉಳಿದಿರುವ ವಿದ್ಯಾರ್ಥಿ ವೇತನಗಳನ್ನು (Scholarships) ನಾಲ್ಕು ತಿಂಗಳೊಳಗೆ ವಿತರಿಸಬೇಕೆಂಬ ನ್ಯಾಯಾಲಯದ ಆದೇಶದಂತೆ ರಾಜ್ಯದಲ್ಲಿ ಪ್ರಸ್ತುತ ಎಷ್ಟು ವಿದ್ಯಾರ್ಥಿಗಳಿಗೆ ಸ್ಕಾಲರ್‌ಶಿಪ್ ವಿತರಣೆ ಬಾಕಿ ಇದೆ ; ಇದನ್ನು ಪಾವತಿಸಲು ಸರ್ಕಾರ ಅನುದಾನ ಮೀಸಲಿಟ್ಟಿದೆಯೇ ;

(ಊ) ವಿದ್ಯಾರ್ಥಿಗಳ ಆತ್ಮಹತ್ಯೆ ಪ್ರಕರಣಗಳನ್ನು ತಡೆಗಟ್ಟಲು ಮತ್ತು ಅವರ ಮಾನಸಿಕ ಒತ್ತಡ ನಿವಾರಿಸಲು ಶೈಕ್ಷಣಿಕ ಸಂಸ್ಥೆಗಳಲ್ಲಿ ಕೌನ್ಸಲಿಂಗ್ ಕೇಂದ್ರಗಳನ್ನು ಸ್ಥಾಪಿಸುವ ಮತ್ತು 'ಆತ್ಮಹತ್ಯೆ ದಾಖಲೆ ನಿರ್ವಹಣಾ ವ್ಯವಸ್ಥೆ'ಯನ್ನು ಜಾರಿಗೊಳಿಸುವ ಸುಪ್ರೀಂ ಕೋರ್ಟ್ ನಿರ್ದೇಶನವನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಲಾಗಿದೆಯೇ ?

## ಅಂಗನವಾಡಿ ಆಹಾರದ ಗುಣಮಟ್ಟದ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೫೮ (೬೪೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸುಮಾರು ೭೦ ಸಾವಿರ ಅಂಗನವಾಡಿ ಕೇಂದ್ರಗಳಿಗೆ ಪೂರೈಕೆಯಾಗುತ್ತಿರುವ ಆಹಾರದ ಗುಣಮಟ್ಟ ನಿಯಂತ್ರಣ ವ್ಯವಸ್ಥೆ ಹದಗಟ್ಟಿರುವುದು ಸಕಾರದ ಗಮನಕ್ಕೆ ಬಂದಿದೆಯೇ ;

(ಆ) ಆಹಾರ ಗುಣಮಟ್ಟ ಪರೀಕ್ಷೆ ನಿಯಮಿತಿವಾಗಿ ನಡೆಯದಿರಲು ಮತ್ತು ಸರಬರಾಜುದಾರರ ಆಯ್ಕೆಯಲ್ಲಿ ಪಾರದರ್ಶಕತೆ ಇಲ್ಲದಿರಲು ಕಾರಣಗಳೇನು ;

(ಇ) ಪೋಷಣಾ ಅಭಿಯಾನದಡಿ ಮಕ್ಕಳಿಗೆ ನೀಡುವ ಆಹಾರದ ಗುಣಮಟ್ಟ ಪರೀಕ್ಷಾ ವರದಿಗಳನ್ನು ಸಾರ್ವಜನಿಕನಿಕ ಪರಿಶೀಲನೆಗೆ ಲಭ್ಯವಾಗುವಂತೆ ಮಾಡಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ?

## ಎಪಿಎಲ್ ಕಾರ್ಡ್‌ಗಳ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೫೫೯ (೬೪೯) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯಲ್ಲಿ ಇರುವ ಎಪಿಎಲ್ ಕಾರ್ಡ್‌ಗಳ ಸಂಖ್ಯೆ ಎಷ್ಟು ; ಎಪಿಎಲ್

ಅಡಿಯಲ್ಲಿ ಕಾರ್ಡ್‌ಗಳನ್ನು ಪಡೆಯಲು ಇರುವ ಮಾನದಂಡಗಳೇನು ; ರಾಜ್ಯದಲ್ಲಿರುವ ಎಪಿಎಲ್ ಕಾರ್ಡ್‌ಗಳ ತಾಲ್ಲೂಕುವಾರು ಮಾಹಿತಿಯನ್ನು ಒದಗಿಸುವುದು ;

(ಆ) ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯಲ್ಲಿ ಎಪಿಎಲ್ ಕಾರ್ಡ್‌ಗಳನ್ನು ಕೋರಿ ಬಂದಿರುವ ಅರ್ಜಿಗಳೆಷ್ಟು ; ಬಾಕಿ ಇರುವ ಅರ್ಜಿಗಳ ಎಷ್ಟು ; (ಕಳೆದ ಮೂರು ವರ್ಷಗಳ ಅಂಕಿ-ಅಂಶಗಳನ್ನು ತಾಲ್ಲೂಕುವಾರು ಒದಗಿಸುವುದು)

(ಇ) ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯು ಎಪಿಎಲ್ ಕಾರ್ಡ್‌ದಾರರಿಗೆ ನೀಡುತ್ತಿರುವ ಸೌಲಭ್ಯಗಳೇನು ; ಎಪಿಎಲ್ ಕಾರ್ಡುದಾರರಿಗೆ ಕೇಂದ್ರ ಸರ್ಕಾರದಿಂದ ದೊರೆಯುತ್ತಿರುವ ಸವಲತ್ತುಗಳೇನು ; (ವಿವರಗಳನ್ನು ಒದಗಿಸುವುದು)

(ಈ) ಎಪಿಎಲ್ ಹಿರಿಯ ನಾಗರೀಕ ಕಾರ್ಡ್‌ದಾರರಿಗೆ ಆಯುಷ್ಮಾನ್ ಯೋಜನೆಯ ಅಡಿಯಲ್ಲಿ ನೀಡುತ್ತಿರುವ ವೈದ್ಯಕೀಯ ಸೌಲಭ್ಯಗಳು ಏನು ; ಇದಕ್ಕೆ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರಗಳು ವಾರ್ಷಿಕವಾಗಿ ನೀಡುತ್ತಿರುವ ಅನುದಾನಗಳೆಷ್ಟು ; (ಕಳೆದ ಮೂರು ವರ್ಷಗಳ ಅಂಕಿ-ಅಂಶಗಳನ್ನು ಒದಗಿಸುವುದು)

(ಉ) ಕೇಂದ್ರ ಸರ್ಕಾರವು ಕರ್ನಾಟಕ ರಾಜ್ಯದಲ್ಲಿ ಎಪಿಎಲ್ ಕಾರ್ಡ್‌ದಾರರಿಗೆ ನೀಡುತ್ತಿರುವ ಆಹಾರದ ಪ್ರಮಾಣವೆಷ್ಟು ; ಯಾವ ಯಾವ ರೀತಿಯ ಆಹಾರಗಳನ್ನು ನೀಡಲಾಗುತ್ತಿದೆ ; (ಕಳೆದ ಮೂರು ವರ್ಷಗಳಲ್ಲಿ ಕೇಂದ್ರ ಸರ್ಕಾರವು ರಾಜ್ಯದ ಎಪಿಎಲ್ ಕಾರ್ಡ್‌ದಾರರಿಗೆ ಒದಗಿಸಿರುವ ಆಹಾರಧಾನ್ಯಗಳ ಅಂಕಿ-ಅಂಶಗಳನ್ನು ಒದಗಿಸುವುದು)

## ಬೆಸ್ಕಾಂನ ಎಚ್ ಡಿ ಮತ್ತು ಎಲ್ ಟಿ ಲೈನ್‌ಗಳ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೫೬೦ (೬೫೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ ಅಡಿಯಲ್ಲಿ ಬರುವ ಬೆಂಗಳೂರು ಮಹಾನಗರ ಪಾಲಿಕೆ ( ಗ್ರೇಟರ್ ಬೆಂಗಳೂರು ಆಥಾರಿಟಿ) ಎಷ್ಟು ಉಪ ವಿಭಾಗಗಳಲ್ಲಿ ವಿಂಗಡಿಸಲಾಗಿರುತ್ತದೆ ;

(ಆ) ಗ್ರೇಟರ್ ಬೆಂಗಳೂರು ಆಥಾರಿಟಿ ವ್ಯಾಪ್ತಿಯಲ್ಲಿ ಬೆಸ್ಕಾಂನ ಎಷ್ಟು ಎಚ್ ಡಿ ಮತ್ತು ಎಲ್ ಟಿ ಲೈನ್‌ಗಳು(ಮೇಲ್ಭಾಗದಲ್ಲಿ) ಹಾದು ಹೋಗಿರುತ್ತವೆ ; ಮೇಲ್ಭಾಗದಲ್ಲಿ ಹಾದು ಹೋಗಿರುವ ಈ ಲೈನ್‌ಗಳನ್ನು ಅಳವಡಿಸಿ ಎಷ್ಟು ವರ್ಷಗಳಾಗಿರುತ್ತದೆ ; (ವಿವರಗಳನ್ನು ನೀಡುವುದು)

(ಇ) ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿಯು ಗ್ರೇಟರ್ ಬೆಂಗಳೂರು ಆಥಾರಿಟಿ ವ್ಯಾಪ್ತಿಯುಲ್ಲಿ ಮೇಲ್ಭಾಗದಲ್ಲಿ ಹಾದುಹೋಗಿರುವ ಎಚ್ ಡಿ ಮತ್ತು ಎಲ್ ಟಿ ಲೈನ್‌ಗಳನ್ನು ಮಾರ್ಪಡಿಸಲು ಅಥವಾ ತೆಗೆಯುಲು ಹಾಕಿಕೊಂಡಿರುವ ಕಾರ್ಯಯೋಜನೆಗಳು ಯಾವುವು ; ಇಲ್ಲಿಯವರೆಗೆ ಎಷ್ಟು ಇಂತಹ ಲೈನ್‌ಗಳನ್ನು ತೆಗೆಯಲಾಗಿರುತ್ತದೆ ;

(ಈ) ಗ್ರೇಟರ್ ಬೆಂಗಳೂರು ಆಥಾರಿಟಿ ವ್ಯಾಪ್ತಿಯಲ್ಲಿ ಬೆಸ್ಕಾಂನ ವತಿಯಿಂದ ಮೇಲ್ಭಾಗದಲ್ಲಿ ಹಾದುಹೋಗಿರುವ ಎಚ್ ಡಿ ಮತ್ತು ಎಲ್ ಟಿ ಲೈನ್‌ಗಳನ್ನು ತೆಗೆಯಲು ಬಾಕಿ ಇರುವ ಲೈನ್‌ಗಳ ಮಾಹಿತಿಯನ್ನು ಒದಗಿಸುವುದು ;

(ಉ) ಬೆಂಗಳೂರಿನ ಬೆಸ್ಕಾಂ ಉಪವಿಭಾಗ–೧೮ರ ಅಡಿಯಲ್ಲಿ ಬರುವ ಚಿಕ್ಕ ಕಲ್ಲಸಂದ್ರ ವ್ಯಾಪ್ತಿಯಲ್ಲಿ ಎಷ್ಟು ಎಚ್ ಡಿ ಮತ್ತು ಎಲ್ ಟಿ ಲೈನ್‌ಗಳು ಹಾದುಹೋಗಿರುತ್ತವೆ ; ಪ್ರಸ್ತುತ ಚಾಲ್ತಿಯಲ್ಲಿ ಇರುವ ಅಥವಾ ನಿಷ್ಕ್ರಿಯಗೊಂಡಿರುವ ಲೈನ್‌ಗಳು ಯಾವುವು ? (ಪೂರ್ಣ ವಿವರಗಳನ್ನು ಒದಗಿಸುವುದು)

## ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಪಾಲಿಸುತ್ತಿರುವ ಸರ್ಕಾರಿ ನಿಯಮಾವಳಿಗಳ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೫೬೧ (೬೫೧) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ನೌಕರರ ಸೇವಾ ನಿಯಮಗಳ ಅನ್ವಯ ಸರ್ಕಾರಿ ನೌಕರರ ಚಲನ–ವಲನ ವಹಿಯನ್ನು ಮತ್ತು ನಗದು ಘೋಷಣೆಯ ವಹಿಯನ್ನು ನಿರ್ವಹಣೆ ಮಾಡುವುದು ಕಡ್ಡಾಯವಾಗಿದ್ದು, ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಸದರಿ ನಿಯಮಾವಳಿ ಪಾಲಿಸಲಾಗುತ್ತಿದೆಯೇ ; (ವಹಿಗಳ ನಿರ್ವಹಣೆ ಕುರಿತು ಜಿಲ್ಲಾ ಮತ್ತು ತಾಲ್ಲೂಕುವಾರು ಮಾಹಿತಿಯನ್ನು ಒದಗಿಸುವುದು)

(ಆ) ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು (ಆಡಳಿತ) ಇವರು ಪ್ರತಿ ಜಿಲ್ಲೆಯಲ್ಲಿ ಚಲನ–ವಲನ ವಹಿ ಮತ್ತು ನಗದು ಘೋಷಣೆ ವಹಿ ನಿರ್ವಣೆ ಮಾಡಿರುತ್ತಾರೆಯೇ ; (ಮಾಡಿದ್ದಲ್ಲಿ, ಕಳೆದ ಎರಡು ವರ್ಷಗಳ ಮಾಹಿತಿಯನ್ನು ಒದಗಿಸುವುದು)

(ಇ) ರಾಜ್ಯದ ಶಾಲಾ ಶಿಕ್ಷಣ ಇಲಾಖೆಯಲ್ಲಿ ಎಷ್ಟು ಮಂದಿ ಮತ್ತು ಯಾವ ಯಾವ ವಿಭಾಗದಲ್ಲಿ ಉಪನಿರ್ದೇಶಕರು ಕಾರ್ಯ

ನಿರ್ವಹಿಸುತ್ತಿದ್ದಾರೆ ; ಇವರಲ್ಲಿ ಎಷ್ಟು ಮಂದಿಯ ಮೇಲೆ ಸಾರ್ವಜನಿಕ ದೂರುಗಳು ಬಂದಿರುತ್ತವೆ ; ಎಷ್ಟು ಜನರ ಮೇಲೆ ಇಲಾಖಾ ವಿಚಾರಣೆ ನಡೆಯುತ್ತಿದೆ ; ಮುಕ್ತಾಯಗೊಂಡ ಪ್ರಕರಣಗಳು ಎಷ್ಟು ; ಬಾಕಿ ಇರುವ ಪ್ರಕರಣಗಳು ಎಷ್ಟು ; (ಮೂರು ವರ್ಷಗಳ ಮಾಹಿತಿಯನ್ನು ಒದಗಿಸುವುದು)

(ಈ) ಶಾಲಾ ಶಿಕ್ಷಣ ಇಲಾಖೆಯಲ್ಲಿ ಉಪನಿರ್ದೇಶಕರಿಗೆ ಪದೋನ್ನತಿ ನೀಡುವ ಸಂದರ್ಭದಲ್ಲಿ ಸಿ ಅಂಡ್ ಆರ್ ನಿಯಮಗಳ ಪ್ರಕಾರ ಶಾಲಾ ಶಿಕ್ಷಣ ಇಲಾಖೆ ಅನುಸರಿಸುತ್ತಿರುವ ಕ್ರಮಗಳೇನು ; ಈ ಸಂಬಂಧ ಇರುವ ಸರ್ಕಾರಿ ಸುತ್ತೋಲೆಗಳು ಏನು ; ಪ್ರಸ್ತುತ ಎಷ್ಟು ಉಪನಿರ್ದೇಶಕರಿಗೆ ಪದೋನ್ನತಿ ನೀಡಲು ಅವಕಾಶ ಇರುತ್ತದೆ ; ಸಕಾಲದಲ್ಲಿ ಅವರಿಗೆ ಅದನ್ನು ನೀಡಲಾಗಿದೆಯೇ ?

## ರಾಜ್ಯದಲ್ಲಿರುವ ಆಸ್ಪತ್ರೆಗಳು ಹಾಗೂ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೫೬೨ (೬೫೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇರುವ ಸಾರ್ವಜನಿಕ ಆಸ್ಪತ್ರೆಗಳು ಎಷ್ಟು ; ಇವುಗಳಲ್ಲಿ ಪ್ರಾಥಮಿಕ ಆಸ್ಪತ್ರೆಗಳು ಎಷ್ಟು ಮತ್ತು ಅದರ ಮೇಲ್ಪಟ್ಟು ಆಸ್ಪತ್ರೆಗಳು ಎಷ್ಟು ;

(ಆ) ರಾಜ್ಯದಲ್ಲಿ ಇರುವ ನೂರು, ಇನ್ನೂರು ಮತ್ತು ಅದರ ಮೇಲ್ಪಟ್ಟ ಹಾಸಿಗೆಗಳ ಸರ್ಕಾರಿ ಆಸ್ಪತ್ರೆಗಳು ಎಷ್ಟು ; (ಪೂರ್ಣ ವಿವರಗಳನ್ನು ಒದಗಿಸುವುದು)

(ಇ) ರಾಜ್ಯದಲ್ಲಿ ಇರುವ ಸರ್ಕಾರದ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳು ಎಷ್ಟು ಮತ್ತು ಯಾವ ಯಾವ ಸ್ಥಳಗಳಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳನ್ನು ಮಾಡಲಾಗುತ್ತದೆ ;

(ಈ) ರಾಜ್ಯದ ಉದ್ದೇಶಿತ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಿಗೆ ಹಂಚಿಕೆಯಾಗುವ ಅನುದಾನವೆಷ್ಟು ; ಇದರಲ್ಲಿ ಬಿಡುಗಡೆಯಾಗಿರುವ ಅನುದಾನ ಎಷ್ಟು ;

(ಉ) ರಾಜ್ಯದ ಯಾವ ಯಾವ ಸ್ಥಳಗಳಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಾಣದ ಕಾಮಗಾರಿ ನಡೆಯುತ್ತಿದೆ ಮತ್ತು ಕಾಮಗಾರಿ ಪೂರ್ಣಗೋಳಿಸಲು ನಿಗದಿಗೊಳಿಸಿರುವ ಸಮಯವೆಷ್ಟು ?

## ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿ ವೈದ್ಯಕೀಯ ಸಿಬ್ಬಂದಿ ಹಾಗೂ ವೈದ್ಯಕೀಯ ಪರಿಕರಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೬೩ (೬೫೩) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳ ಸಂಖ್ಯೆ ಎಷ್ಟು ; ಅವು ಯಾವುವು ; ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳನ್ನು ಪ್ರಾರಂಭಿಸಲು ಮಂಜೂರಾತಿ ಯಾವಾಗ ನೀಡಲಾಗಿತ್ತು ಮತ್ತು ಯಾವಾಗ ಪ್ರಾರಂಭಿಸಲಾಗಿತ್ತು ; ಪ್ರತಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳ ಪ್ರಾರಂಭಿಕ ಯೋಜನಾ ವೆಚ್ಚವೆಷ್ಟು ಮತ್ತು ಅಂತಿಮವಾಗಿ ಆಸ್ಪತ್ರೆ ಪೂರ್ಣಗೊಂಡಾಗ ಒಟ್ಟು ಎಷ್ಟು ವೆಚ್ಚವಾಗಿದೆ ;

(ಆ) ಪ್ರತಿ ಸಂಸ್ಥೆಯಲ್ಲಿ ವಾರ್ಷಿಕವಾಗಿ ಎಷ್ಟು ಜನರಿಗೆ ಚಿಕಿತ್ಸೆ ನೀಡಲಾಗುತ್ತಿದೆ ; ಪ್ರತಿ ಆಸ್ಪತ್ರೆಗೆ ಸರ್ಕಾರದಿಂದ ವಾರ್ಷಿಕವಾಗಿ ಎಷ್ಟು ಅನುದಾನ ನೀಡಲಾಗುತ್ತಿದೆ ; ಪ್ರತಿ ಸೂಪರ್ ಸ್ಪೆಷಾಲಿಟಿ ಆಸ್ಪತ್ತೆಗಳಲ್ಲಿ ಇರುವ ಬೆಡ್‌ಗಳ ಸಂಖ್ಯೆಯೆಷ್ಟು ;

(ಇ) ಈ ಆಸ್ಪತ್ರೆಗಳಲ್ಲಿ ಖಾಸಗಿ ಆಸ್ಪತ್ರೆಗಳ ಮಟ್ಟಕ್ಕೆ ಸಮಾನವಾದ ಪ್ರಮಾಣಿತ ವೈದ್ಯಕೀಯ ಪರಿಕರಗಳು ಹಾಗೂ ಆಧುನಿಕ ತಂತ್ರಜ್ಞಾನಾಧರಿತ ಸೇವೆಗಳನ್ನು ಒದಗಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ ; ಕೈಗೊಂಡಿಲ್ಲದಿದ್ದರೆ, ಈ ಕುರಿತು ಯಾವಾಗ ಕ್ರಮ ಕೈಗೊಳ್ಳಲಾಗುವುದು ;

(ಈ) ಈ ಆಸ್ಪತ್ರೆಗಳಲ್ಲಿ ಅನುಮೋದಿತ ಹುದ್ದೆಗಳಾದ ವೈದ್ಯರು, ನರ್ಸಿಂಗ್ ಸಿಬ್ಬಂದಿ ಮತ್ತು ತಾಂತ್ರಿಕಾ ಸಿಬ್ಬಂದಿ ಸೇರಿದಂತೆ ಒಟ್ಟು ಹುದ್ದೆಗಳು ಎಷ್ಟು ; ಅದರಲ್ಲಿ ಭರ್ತಿಯಾದ ಹುದ್ದೆಗಳೆಷ್ಟು ; ಖಾಲಿ ಹುದ್ದೆಗಳೆಷ್ಟು ; ಹುದ್ದೆಗಳಿಗೆ ನೇಮಕಾತಿಯಾಗದಿರಲು ಕಾರಣಗಳೇನು ;

(ಉ) ಖಾಲಿ ಹುದ್ದೆಗಳನ್ನು ಭರ್ತಿಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು ; ಪೂರ್ಣ ಪ್ರಮಾಣದ ನೇಮಕಾತಿಯನ್ನು ಯಾವಾಗ ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ ;

(ಊ) ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳಲ್ಲಿ ವೈದ್ಯಕೀಯ ಸಿಬ್ಬಂದಿ ಹಾಗೂ ಮೂಲಸೌಕರ್ಯಗಳ ಕೊರತೆಯಿಂದ ಸಾರ್ವಜನಿಕರು ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಸಮಸ್ಯೆಯನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ನಿರ್ದಿಷ್ಟ ಉಪ ಕ್ರಮಗಳು ಯಾವುವು ?

# ಸಾರ್ವಜನಿಕ ವಿತರಣಾ ವ್ಯವಸ್ಥೆ (PDS) ಧಾನ್ಯಗಳು ದುರುಪಯೋಗ ತಡೆಯುವ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೬೪ (೬೫೪) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲಿ ಸಾರ್ವಜನಿಕ ವಿತರಣೆ ವ್ಯವಸ್ಥೆ (PDS) ಅಡಿಯಲ್ಲಿ ಪ್ರತಿ ತಿಂಗಳೂ ಪಡಿತರ ಚೀಟಿದಾರರಿಗೆ ಒಟ್ಟು ಎಷ್ಟು ಪ್ರಮಾಣದ ಆಹಾರ ಧಾನ್ಯಗಳನ್ನು (ಅಕ್ಕಿ, ಗೋಧಿ, ಬೇಳೆ ಕಾಳುಗಳು ಇತ್ಯಾದಿ) ವಿತರಿಸಲಾಗುತ್ತಿದೆ ; (ಜಿಲ್ಲಾವಾರು ಫಲಾನುಭವಿಗಳ ಮಾಹಿತಿ ಒದಗಿಸುವುದು)

(ಆ) ಪಡಿತರ ಧಾನ್ಯಗಳ ಗುಣಮಟ್ಟದ ಮಾನದಂಡಗಳು ಯಾವುವು ; ಗುಣಮಟ್ಟ ಪರಿಶೀಲನೆ ಎಷ್ಟು ಅವಧಿಗೊಮ್ಮೆ ನಡೆಯುತ್ತದೆ ; ಪಡಿತರ ಮೂಲಕ ವಿತರಿಸಲ್ಪಡುವ ಧಾನ್ಯಗಳ ದುರುಪಯೋಗಗೊಂಡ ಮುಕ್ತ ಮಾರುಕಟ್ಟೆಯಲ್ಲಿ ಮಾರಾಟವಾಗುತ್ತಿರುವ ಬಗ್ಗೆ ಹಾಗೂ ಕಲವಡೆ ಖಾಸಗಿ ಅಂಗಡಿಯಲ್ಲಿಯೇ ಪಡಿತರ ಅಂಗಡಿಯಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಇಂತಹ ಪ್ರಕರಣಗಳೆಷ್ಟು ; ಪಡಿತರ ಧಾನ್ಯ ದುರುಪಯೋಗ ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಆಹಾರ ಪದ್ಧತಿಯ ವ್ಯತ್ಯಾಸದಿಂದಾಗಿ ಸ್ಥಳೀಯ ಮಟ್ಟದಲ್ಲಿ ಉಪಯೋಗವಾಗದ ಧಾನ್ಯಗಳನ್ನು ಫಲಾನುಭವಿಗಳು ಖಾಸಗಿ ಅಂಗಡಿಗಳಿಗೆ / ಮಾರುಕಟ್ಟೆಗೆ ಮಾರಾಟ ಮಾಡುತ್ತಿರುವ ಕುರಿತು ಇಲಾಖೆಯಿಂದ ನೈಜತೆ ಪರಿಶೀಲನೆ (Fact Check) ನಡೆಸಲಾಗಿದೆಯೇ ; ಲಭ್ಯವಿದ್ದರೆ ವರದಿ ಪ್ರತಿ ನೀಡುವುದು, ಪಡಿತರ ವ್ಯವಸ್ಥೆಯ ಮೂಲಕ ವಿತರಸಲಾಗುತ್ತಿರುವ ಧಾನ್ಯಗಳನ್ನು ಬಳಸಲಾಗುತ್ತಿಲ್ಲವೆಂದಾದರೆ ವಿತರಣಾ ವ್ಯವಸ್ಥೆಯ ಔಚಿತ್ಯವೇನು ;

(ಈ) ಸ್ಥಳೀಯ ಆಹಾರ ಪದ್ಧತಿ ಮತ್ತು ಅಗತ್ಯಗಳಿಗೆ ಅನುಗುಣವಾಗಿ ಸ್ಥಳೀಯವಾಗಿ ಉತ್ತಪಾದನೆಯಾಗುವ ಧಾನ್ಯಗಳು ಮತ್ತು ಬೇಳೆಕಾಳುಗಳನ್ನು ವಿತರಿಸಲಾಗುತ್ತಿದೆಯೇ ; ಇಲ್ಲದಿದ್ದರೆ, ಅದರ ಕಾರಣವೇನು ;

(ಉ) ಕರಾವಳಿ ಪ್ರದೇಶಗಳಲ್ಲಿ ಹೆಚ್ಚಾಗಿ ಕುಚ್ಚಲಕ್ಕಿಯನ್ನು ಮುಖ್ಯ ಆಹಾರ ಧಾನ್ಯವಾಗಿ ಉಪಯೋಗಿಸುತ್ತಿದ್ದು ಸ್ಥಳೀಯ ಅಗತ್ಯಗಳಿಗೆ ಹೊಂದಿಕೆಯಾಗುವ ರೀತಿಯಲ್ಲಿ ಧಾನ್ಯಗಳ ವಿತರಣೆಯನ್ನು ಪರಿಷ್ಕರಿಸುವ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದ ಆರೋಗ್ಯ ಇಲಾಖೆಯ ವಿವಿಧ ಹಂತದ ಆರೋಗ್ಯ ಕೇಂದ್ರಗಳಿಗೆ ಅಗತ್ಯ ಔಷಧಿಗಳನ್ನು ಪೂರೈಸುವ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೬೫ (೬೫೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸಕ್ತ ಸಾಲಿನಲ್ಲಿ ರೂ. ೮೮೦ ಕೋಟಿ ಮೌಲ್ಯದ ೮೯೦ ವಿಧಗಳ ಔಷಧಿಗಳನ್ನು ಖರೀದಿಸಲು ಆರ್ಥಿಕ ಇಲಾಖೆಯಿಂದ

ಅನುಮೋದನೆ ದೊರೆತೆ ೭ ತಿಂಗಳು ಕಳೇದರೂ, ಕರ್ನಾಟಕ ರಾಜ್ಯ ವೈದ್ಯಕೀಯ ಸರಬರಾಜು ನಿಗಮ (ಕೆಎಸ್‌ಎಂಎಸ್‌ಸಿಎಲ್), ವತಿಯಿಂದ ಔಷಧ ಖರೀದಿ ಪ್ರಕ್ರಿಯೆ ಪೂರ್ಣಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಪೂರ್ಣಗೊಳ್ಳದಿರುವುದಕ್ಕೆ ಕಾರಣಗಳೇನು ;

(ಆ) ಔಷಧಗಳ ಕೊರತೆಯಿಂದ ಜ್ವರ, ನ್ಯುಮೋನಿಯ, ಕ್ಯಾನ್ಸರ್, ಅಸ್ತಮಾ, ರಕ್ತದೊತ್ತಡ, ಹೃದಯಾಘಾತ, ಅನಸ್ತೀಶಿಯಾ ಸೇರಿದಂತೆ ವಿವಿಧ ಕಾಯಿಲೆಗಳ ಚಿಕಿತ್ಸೆಗೆ ಅಗತ್ಯವಿರುವ ಪ್ಯಾರಸಿಟಮಾಲ್, ಅಜಿಥ್ರೊಮೈಸಿನ್, ಡಿಕ್ಲೋಫೆನಾಕ್, ಲೆವೊಥೈರಾಕ್ಸಿನ್ ಸೇರಿದಂತೆ ಮೂಲಭೂತ ಹಾಗೂ ತುರ್ತು ಚಿಕಿತ್ಸೆಗೆ ಅಗತ್ಯವಾದ ಮಾತ್ರಗಳು ಮತ್ತು ಚುಚ್ಚುಮದ್ದು ಔಷಧಗಳ ಕೊರತೆ ಉಂಟಾಗಿರುವುದೆ ; ಕೊರತೆ ಇದ್ದಲ್ಲಿ, ಸರ್ಕಾರ ಕೈಗೊಂಡಿರುವ ತುರ್ತು ಕ್ರಮಗಳೇನು ;

(ಇ) ನಿಗಮದಲಿ ಹಲವು ಟೆಂಡರ್‌ಗಳು ಅಂತಿಮ ಹಂತದಲ್ಲಿದ್ದರೂ ಕಾರ್ಯಾದೇಶ ಪತ್ರ ನೀಡಲು ವಿಳಂಬವಾಗುತ್ತಿದೆಯೇ ; ಟೆಂಡರ್ ಪ್ರಕ್ರಿಯೆ ಪೂರ್ಣಗೊಳ್ಳಲು ಮತ್ತು ಔಷಧ ದಾಸ್ತಾನು ಮಾಡಲು ಇನ್ನೂ ೩–೪ ತಿಂಗಳು ಹಿಡಿಯಲ್ಲಿದ್ದು ಈ ವಿಳಂಬಕ್ಕೆ ಕಾರಣವೇನು ;

(ಈ) ಔಷಧ ಖರೀದಿ ಪ್ರಕ್ರಿಯೆ ವೇಗಗೊಳಿಸಲು ಖಾಲಿ ಹುದ್ದೆಗಳನ್ನು ಭರ್ತಿಗೊಳಿಸಲು ಹಾಗೂ ಟೆಂಡರ್ ವಿಳಂಬ ತಪ್ಪಿಸಲು ಸರ್ಕಾರ ಯಾವ ಕಾಲಮಿತಿಯೊಳಗೆ ಯಾವ ರೀತಿಯ ಕ್ರಮಗಳನ್ನು ತೆಗೆದುಕೊಳ್ಳಲಿದೆ ?

# ನದಿ ತೀರ ಪ್ರದೇಶಗಳ ಮತ್ತು ಜನವಸತಿ ಪ್ರದೇಶಗಳಲ್ಲಿ ಪರಿಸರ ಮಾಲಿನ್ಯ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೬೬ (೬೫೬) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದ ನದಿ ತೀರ ಪ್ರದೇಶಗಳ ಮತ್ತು ಜನವಸತಿ ಪ್ರದೇಶಗಳಲ್ಲಿ ಮೀನು ಸಂಸ್ಕರಣೆ ಹಾಗೂ ಇತರೆ ಕೈಗಾರಿಕಾ ಘಟಕಗಳು ಕಾರ್ಯನಿರ್ವಹಿಸುತ್ತಿರುವುದು ಈಗಾಗಲೇ ಸರ್ಕಾರದ ಗಮನಕ್ಕೆ ಬಂದಿದ್ದು ಮಾಲಿನ್ಯ ಮೂಲಗಳನ್ನು ತಡೆಗಟ್ಟಲು ರಚಿಸಿದ ಕ್ರಿಯಾಯೋಜನೆಗಳೇನು ;

(ಆ) ಕೈಗಾರಿಕೆ ಮತ್ತು ಮನೆಗಳ ಘನ ಮತ್ತು ದ್ರವ ತ್ಯಾಜ್ಯವನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡಲಾಗುತ್ತಿರುವುದನ್ನು ಖಚಿತಪಡಿಸಿಕೊಳ್ಳಲು ಮತ್ತು ಉಲ್ಲಂಘಿಸಿರುವ ಪ್ರಕರಣಗಳಲ್ಲಿ ನೋಟಿಸು, ಮುಚ್ಚುಗಡ ಆದೇಶ ಮತ್ತು ಪರಿಹಾರ ಮೊತ್ತ ವಿಧಿಸಿರುವ ಪ್ರಕರಣಗಳೆಷ್ಟು ;

(ಇ) ದೂರುಗಳಿಗೆ ಕುರಿತಂತೆ ನೀರಿನ ಗುಣಮಟ್ಟ ಪರಿಶೀಲನೆಗಾಗಿ ಸಂಗ್ರಹಿಸಲಾದ ನೀರಿನ ಮಾದರಿಗಳ ಸಂಖ್ಯೆ ಎಷ್ಟು ; ಈ ಪರೀಕ್ಷಾ ವರದಿಗಳ ಪೈಕಿ "ಬಿ" ವರ್ಗಕ್ಕೆ ಬರುವ ವರದಿಗಳೆಷ್ಟು ; ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯ ನದಿ ನೀರಿನ ವರ್ಗೀಕರಣಗಳಾವುವು ನದಿ ನೀರಿನ ವರ್ಗೀಕರಣಗಳ ಪೈಕಿ ಯಾವ ಪ್ರಕಾರದ ವರ್ಗೀಕರಣ ಸುರಕ್ಷಿತ ಮತ್ತು ಹೇಗೆ ;

(ಈ) ದಕ್ಷಿಣ ಕನ್ನಡ, ಉಡುಪಿ ಹಾಗೂ ಉತ್ತರ ಕನ್ನಡ ಜಿಲ್ಲೆಗಳ ಕರಾವಳಿ ಭಾಗದ ನದಿ ತೀರ ಪ್ರದೇಶಗಳಲ್ಲಿ ಕಟ್ಟಡಗಳಿಂದ ಶುದ್ಧೀಕರಿಸದ ತ್ಯಾಜ್ಯವನ್ನು ನದಿಗಳಿಗೆ ಬಿಡುತ್ತಿರುವ ಕುರಿತು ಇ ದೂರುಗಳ ಬಗ್ಗೆ ಇದುವರೆಗೆ ಕೈಗೊಂಡಿರು ಕ್ರಮಗಳೇನು ; ಮಾಲಿನ್ಯ ಬಗ್ಗೆ ಮಾದ್ಯಮ ಮತ್ತು ಸಾಮಾಜಿಕ ಜಾಲತಾಣಗಳಲ್ಲಿ ಪ್ರಕಟವಾದ ವರದಿಗಳ ಆಧಾರದಲ್ಲಿ ಕ್ರಮವಹಿಸದಿರಲು ಕಾರಣವೇನು ;

(ಉ) ಎಲ್ಲ ಕಟ್ಟಡಗಳ ಮಾಲಿಕರಿಗೆ ಗೃಹ ತ್ಯಾಜ್ಯವನ್ನು ತ್ಯಾಜ್ಯ ಸಂಸ್ಕರಣ ಘಟಕಗಳ ಮೂಲಕ ಸಂಸ್ಕರಿಸಲು ಸೂಚಿಸಲಾಗಿದೆಯೇ ; ಸಾರ್ವಜನಿಕ ಆರೋಗ್ಯದ ದೃಷ್ಟಿಯಿಂದ ನದಿ ತೀರ ಪ್ರದೇಶಗಳ ಪರಿಸರ ಸಂರಕ್ಷಣೆಗೆ ಸಮಗ್ರ ಮತ್ತು ಕಾಲಬದ್ಧ ಕಾರ್ಯಯೋಜನೆಯನ್ನು ಯಾವ ಕಾಲಮಿತಿಯೊಳಗೆ ಅನುಷ್ಠಾನಗೊಳಿಸಲಾಗುವುದು ?

## ಸಮೂಹ ಸಂಪನ್ಮೂಲ ಕೇಂದ್ರಗಳಿಗೆ (CRC) ಶಾಲೆಗಳ ವಿದ್ಯಾರ್ಥಿ ದತ್ತಾಂಶವನ್ನು ದಾಖಲಿಸುವ ಜವಾಬ್ದಾರಿ ವಹಿಸುವ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೬೭ (೬೫೭) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಶಾಲಾ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸಮೂಹ ಸಂಪನ್ಮೂಲ ಕೇಂದ್ರಗಳ (CRC) ಸಂಖ್ಯೆ ಎಷ್ಟು ; ಎಷ್ಟು ಕೇಂದ್ರಗಳಿಗೆ ಸಮೂಹ

ಸಂಪನ್ಮೂಲ ವ್ಯಕ್ತಿಗಳನ್ನು (CRP) ನೇಮಕ ಮಾಡಲಾಗಿದೆ ; ನೇಮಕಾತಿಗೆ ಸರ್ಕಾ ನಿಗದಿಪಡಿಸಿರುವ ಅರ್ಹತೆ ಮತ್ತು ಮಾನದಂಡಗಳೇನು ;

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಎಷ್ಟು ಸಮೂಹ ಸಂಪನ್ಮೂಲ ಕೇಂದ್ರಗಳಿಗೆ ಸ್ವಂತ ಕಟ್ಟಡಗಳನ್ನು ಒದಗಿಸಲಾಗಿದೆ ; ಇನ್ನೂ ಬಾಡಿಗೆ/ ಇತರೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಮೂಹ ಸಂಪನ್ಮೂಲ ಕೇಂದ್ರಗಳೆಷ್ಟು ; ಇದರಿಂದಾಗಿ ಆಡಳಿತ ಮತ್ತು ಶೈಕ್ಷಣಿಕ ಚಟುವಟಿಕೆಗಳ ಮೇಲೆ ಉಂಟಾಗುತ್ತಿರುವ ಪರಿಣಾಮವೇನು ;

(ಇ) ಸಮೂಹ ಸಂಪನ್ಮೂಲ ಕೇಂದ್ರಗಳಿಗೆ ಈವರೆಗೆ ಒದಗಿಸಲಾಗಿರುವ ಮೂಲಭೂತ ಸೌಲಭ್ಯಗಳು ಯಾವುವು ; ವಾರ್ಷಿಕ ನಿರ್ವಹಣೆ ಮತ್ತು ಕಾರ್ಯಾಚರಣೆಗೆ ಸರ್ಕಾರದಿಂದ ಪ್ರತ್ಯೇಕ ಅನುದಾನವನ್ನು ನೀಡಲಾಗಿದೆಯೇ ; ಸಮೂಹ ಸಂಪನ್ಮೂಲ ವ್ಯಕ್ತಿಗಳಿಗೆ ನಿಗದಿತ ಕಾರ್ಯ ಹಂಚಿಕೆ ಮಾಡಲಾಗಿದೆಯೇ ; ಪ್ರಸ್ತುತ ಅವರ ಜವಾಬ್ದಾರಿಗಳು ಮತ್ತು ಕರ್ತವ್ಯಗಳೇನು ;

(ಈ) ರಾಜ್ಯದಲ್ಲಿ CRC ಕೇಂದ್ರಗಳು ಸುಸಜ್ಜಿತ ಕಟ್ಟಡಗಳನ್ನು ಹೊಂದಿರುವ ಜಿಲ್ಲೆಗಳಲ್ಲಿ ಪ್ರತಿ ಕೇಂದ್ರಕ್ಕೂ ಕನಿಷ್ಠ ಒಂದು ಕಂಪ್ಯೂಟರ್/ ಲ್ಯಾಪ್ ಟಾಪ್ ಹಾಗೂ ಇಂಟರ್‌ನೆಟ್ ಸೌಲಭ್ಯ ಒದಗಿಸಿ, ಸಂಬಂಧಿತ ವ್ಯಾಪ್ತಿಯ ಶಾಲೆಗಳ ವಿದ್ಯಾರ್ಥಿ ದತ್ತಾಂಶವನ್ನು ಶಾಲಾ ಮುಖ್ಯ ಶಿಕ್ಷಕರಿಂದ ಭೌತಿಕ ದೃಢೀಕರಣದೊಂದಿಗೆ ಸಂಗ್ರಹಿಸಿ ದಾಖಲಿಸುವ ಜವಾಬ್ದಾರಿಯನ್ನು CRC ಗಳಿಗೆ ವಹಿಸುವ ಬಗ್ಗೆ ಸರ್ಕಾರದ ನಿಲುವೇನು ;

(ಉ) ಪ್ರಸ್ತುತ ಮುಖ್ಯ ಶಿಕ್ಷಕರಿಗೆ ಶೈಕ್ಷಣಿಕ ಚಟುವಟಿಕೆಗೆ ಸಮಯಾವಕಾಶವಿಲ್ಲದಿದ್ದು ಶೈಕ್ಷಣಿಕ ವರದಿಗಳ ಜವಾಬ್ದಾರಿಯನ್ನು CRC ಗಳಿಗೆ ವಹಿಸುವ ಮೂಲಕ ಮುಖ್ಯ ಶಿಕ್ಷಕರು/ ಶಿಕ್ಷಕರು ಆಡಳಿತಾತ್ಮಕ ಕಾರ್ಯಗಳಿಂದ ಭಾಗಷಃ ಮುಕ್ತರಾಗಿ ಬೋಧನ ಚಟುವಟಿಕೆಗಳ ಮೇಲೆ ಹೆಚ್ಚಿನ ಗಮನ ಹರಿಸಲು ಸಾಧ್ಯವಾಗಲು ನಿಟ್ಟಿನಲ್ಲಿ ಸರ್ಕಾರ ಯಾವಾಗ ಕ್ರಮವಹಿಸುವುದು ?

## ನಕಲಿ ಎಂ.ಫಿಲ್ ಮತ್ತು ಪಿಎಚ್.ಡಿ ಪ್ರಮಾಣ ಪತ್ರ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

*೫೬೮ (೬೫೮)* ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕೆಲವು ಖಾಯಂ ಬೋಧಕರು ಮತ್ತು ಕೆಲವು ಅತಿಥಿ ಉಪನ್ಯಾಸಕರು 'ನಕಲಿ' ಎಂ.ಫಿಲ್. ಮತ್ತು ಪಿಎಚ್.ಡಿ ಪ್ರಮಾಣಪತ್ರ ಹಾಗೂ ಕೆಲವರು ವಿಶೇಷಚೇತನರು 'ನಕಲಿ' ಪ್ರಮಾಣಪತ್ರ ನೀಡಿ ಕೆಲಸಕ್ಕೆ ಸೇರಿದ್ದಾರೆ ಎಂಬ ದೂರಗಳು ಕೇಳಿಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಅಭ್ಯರ್ಥಿಗಳು ಹಾಜರುಪಡಿಸಿರುವ ಪ್ರಮಾಣಪತ್ರಗಳ ನೈಜತೆ ಪರಿಶೀಲಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಇ) ಈಗಾಗಲೇ, ಪರಿಶೀಲಿಸಲಾಗಿರುವ ಪ್ರಮಾಣಪತ್ರಗಳ ನೈಜತೆ ಪೈಕಿ ಎಷ್ಟು ಸಂಖ್ಯೆಯ ಖಾಯಂ ಬೋಧಕರು ಮತ್ತು ಅತಿಥಿ ಉಪನ್ಯಾಸಕರು ಹಾಜರುಪಡಿಸಿರುವ ಪ್ರಮಾಣಪತ್ರಗಳು

ನೈಜತೆಯಿಂದ ಕೂಡಿಲ್ಲದಿರುವುದು ದೃಢಪಟ್ಟಿದೆ ; (ಜಿಲ್ಲಾವಾರು, ಪ್ರಮಾಣಪತ್ರವಾರು(ಎಂ.ಫಿಲ್. ಮತ್ತು ಪಿಎಚ್.ಡಿ ಹಾಗೂ ವಿಶೇಷಚೇತನರು ಖಾಯಂ ಬೋಧಕರು ಮತ್ತು ಅತಿಥಿ ಉಪನ್ಯಾಸಕರುಗಳ ಸಂಪೂರ್ಣ ವಿವರ ನೀಡುವುದು)

(ಈ) ನಕಲಿ ಪ್ರಮಾಣಪತ್ರಗಳನ್ನು ಹಾಜರುಪಡಿಸಿ ಕೆಲಸ ಗಿಟ್ಟಿಸಿಕೊಂಡವರ (ಖಾಯಂ ಬೋಧಕರು ಮತ್ತು ಅತಿಥಿ ಉಪನ್ಯಾಸಕರು) ವಿರುದ್ಧ ಸರ್ಕಾರ ತೆಗೆದುಕೊಳ್ಳಬಹುದಾದ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಮಧ್ಯಾಹ್ನದ ಬಿಸಿಯೂಟ ಯೋಜನೆ ವಿಸ್ತರಿಸುವ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೫೬೯ (೬೫೯) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಧ್ಯಾಹ್ನ ಬಿಸಿಯೂಟ ಯೋಜನೆಯನ್ನು ಮುಂದಿನ ಶೈಕ್ಷಣಿಕ ವರ್ಷದಿಂದ ಸರ್ಕಾರಿ ಮತ್ತು ಅನುದಾನಿತ ಪೂರ್ವ ಪ್ರಾಥಮಿಕ ಮತ್ತು ಪದವಿ ಪೂರ್ವ (ಪಿಯುಸಿ) ವಿದ್ಯಾರ್ಥಿಗಳಿಗೂ ವಿಸ್ತರಿಸಲು ಸರ್ಕಾರ ಉದ್ದೇಶಿಸಿದೆಯೇ ;

(ಆ) ಇದ್ದಲ್ಲಿ, ಈ ಯೋಜನೆ ಬೇಕಾಗಬಹುದಾದ ಹೆಚ್ಚುವರಿ ಅನುದಾನ ಎಷ್ಟು ; ಒಟ್ಟಾರೆ ಮಧ್ಯಾಹ್ನದ ಬಿಸಿಯೂಟ ಯೋಜನೆಗೆ ವಾರ್ಷಿಕವಾಗಿ ಭರಿಸಬೇಕಾಗಬಹುದಾದ ಅಂದಾಜು ವೆಚ್ಚ ಎಷ್ಟು ; (ವಿವರ ನೀಡುವುದು)

(ಇ) ಪೂರ್ವ ಪ್ರಾಥಮಿಕ ಮತ್ತು ಪಿಯುಸಿ ವಿದ್ಯಾರ್ಥಿಗಳಿಗೆ ಮಧ್ಯಾಹ್ನದ ಬಿಸಿಯೂಟ ಯೋಜನೆಯನ್ನು ವಿಸ್ತರಿಸುತ್ತಿರುವುದರಿಂದ ಹೆಚ್ಚುವರಿಯಾಗಿ ಎಷ್ಟು ಸಂಖ್ಯೆಯ ವಿದ್ಯಾರ್ಥಿಗಳಿಗೆ ಇದರ ಲಾಭ ಸಿಗಲಿದೆ ; (ವಿವರ ನೀಡುವುದು)

(ಈ) ಯೋಜನೆಯನ್ನು ವಿಸ್ತರಿಸುತ್ತಿರುವುದರಿಂದ ಬಿಸಿಯೂಟ ತಯಾರಿಕೆಗೆ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಲಾಗುವುದೇ ; (ವಿವರ ನೀಡುವುದು)

(ಉ) ಸರ್ಕಾರದ ವತಿಯಿಂದ ಬಿಸಿಯೂಟದ ಜೊತೆಗೆ ಉಚಿತವಾಗಿ ನೀಡುವ ಇನ್ನಿತರೆ ಸೌಲಭ್ಯಗಳೇನು ; ಇದಕ್ಕಾಗಿ ವಾರ್ಷಿಕವಾಗಿ ಭರಿಸಲಾಗುತ್ತಿರುವ ವೆಚ್ಚ ಎಷ್ಟು ? (ವಿವರ ನೀಡುವುದು)

## ಅರಣ್ಯ ಬೆಂಕಿ ಘಟನೆಗಳ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೫೭೦ (೬೬೦) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೨೦೨೧ ರಿಂದ ಈವರೆವಿಗೂ ವರದಿಯಾದ ಅರಣ್ಯ ಬೆಂಕಿ ಘಟನೆಗಳ ಸಂಖ್ಯೆ ಎಷ್ಟು ;

(ಆ) ೨೦೨೧ ರಿಂದ ಈವರೆವಿಗೂ ಬೆಂಕಿಯಿಂದ ಪರಿಣಾಮ ಬೀರಿದ ವಿಭಾಗವಾರು ಅರಣ್ಯ ಪ್ರದೇಶದ ವಿಸ್ತೀರ್ಣ ಎಷ್ಟು ; (ಅರಣ್ಯ ಪ್ರದೇಶವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕಳೆದ ೨೦೨೧ ರಿಂದ ಈವರೆವಿಗೂ ಬೆಂಕಿಯಿಂದ ಪರಿಣಾಮ ಬೀರಿದ ಹುಲ್ಲುಗಾವಲು ಹಾಗೂ ಅರಣ್ಯ ಕುರುಚಲ ಪ್ರದೇಶದ ವಿಸ್ತೀರ್ಣ ಎಷ್ಟು ;

(ಈ) ಮೇಲ್ಕಾಣಿಸಿದ ಅವಧಿಯಲ್ಲಿ ಕಾಡ್ಗಿಚ್ಚು ಅಥವಾ ಬೆಂಕಿ ಆಕಸ್ಮಿಕ ಅವಘಡಗಳಿಂದ ವನ್ಯಜೀವಿಗಳು ಮೃತಪಟ್ಟಿವೆಯೇ ; (ವಿವರ ನೀಡುವುದು)

(ಉ) ಬೇಸಿಗೆ ಸಮೀಪಿಸುತ್ತಿರುವುದರಿಂದ ಕಾಡ್ಗಿಚ್ಚು ಅಥವಾ ಬೆಂಕಿ ಆಕಸ್ಮಿಕ ಅವಘಡಗಳಿಂದ ಸಸ್ಯಗಳು, ಮರಗಳು ಮತ್ತು ಪ್ರಾಣಿಗಳನ್ನು ರಕ್ಷಿಸಲು ಸರ್ಕಾರ ತೆಗೆದುಕೊಂಡ ಮುಂಜಾಗ್ರತ ಕ್ರಮಗಳೇನು ?

## ಸರ್ಕಾರಿ ಶಾಲೆಗಳ ಆಸ್ತಿ ಖಾತೆ/ನೋಂದಣಿ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೫೭೧ (೬೬೧) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇನ್ನೂ ಅನೇಕ ಸರ್ಕಾರಿ ಶಾಲೆಗಳ ಆಸ್ತಿಗಳು ಶಾಲೆಯ ಹೆಸರಿಗೆ ಖಾತೆ/ನೋಂದಣಿ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಶಾಲಾ ಆಸ್ತಿ ನೋಂದಣಿ ಮಾಡಬೇಗಿರುವ ಶಾಲೆಗಳ (ಪ್ರಾಥಮಿಕ ಮತ್ತು ಪ್ರೌಢ ಶಾಲೆ) ಸಂಖ್ಯೆ ಎಷ್ಟು ; (ಜಿಲ್ಲಾವಾರು ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಒಟ್ಟು ಸಂಖ್ಯೆ, ಆಸ್ತಿ ಖಾತೆ ಆಗಿರುವ ಶಾಲೆಗಳ ಸಂಖ್ಯೆ, ಆಸ್ತಿ ನೋಂದಣಿ ಮಾಡಬೇಕಿರುವ ಶಾಲೆಗಳ ಸಂಖ್ಯೆಯ ವಿವರ ನೀಡುವುದು ; ಮಂಡ್ಯ, ಮೈಸೂರು, ಹಾಸನ ಮತ್ತು ಚಾಮರಾಜನಗರದ ಜಿಲ್ಲೆಗಳಿಗೆ ಸಂಬಂಧಿಸಿದಂತೆ ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಸರ್ಕಾರಿ ಶಾಲೆಗಳ ಆಸ್ತಿಗಳ ಸುರಕ್ಷತೆಗಾಗಿ ಆಸ್ತಿಗಳನ್ನು ಶಿಕ್ಷಣ ಇಲಾಖೆ ಹೆಸರಿಗೆ ನೋಂದಣಿ ಮಾಡಿಕೊಳ್ಳುವುದಕ್ಕೆ ಸಂಬಂಧಿಸಿದ ಪ್ರಸ್ತಾವನೆಯು ಪ್ರಸ್ತುತ ಯಾವ ಹಂತದಲ್ಲಿದೆ ? (ಸಂಪೂರ್ಣ ವಿವರ ನೀಡುವುದು)

## GPLF ಗಳಿಗೆ ಬಿಡುಗಡೆ ಮಾಡಿರುವ ಸಮುದಾಯ ಬಂಡವಾಳ ನಿಧಿ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೫೭೨ (೬೬೨) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಜಿಲ್ಲೆಯಲ್ಲಿ ಸಂಜೀವಿನಿ ಸ್ವಸಹಾಯ ಗುಂಪಿನ (SHG) ವ್ಯಾಪ್ತಿಗೆ ತರಲಾಗಿರುವ ಫಲಾನುಭವಿಗಳ ಒಟ್ಟು ಸಂಖ್ಯೆ ಹಾಗೂ ವಿತರಿಸಲಾಗಿರುವ ಮೊತ್ತ ಎಷ್ಟು; (ಜಿಲ್ಲೆ, ಸಂಜೀವಿನಿ ವ್ಯಾಪ್ತಿಗೆ ತರಲಾಗಿರುವ ಕುಟುಂಬಗಳ ಸಂಖ್ಯೆ ; ಸಮುದಾಯ ಬಂಡವಾಳ ನಿಧಿ (CIF) ಪಡೆದಿರುವ ಸ್ವಸಹಾಯ ಗುಂಪುಗಳ ಸಂಖ್ಯೆ ; ವಿತರಿಸಿದ (CIF) ಮೊತ್ತ ; ಬ್ಯಾಂಕ್ ಲಿಂಕೇಜ್ ಪಡೆದ ಸ್ವಸಹಾಯ ಗುಂಪುಗಳ ಸಂಖ್ಯೆ; ಬ್ಯಾಂಕ್ ಲಿಂಕೇಜ್ ಮೊತ್ತ ಕುರಿತು ಸಂಪೂರ್ಣ ವಿವರ ನೀಡುವುದು ;

(ಆ) ಗ್ರಾಮ ಪಂಚಾಯತ್ ಮಟ್ಟದ ಒಕ್ಕೂಟ (GPLF) ವ್ಯಾಪ್ತಿಯಲ್ಲಿರುವ SHG ಗಳ ಸಂಖ್ಯೆ ಎಷ್ಟು; ಈವರೆವಿಗೂ ಪ್ರತಿಯೊಂದು GPLF ಗಳಿಗೆ ಬಿಡುಗಡೆಯಾದ CIF ಮೊತ್ತ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಇ) ಮೈಸೂರು ಜಿಲ್ಲೆಯಲ್ಲಿ ಮೇಲ್ದರ್ಜೆಗೇರಿಸಲಾದ ಗ್ರಾಮಪಂಚಾಯಿತಿ (GP) ಗಳ ಪೈಕಿ ಸಮುದಾಯ ಬಂಡವಾಳ ನಿಧಿ ಪಡೆದಿರುವ (GPLF)ಗಳು ಯಾವುವು ; ಇವುಗಳಿಗೆ ನೀಡಿರುವ (CIF) ಮೊತ್ತ ಎಷ್ಟು; ಈ GP ಗಳು ಮೇಲ್ದರ್ಜೆಗೇರಿರುವುದರಿಂದ

GPLF ಗಳಿಂದ ಹಣವನ್ನು ವಾಪಸ್ಸು ಪಡೆಯಲಾಗಿದೆಯೇ ; ಪಡೆದಿದ್ದಲ್ಲಿ, ಯಾವ ಖಾತೆಗೆ ಹಣ ಜಮೆ ಮಾಡಲಾಗಿದೆ ; ಹಣ ವಾಪಸ್ಸು ಪಡೆಯಲು ಬಾಕಿಯಿರುವ GPLF ಗಳು ಯಾವುವು ; ಇವುಗಳಿಂದ ಬರಬೇಕಿರುವ ಬಾಕಿ ಮೊತ್ತ ಎಷ್ಟು ? (ಸಂಪೂರ್ಣ ವಿವರ ನೀಡುವುದು)

## ೨೦೦೬ರ ಪೂರ್ವದ ಪಿಂಚಣಿ ವಂಚಿತರ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೫೭೩ (೬೬೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೦೬ರ ಪೂರ್ವ ನೇಮಕವಾಗಿ, ತದನಂತರ ಅನುದಾನಕ್ಕೊಳಪಟ್ಟು ಹಳೆ ಪಿಂಚಣಿ ಸೌಲಭ್ಯದಿಂದ ವಂಚಿತರಾದ ಅನುದಾನಿತ ಪದವಿ ಕಾಲೇಜುಗಳಲ್ಲಿ ಸೇವೆ ಸಲ್ಲಿಸಿ ನಿವೃತ್ತಿಯಾದ ಶಿಕ್ಷಕ–ಶಿಕ್ಷಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಆ) ೨೦೦೬ರ ಮೊದಲು ನೇಮಕಗೊಂಡಿದ್ದವರಿಗೆ ಹಳೆ ಪಿಂಚಣಿ ಸೌಲಭ್ಯವು ಇಲ್ಲ ನೂತನ ಪಿಂಚಣಿ/ಕಾಲ್ಪನಿಕ ವೇತನ ಸೌಲಭ್ಯವು ಇಲ್ಲ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಇದಕ್ಕೆ ಸಂಬಂಧಿಸಿದಂತೆ ೨೦೧೪ರ ಸರ್ಕಾರದ ಆದೇಶ ಅಸಿಂಧು ಮತ್ತು ೨೦೦೬ರ ಪೂರ್ವ ನೇಮಕವಾದವರಿಗೆ ಅನ್ವಯಿಸುವುದಿಲ್ಲ ಎಂದು ನ್ಯಾಯಾಲಯ ತೀರ್ಪು ನೀಡಿದ್ದರೂ ಅವರಿಗೆ ಪಿಂಚಣಿ ನೀಡದಿರಲು ಕಾರಣಗಳೇನು ;

(ಈ) ಈ ರೀತಿ ನೇಮಕಗೊಂಡು ನಿವೃತ್ತಿ ಹೊಂದಿದ/ಕೆಲಸ ಮಾಡುತ್ತಿರುವ ಸಿಬ್ಬಂದಿಯೂ ಯಾವುದೇ ಹಿಂಬಾಕಿ ಬಯಸದೆ ಕೇವಲ ಹಳೆಯ ಪಿಂಚಣಿ ನಿಗದಿ ಮಾಡಬೇಕೆಂಬ ಅವರ ಬೇಡಿಕೆಗೆ ಸರ್ಕಾರದ ನಿಲುವೇನು ?

## ಬೆಳಗಾವಿಯಲ್ಲಿ ವೈದ್ಯಕೀಯ ಬೋಧನಾ ಆಸ್ಪತ್ರೆ ಸ್ಥಾಪಿಸುವ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೫೭೪ (೬೬೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆ ಸುಮಾರು ೬೦ ಲಕ್ಷ ಜನಸಂಖ್ಯೆ ಹೊಂದಿದ ರಾಜ್ಯದ ಅತಿದೊಡ್ಡ ಜಿಲ್ಲೆಯಾಗಿದ್ದು, ಬ್ರಿಟೀಷರ ಕಾಲದಲ್ಲಿ (೧೮೫೯ರಲ್ಲಿ) ಸ್ಥಾಪಿಸಿದ ಆಸ್ಪತ್ರೆ ಜಾಗದಲ್ಲಿ ಇಂದು ಜಿಲ್ಲಾ ಆಸ್ಪತ್ರೆ ಕಾರ್ಯ ನಿರ್ವಹಿಸುತ್ತಿದೆ ; ಇಡೀ ಜಿಲ್ಲೆ ಈ ಒಂದು ಆಸ್ಪತ್ರೆ ಮೇಲೆಯೇ ಅವಲಂಬಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬೆಳಗಾವಿಯ ವೈದ್ಯಕೀಯ ಶಿಕ್ಷಣ ಸಂಸ್ಥೆಗೆ (ಬಿಮ್ಸ್) ಇನ್ನು ವೈದ್ಯಕೀಯ ಬೋಧನಾ ಆಸ್ಪತ್ರೆ ಸ್ಥಾಪಿಸಲು ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು ;

(ಇ) ಬೆಳಗಾವಿಯ ವೈದ್ಯಕೀಯ ಶಿಕ್ಷಣ ಸಂಸ್ಥೆಯೊಂದಿಗೆ ಸ್ಥಾಪಿಸಿದ ಬೀದರ್, ರಾಯಚೂರು, ಮಂಡ್ಯ, ಹಾಸನ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಹೊಸದಾಗಿ ಬೋಧನ ಆಸ್ಪತ್ರೆಗಳನ್ನು ಸ್ಥಾಪಿಸಲಾಗಿದ್ದು, ದೊಡ್ಡ ಜಿಲ್ಲೆಯಾದ ಬೆಳಗಾವಿಯಲ್ಲಿ ಸ್ಥಾಪನೆ ಮಾಡದಿರುವುದಕ್ಕೆ ಕಾರಣಗಳೇನು ;

(ಈ) ಬೆಳಗಾವಿ ನಗರದ ಮಧ್ಯದಲ್ಲಿಯೇ ವೈದ್ಯಕೀಯ ಶಿಕ್ಷಣ ಸಂಸ್ಥೆ ಪಕ್ಕದಲ್ಲಿ ಸಾಕಷ್ಟು ಸ್ಥಳವಿದ್ದು ೫೦೦ ಬೆಡ್‌ಗಳನ್ನು ಹೊಂದಿದ ಹೊಸ ವೈದ್ಯಕೀಯ ಬೋಧನಾ ಆಸ್ಪತ್ರೆ ಸ್ಥಾಪಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ?

## ಸರ್ಕಾರಿ ಶಾಲೆಗಳ ಆಸ್ತಿ ಸಂರಕ್ಷಣೆಯ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೫೭೫ (೬೬೫) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಎಷ್ಟು ಶಾಲೆಗಳಿಗೆ ಸ್ವಂತ ಕಟ್ಟಡಗಳಿವೆ ; ಎಷ್ಟು ಶಾಲೆಗಳು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಎಷ್ಟು ಸರ್ಕಾರಿ ಶಾಲೆಗಳಿಗೆ ಆಸ್ತಿ ಸಂರಕ್ಷಣಾ ಅಭಿಯಾನದಡಿಯಲ್ಲಿ ಇಲಾಖೆಯ ಹೆಸರಿಗೆ ಖಾತೆ ಮಾಡಲಾಗಿದೆ ; ನೋಂದಣಿ ಮಾಡಲು ಬಾಕಿಯಿರುವ ಶಾಲೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಬಾಕಿಯಿರುವ ಆಸ್ತಿಯನ್ನು ಆಸ್ತಿ ಸಂರಕ್ಷಣಾ ಅಭಿಯಾನದಲ್ಲಿ ಇಲಾಖೆಯ ಹೆಸರಿಗೆ ಖಾತೆ ಮಾಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಎಷ್ಟು ಶಾಲಾ ಆಸ್ತಿಗಳ ಮಾಲೀಕತ್ವದ ಬಗ್ಗೆ ನ್ಯಾಯಾಲಯದಲ್ಲಿ ಮೊಕದ್ದಮೆ ದಾಖಲಾಗಿವೆ ; ನ್ಯಾಯಾಲಯದಲ್ಲಿ ಸಮರ್ಥವಾಗಿ ವಾದ ಮಂಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಜಿಲ್ಲಾವಾರು ವಿವರ ನೀಡುವುದು)

(ಊ) ಎಷ್ಟು ಶಾಲಾ ಆಸ್ತಿಗಳು ಒತ್ತುವರಿಯಾಗಿವೆ ; ಒತ್ತುವರಿ ತೆರವು ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ; (ಜಿಲ್ಲಾವಾರು ವಿವರ ನೀಡುವುದು)

(ಋ) ಶಾಲಾ ಆಸ್ತಿಗೆ ಕಾಂಪೌಂಡ್ ನಿರ್ಮಾಣ ಮಾಡಿ ಸಂರಕ್ಷಣೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಆಸ್ತಿ ಸಂರಕ್ಷಣೆಗಾಗಿ ಸರ್ಕಾರ ಕಳೆದ ಮೂರು ವರ್ಷಗಳಲ್ಲಿ ಬಿಡುಗಡೆ ಮಾಡಿದ ಮೊತ್ತವೆಷ್ಟು ? (ವರ್ಷವಾರು, ಜಿಲ್ಲಾವಾರು ವಿವರ ನೀಡುವುದು)

## ಹೊಸ ಸಂಪರ್ಕಗಳಿಗೆ ಒ.ಸಿ. ಮತ್ತು ಸಿ.ಸಿ ಪಡೆದಿರುವ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೫೭೬ (೬೬೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿದ್ಯುತ್ ಸಂಪರ್ಕಕ್ಕಾಗಿ ಒ.ಸಿ ಮತ್ತು ಸಿ.ಸಿ ಯನ್ನು ಯಾವ ದಿನಾಂಕದಿಂದ ಕಡ್ಡಾಯ ಮಾಡಲಾಗಿದೆ ;

(ಆ) ಬೆಂಗಳೂರು ನಗರ ಜಿಲ್ಲೆ ಉತ್ತರ ತಾಲ್ಲೂಕು ಸೋಲದೇವನಹಳ್ಳಿ ಬೆಸ್ಕಾಂ ಕಾರ್ಯಾಲಯದಲ್ಲಿ ಒ.ಸಿ ಮತ್ತು ಸಿ.ಸಿ ಕಡ್ಡಾಯ ಮಾಡಿದ ನಂತರ ಎಷ್ಟು ಕಟ್ಟಡಗಳಿಗೆ ತಾತ್ಕಾಲಿಕ ಮತ್ತು ಶಾಶ್ವತ ವಿದ್ಯುತ್ ಸಂಪರ್ಕ ನೀಡಲಾಗಿದೆ ; (ಗ್ರಾಮಗಳ ವಿವರ ಸದರಿ ಕಟ್ಟಡಗಳ ವಿಸ್ತೀರ್ಣದ ವಿವರ ನೀಡುವುದು)

(ಇ) ಎಷ್ಟು ವಿದ್ಯುತ್ ಸಂಪರ್ಕಗಳಿಗೆ ಒ.ಸಿ ಮತ್ತು ಸಿ.ಸಿ ಯನ್ನು ಸಲ್ಲಿಸಿ ವಿದ್ಯುತ್ ಸಂಪರ್ಕ ಪಡೆಯಲಾಗಿದೆ ; (ಒ.ಸಿ ಮತ್ತು ಸಿ.ಸಿ ಪ್ರತಿಯನ್ನು ನೀಡುವುದು)

(ಈ) ಈಗಾಗಲೇ ಸಂಪರ್ಕ ಪಡೆದಿರುವ ಗ್ರಾಹಕರು ಹೆಚ್ಚುವರಿ ಲೋಡ್ ಪಡೆಯಲು ಸಲ್ಲಿಸಬೇಕಾಗಿರುವ ದಾಖಲೆಗಳು ಯಾವುವು ?

## ರಾಜ್ಯದಲ್ಲಿ ಹೆಚ್ಚುತ್ತಿರುವ ಕ್ಯಾನ್ಸರ್ ರೋಗದ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೫೭೭ (೬೬೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಪತ್ತೆಯಾದ ಕ್ಯಾನ್ಸರ್ ಪ್ರಕರಣಗಳು ಎಷ್ಟು ; ಅವುಗಳಲ್ಲಿ ಮಕ್ಕಳಲ್ಲಿ ಕಂಡು ಬಂದ ಪ್ರಕರಣಗಳ ಸಂಖ್ಯೆ ಎಷ್ಟು ; (ವರ್ಷವಾರು ವಿವರ ನೀಡುವುದು)

(ಆ) ಮಕ್ಕಳಲ್ಲಿ ಯಾವ ಪ್ರಕಾರದ ಕ್ಯಾನ್ಸರ್ ಹೆಚ್ಚಾಗಿ ಕಂಡು ಬರುತ್ತಿದೆ ; ಇದಕ್ಕೆ ಕಾರಣಗಳೇನು ;

(ಇ) ಆಹಾರದ ಕಲಬೆರಕೆ ತಡೆಯಲು ಜಂಕ್ ಫುಡ್ ಬಗ್ಗೆ ಜಾಗೃತಿ ಮೂಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಕ್ಯಾನ್ಸರ್ ರೋಗಕ್ಕೆ ರಾಜ್ಯದ ಎಷ್ಟು ಆಸ್ಪತ್ರೆಗಳಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ ; ಸದರಿ ಆಸ್ಪತ್ರೆಗಳಲ್ಲಿ ಮಂಜೂರಾದ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಖಾಲಿಯಿರುವ ಹುದ್ದೆಗಳ ಭರ್ತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ಕ್ಯಾನ್ಸರ್ ರೋಗಕ್ಕೆ ಮತ್ತು ಜಿಲ್ಲಾ ಮಟ್ಟದಲ್ಲೇ ಪರಿಣಾಮಕಾರಿಯಾಗಿ ಚಿಕಿತ್ಸೆ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಬಂಡೀಪುರ, ನಾಗರಹೊಳೆಯಲ್ಲಿ ಸಫಾರಿ ನಿರ್ಬಂಧಿಸಿರುವ ಕುರಿತು

**ಶ್ರೀ ಸಿ. ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೭೮ (೬೬೮) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಂಡೀಪುರ ಮತ್ತು ನಾಗರಹೊಳೆ ಭಾಗದಲ್ಲಿ ಪ್ರವಾಸಿಗರು ಸುಗ್ಗಿ ಕಾಲದಲ್ಲೇ (Peak Season) ಸಫಾರಿ ನಿರ್ಬಂಧಿಸಿರುವುದರಿಂದ ರೆಸಾರ್ಟ್‌ಗಳ ಬುಕ್ಕಿಂಗ್ ರದ್ದಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅರಣ್ಯ ಇಲಾಖೆಯ ಈ ಅಕಾಲಿಕ ನಿರ್ಧಾರದಿಂದ ರೆಸಾರ್ಟ್ ಮಾಲೀಕರಿಗೆ ಸುಮಾರು ಶೇ.೫೦ ರಷ್ಟು ಲಾಭದಲ್ಲಿ ನಷ್ಟ ಉಂಟಾಗುತ್ತಿರುವುದು ನಿಜವೇ ;

(ಇ) ಸಫಾರಿ ವಾಹನ ಚಾಲಕರು ಮತ್ತು ರೆಸಾರ್ಟ್ ನೌಕರರು ಕೆಲಸ ಕಳೆದುಕೊಂಡು ಬೀದಿಗೆ ಬರುತ್ತಿರುವುದನ್ನು ತಡೆಯಲು ಸರ್ಕಾರ ಯಾವ ಪರ್ಯಾಯ ಕ್ರಮ ಕೈಗೊಂಡಿದೆ ;

(ಈ) ಪ್ರವಾಸಿಗರು ಕರ್ನಾಟಕದ ಬದಲು ಕೇರಳ ಮತ್ತು ತಮಿಳುನಾಡಿನತ್ತ ಮುಖ ಮಾಡುತ್ತಿರುವುದರಿಂದ ರಾಜ್ಯದ ಪ್ರವಾಸೋದ್ಯಮಕ್ಕೆ ಆಗುತ್ತಿರುವ ನಷ್ಟವನ್ನು ಸರಿಪಡಿಸಲು ಈ ಕೂಡಲೇ ಸಫಾರಿ ಮೇಲಿನ ನಿರ್ಬಂಧ ಸಡಿಲಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಹನೂರು ತಾಲ್ಲೂಕಿನ ಕಾಡಂಚಿನ ಗ್ರಾಮಗಳಿಗೆ ಆಂಬ್ಯುಲೆನ್ಸ್ ಸೇವೆ ಒದಗಿಸುವ ಕುರಿತು

**ಶ್ರೀ ಸಿ. ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೭೯ (೬೬೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹನೂರು ತಾಲ್ಲೂಕಿನ ಮಲೆಮಹದೇಶ್ವರ ಬೆಟ್ಟದ ವ್ಯಾಪ್ತಿಯ ಕಾಡಂಚಿನ ಗ್ರಾಮಗಳಲ್ಲಿ ತುರ್ತು ಚಿಕಿತ್ಸೆಗಾಗಿ ಆಂಬ್ಯುಲೆನ್ಸ್ ಸೌಲಭ್ಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ದಿನಾಂಕ: ೧೪.೦೨.೨೦೨೬ ರಂದು ಒಬ್ಬ ಮಹಿಳೆಯನ್ನು ಆಂಬ್ಯುಲೆನ್ಸ್ ಸಿಗದೆ ಡೋಲಿಯಲ್ಲಿ ಹೊತ್ತು ತಂದಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ವೈಫಲ್ಯ ಎಸಗಿದ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಮಲೆಮಹದೇಶ್ವರ ಬೆಟ್ಟದ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಅಭಿವೃದ್ಧಿ ಪ್ರಾಧಿಕಾರಕ್ಕೆ ನೀಡಲಾಗಿರುವ ಆಂಬ್ಯುಲೆನ್ಸ್‌ಗಳು ಪ್ರಸ್ತುತ ಸುಸ್ಥಿತಿಯಲ್ಲಿವೆಯೇ ; ಇಲ್ಲದಿದ್ದಲ್ಲಿ, ಅವುಗಳ ದುರಸ್ತಿಗೆ ಅಥವಾ ಹೊಸ ಆಂಬ್ಯುಲೆನ್ಸ್ ಒದಗಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಈ) ಬೆಟ್ಟದ ಪ್ರಾಧಿಕಾರಕ್ಕೆ ಕೋಟ್ಯಂತರ ರೂಪಾಯಿ ಆದಾಯವಿದ್ದರೂ, ಸಮೀಪದ ಗ್ರಾಮಗಳಿಗೆ ರಸ್ತೆ, ಸಾರಿಗೆ ಮತ್ತು ಆರೋಗ್ಯದಂತಹ ಕನಿಷ್ಠ ಸೌಲಭ್ಯಗಳನ್ನು ಒದಗಿಸಲು ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು ;

(ಉ) ಕಾಡಂಚಿನ ಗ್ರಾಮಗಳ ಜನರಿಗೆ ಇಂತಹ ಪ್ರಾಣಿಗಳಂತೆ ಬದುಕುವ ಪರಿಸ್ಥಿತಿಯನ್ನು ತಪ್ಪಿಸಲು ಮತ್ತು ಶಾಶ್ವತವಾಗಿ ಸುಸಜ್ಜಿತ ಸಂಚಾರಿ ಆರೋಗ್ಯ ಘಟಕಗಳನ್ನು (Mobile Health Units) ಪ್ರಾರಂಭಿಸುವ ಉದ್ದೇಶ ಸರ್ಕಾರದ ಮುಂದಿದೆಯೇ ?

## ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿನ 'ನಲಿ–ಕಲಿ' ಯೋಜನೆ ಬಗ್ಗೆ

**ಶ್ರೀ ಸಿ. ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೮೦ (೬೭೦) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸುಮಾರು ೨೯ ಸಾವಿರ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ದಶಕಗಳಿಂದ ಯಶಸ್ವಿಯಾಗಿ ನಡೆಯುತ್ತಿದ್ದ 'ನಲಿ–ಕಲಿ' ಯೋಜನೆಯನ್ನು ಮುಂಬರುವ ಶೈಕ್ಷಣಿಕ ಸಾಲಿನಿಂದ ರದ್ದುಗೊಳಿಸಲು ಸರ್ಕಾರ ತೀರ್ಮಾನಿಸಿರುವುದು ನಿಜವೇ ;

(ಆ) ಈ ಯೋಜನೆಯನ್ನು ರದ್ದುಗೊಳಿಸಲು ಶಿಕ್ಷಕರ ಮೇಲಿನ ಕೆಲಸದ ಒತ್ತಡವೇ ಮುಖ್ಯ ಕಾರಣವೆಂದು ಹೇಳಲಾಗುತ್ತಿದ್ದು, ಗುಣಮಟ್ಟದ ಶಿಕ್ಷಣ ನೀಡುವ ಈ ಮನೋವೈಜ್ಞಾನಿಕ ಕಲಿಕಾ ಕ್ರಮಕ್ಕೆ ಪರ್ಯಾಯವಾಗಿ ಸರ್ಕಾರ ಯಾವ ಹೊಸ ಯೋಜನೆಯನ್ನು ರೂಪಿಸಿದೆ ;

(ಇ) ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಈ ಯೋಜನೆ ರದ್ದತಿಗೆ ಆಕ್ಷೇಪ ವ್ಯಕ್ತಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯೋಜನೆಯ ಲೋಪದೋಷಗಳನ್ನು ಸರಿಪಡಿಸಿ ಮುಂದುವರೆಸುವ ಬಗ್ಗೆ ಸರ್ಕಾರದ ನಿಲುವೇನು ?

## ಹುಲಿ ಸಂರಕ್ಷಿತ ಪ್ರದೇಶಗಳಲ್ಲಿ ವಿದೇಶಿ ಪ್ರವಾಸಿಗರಿಗೆ ಸಫಾರಿ ನಿರ್ಬಂಧ

**ಶ್ರೀ ಸಿ. ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೮೧ (೬೭೧) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಹುಲಿ ಸಂರಕ್ಷಿತ ಪ್ರದೇಶಗಳು ಮತ್ತು ಅಭಯಾರಣ್ಯಗಳಲ್ಲಿ ವಿದೇಶಿ ಪ್ರವಾಸಿಗರಿಗೆ ಸಫಾರಿ ನಡೆಸಲು ಅರಣ್ಯ ಇಲಾಖೆಯು ಇತ್ತೀಚೆಗೆ ನಿರ್ಬಂಧಗಳನ್ನು ವಿಧಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ವಾರ್ಷಿಕ ಸುಮಾರು ೫೦೦೦ ವಿದೇಶಿ ಪ್ರವಾಸಿಗರು ಸಫಾರಿಯಿಂದ ವಂಚಿತರಾಗುತ್ತಿರುವುದು ಮತ್ತು ಇದರಿಂದ ರಾಜ್ಯದ ಪ್ರವಾಸೋದ್ಯಮ ಸಂಸ್ಥೆಗಳಿಗೆ ಹಾಗೂ ಸರ್ಕಾರದ ಬೊಕ್ಕಸಕ್ಕೆ ಕೋಟ್ಯಾಂತರ ರೂಪಾಯಿ ನಷ್ಟವಾಗುತ್ತಿರುವುದು ನಿಜವೇ ; (ವಿವರ ನೀಡುವುದು)

(ಇ) ಅರಣ್ಯ ಇಲಾಖೆಯ ಈ ಅವೈಜ್ಞಾನಿಕ ತೀರ್ಮಾನದಿಂದ ಅಂತರಾಷ್ಟ್ರೀಯ ಮಟ್ಟದಲ್ಲಿ ಕರ್ನಾಟಕದ ಪ್ರವಾಸೋದ್ಯಮದ ಮೇಲೆ ಬೀರುತ್ತಿರುವ ನಕಾರಾತ್ಮಕ ಪರಿಣಾಮಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ವಿದೇಶಿ ಪ್ರವಾಸಿಗರಿಗೆ ಸರಾಗವಾಗಿ ಸಫಾರಿ ಸೌಲಭ್ಯ ದೊರೆಯುವಂತೆ ಮಾಡಲು ಹಾಗೂ ಪ್ರವಾಸೋದ್ಯಮವನ್ನು ಉತ್ತೇಜಿಸಲು ಇರುವ ನಿಯಮಗಳನ್ನು ಸರಳಗೊಳಿಸಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ?

## ಶಾಲಾ ಮಕ್ಕಳಲ್ಲಿ ಕಂಡುಬರುತ್ತಿರುವ ಆನ್‌ಲೈನ್ ದುಶ್ಚಟದ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೮೨ (೬೭೨) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇತ್ತೀಚಿನ ವರ್ಷಗಳಲ್ಲಿ ಆನ್‌ಲೈನ್ ಗೇಮಿಂಗ್ ಚಟಕ್ಕೆ (Online Gaming Addiction ಬಲಿಯಾಗುತ್ತಿರುವ ಮಕ್ಕಳ ಸಂಖ್ಯೆ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ವರದಿಯ ಪ್ರಕಾರ ರಾಜ್ಯದ ಶೇ.೧೦.೬೯ ರಷ್ಟು ಮಂದಿ ತಂತ್ರಜ್ಞಾನ ವ್ಯಸನಕ್ಕೆ ಮತ್ತು ಶೇ.೮.೯೧ ರಷ್ಟು ಮಂದಿ ಮೊಬೈಲ್ ಗೇಮಿಂಗ್ ವ್ಯಸನಕ್ಕೆ ಒಳಗಾಗಿರುವುದು ನಿಜವೇ ; ಈ ಬಗ್ಗೆ ಸರ್ಕಾರ ಯಾವುದಾದರೂ ಅಧಿಕೃತ ಸಮೀಕ್ಷೆ ನಡೆಸಿದೆಯೇ ;

(ಇ) ಆನ್‌ಲೈನ್ ಗೇಮಿಂಗ್‌ನಿಂದಾಗಿ ಮಕ್ಕಳು ಸಾಲದ ಸುಳಿಗೆ ಸಿಲುಕುವುದು ಮಾನಸಿಕ ಖಿನ್ನತೆಗೆ ಒಳಗಾಗುವುದು ಮತ್ತು ಆತ್ಮಹತ್ಯೆಯಂತಹ ಘಟನೆಗಳು ವರದಿಯಾಗುತ್ತಿವೆ ; ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕಾನೂನು ಕ್ರಮಗಳೇನು ;

(ಈ) ಶಾಲಾ–ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಮೊಬೈಲ್ ಮತ್ತು ಆನ್‌ಲೈನ್ ಗೇಮ್‌ಗಳ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಲು ಶಿಕ್ಷಣ ಇಲಾಖೆಯು ಹಮ್ಮಿಕೊಂಡಿರುವ ವಿಶೇಷ ಕಾರ್ಯಕ್ರಮಗಳೇನು ;

(ಉ) ಮಕ್ಕಳಲ್ಲಿ ತಂತ್ರಜ್ಞಾನದ ಅತಿಯಾದ ಬಳಕೆಯನ್ನು ನಿಯಂತ್ರಿಸಲು ಮತ್ತು ಪೋಷಕರಿಗೆ ಮಾರ್ಗದರ್ಶನ ನೀಡಲು ಸರ್ಕಾರಿ ಆಸ್ಪತ್ರೆಗಳಲ್ಲಿ ವಿಶೇಷ "ಡಿ–ಅಡಿಕ್ಷನ್ (D-addiction) ಕೇಂದ್ರಗಳನ್ನು ಸ್ಥಾಪಿಸುವ ಯೋಜನೆಯು ಸರ್ಕಾರದ ಮುಂದಿದೆಯೇ ?

## ನ್ಯಾಯಬೆಲೆ ಅಂಗಡಿಗಳಲ್ಲಿ ನಡೆಯುತ್ತಿರುವ ಅವ್ಯವಹಾರಗಳ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೩ (೬೭೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚಿನ ದಿನಗಳಲ್ಲಿ ನಡೆದ ತನಿಖೆಗಳ ಪ್ರಕಾರ, ರಾಜ್ಯದಲ್ಲಿ ಕೆಲವೊಂದು ನ್ಯಾಯಬೆಲೆ ಅಂಗಡಿಗಳು ಪಡಿತರ ಚೀಟಿದಾರರಿಂದ ಪಡಿತರ ಸರಬರಾಜು ಮಾಡಲು ರೂ.೨೦ಗಳ ಪಾವತಿಗಳನ್ನು ಅಕ್ರಮವಾಗಿ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ಯಾವ ರೀತಿ ಕ್ರಮ ಕೈಗೊಂಡಿದೆ ಮತ್ತು ಇಂತಹ ನ್ಯಾಯಬೆಲೆ ಅಂಗಡಿಗಳ ಪರವಾನಗಿಯನ್ನು ರದ್ದುಪಡಿಸಲಾಗುತ್ತಿದೆಯೇ ;

(ಇ) ಕರ್ನಾಟಕ ರಾಜ್ಯ ಆಹಾರ ನಿಗಮದಿಂದ ನಿರ್ವಹಿಸಲ್ಪಡುವ ಗೋದಾಮುಗಳಲ್ಲಿ ಆಹಾರ ದಾಸ್ತಾನುಗಳ ಕಳಪೆ ನಿರ್ವಹಣೆ, ದಾಖಲೆಗಳಲ್ಲಿನ ವ್ಯತ್ಯಾಸಗಳು ಮತ್ತು ಸರಿಯಾದ ತೂಕದ ವ್ಯವಸ್ಥೆಗಳ ಕೊರತೆ ಕುರಿತು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ದೋಷಗಳನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಅಗತ್ಯ ಔಷಧಿಗಳ ಕೊರತೆ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೪ (೬೭೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿ.ಎ.ಜಿ ವರದಿ ಪ್ರಕಾರ ೨೦೧೭–೧೮ ರಿಂದ ೨೦೨೧–೨೨ ರವರೆಗೆ ಸರ್ಕಾರಿ ಆಸ್ಪತ್ರೆಗಳಿಗೆ ಅಗತ್ಯ ಔಷಧಿಗಳು ಸಂಪೂರ್ಣವಾಗಿ ಪೂರೈಕೆ ಆಗಿಲ್ಲ ಎಂದು ತಿಳಿಸಿದೆ ; ೨೦೨೫–೨೬ ನೇ ಸಾಲಿನಲ್ಲಿ ಈ ಸಮಸ್ಯೆಯನ್ನು ಸರಿಪಡಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ರಾಜ್ಯದಲ್ಲಿ ಜಿಲ್ಲಾವಾರು ಪ್ರಸ್ತುತ ಅಗತ್ಯ ಔಷಧಿಗಳ ಲಭ್ಯತೆಯ ಶೇಕಡವಾರು ಎಷ್ಟು ; ೨೦೨೫–೨೬ ನೇ ಸಾಲಿನಲ್ಲಿ ರಾಜ್ಯದಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಇನ್ಸುಲಿನ್, ಆಂಟಿಬಯೋಟಿಕ್, ಬಿ.ಪಿ. ಔಷಧಿಗಳು ಲಭ್ಯವಾಗಿರುವುದಿಲ್ಲ ; ೨೦೨೫–೨೬ನೇ ಸಾಲಿನಲ್ಲಿ ಬಫರ್ ಸ್ಟಾಕ್ ಬಗ್ಗೆ ಮಾಹಿತಿ ನೀಡುವುದು ;

(ಇ) ಸಿ.ಎ.ಜಿ ವರದಿ ಪ್ರಕಾರ ೨೦೧೭-೧೮ ರಿಂದ ೨೦೨೧-೨೨ ರವರೆಗೆ ರಾಜ್ಯದಲ್ಲಿ ಕೋಟಿ ಕೋಟಿ ಮೌಲ್ಯದ ಅವಧಿ ಮೀರಿದ ಔಷಧಿಗಳು ಗೋದಾಮುಗಳಲ್ಲಿ ಪತ್ತೆಯಾಗಿದೆ ಎಂದು ತಿಳಿಸಿದ್ದು, ಇದು ನಿಜವೇ ; ಇದ್ದಲ್ಲಿ, ಈ ನಿರ್ಲಕ್ಷತೆಗೆ ಕಾರಣ ಯಾರು ಮತ್ತು ಅವರ ವಿರುದ್ಧ ಏನು ಕ್ರಮ ಕೈಗೊಳ್ಳಲಾಗಿದೆ ?

## ವನ್ಯಜೀವಿ ಸಂರಕ್ಷಣಾ ಕಾಯ್ದೆಯಡಿ ದಾಖಲಾಗಿರುವ ಪ್ರಕರಣಗಳ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೫ (೬೭೫) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚಿನ ದಿನಗಳಲ್ಲಿ ವನ್ಯಜೀವಿಗಳನ್ನು ಬೇಟೆಯಾಡುವ ಪ್ರಕರಣಗಳು ದೇಶದಲ್ಲಿ ಹೆಚ್ಚಾಗುತ್ತಿದ್ದು, ರಾಜ್ಯದಲ್ಲಿಯೂ ಸಹ ಪ್ರಕರಣಗಳು ಬೆಳಕಿಗೆ ಬಂದಿದ್ದು, ವನ್ಯಜೀವಿ ಸಂರಕ್ಷಣಾ ಕಾಯ್ದೆಯಡಿ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಪ್ರಕರಣಗಳು ದಾಖಲಾಗಿವೆ ; (ವಿವರವಾದ ಮಾಹಿತಿ ನೀಡುವುದು)

(ಆ) ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿಯ ಒಂದು ನದಿಯಲ್ಲಿ ಕೆಲವರು ಭಾರತೀಯ ಕಪ್ಪು ಆಮೆಗಳನ್ನು (Indian Black Turtles) ಧಾರ್ಮಿಕ ಪದ್ಧತಿಗಳನ್ನು ಪೂರ್ಣಗೊಳಿಸಲು ಬೇಟೆಯಾಡುತ್ತಿದ್ದು, ಇದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಇಂತಹ ಸಂರಕ್ಷಿತ ಪ್ರಭೇಧ Protected Species ಆಗಿರುವ ಆಮೆಗಳನ್ನು ಸಂರಕ್ಷಿಸಲು ಮತ್ತು ತಪ್ಪಿತಸ್ಥರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳ ಬಗ್ಗೆ ಮಾಹಿತಿ ನೀಡುವುದು ?

## ಬೆಳಗಾವಿ ವೈದ್ಯಕೀಯ ವಿಜ್ಞಾನ ಸಂಸ್ಥೆ ಆಸ್ಪತ್ರೆಗೆ ಮಂಜೂರಾದ ಹುದ್ದೆಗಳ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೬ (೬೭೬) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯಲ್ಲಿ ರಾಜ್ಯ ಸರ್ಕಾರದ ಅಧೀನದಲ್ಲಿ ಬರುವ ಬೆಳಗಾವಿ ವೈದ್ಯಕೀಯ ವಿಜ್ಞಾನ ಸಂಸ್ಥೆ ಆಸ್ಪತ್ರೆಯಲ್ಲಿ ಮಂಜೂರಾದ ಬೋಧಕರ ಹುದ್ದೆಗಳು ಎಷ್ಟು ; ಈ ಮಂಜೂರಾದ ಹುದ್ದೆಗಳ ಅನುಗುಣವಾಗಿ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗಿದೆ ;

(ಆ) ಕಳೆದ ೩ ವರ್ಷಗಳಲ್ಲಿ ಬೆಳಗಾವಿ ವೈದ್ಯಕೀಯ ವಿಜ್ಞಾನ ಸಂಸ್ಥೆ ಆಸ್ಪತ್ರೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಎಷ್ಟು ತಜ್ಞ ವೈದ್ಯರು ರಾಜೀನಾಮೆ ನೀಡಿದ್ದಾರೆ ; ರಾಜೀನಾಮೆ ನೀಡಲು ಕಾರಣಗಳೇನು ;

(ಇ) ಬೆಳಗಾವಿ ವೈದ್ಯಕೀಯ ವಿಜ್ಞಾನ ಸಂಸ್ಥೆ ಆಸ್ಪತ್ರೆಗೆ ಒಟ್ಟು ಮಂಜೂರಾದ ಖಾಯಂ ಹುದ್ದೆಗಳು ಎಷ್ಟು ; ಗುತ್ತಿಗೆ ಆಧಾರದ ಮೇರೆಗೆ ಕರ್ತವ್ಯ ನಿರ್ವಹಿಸುತ್ತಿರುವ ಹುದ್ದೆಗಳ ಸಂಖ್ಯೆ ಎಷ್ಟು ; ಈ ಅಪಘಾತ/ಐಸಿಯು ವಾರ್ಡ್‌ನಲ್ಲಿ ತಜ್ಞರ ಲಭ್ಯತೆ ಇದೆಯೇ ; Nursing Staff Shortage ಶೇಕಡವಾರು ಎಷ್ಟು ಎಂಬುದರ ಬಗ್ಗೆ ಮಾಹಿತಿ ನೀಡುವುದು ?

## ಉನ್ನತ ಶಿಕ್ಷಣ ಇಲಾಖೆಯಡಿ ಬರುವ ನೃಪತುಂಗ ವಿಶ್ವವಿದ್ಯಾಲಯದ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೭ (೬೭೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಉನ್ನತ ಶಿಕ್ಷಣ ಇಲಾಖೆಯಡಿ ಸ್ಥಾಪಿತವಾಗಿರುವ ನೃಪತುಂಗ ವಿಶ್ವವಿದ್ಯಾಲಯದ ಆವರದಲ್ಲಿ ನೂತನ ಕಟ್ಟಡವನ್ನು ನಿರ್ಮಿಸಲು ಯಾವಾಗ ಅನುಮೋದನೆ ನೀಡಲಾಗಿತ್ತು ; ನೂತನ ಕಟ್ಟಡ ಕಾಮಗಾರಿ ಯಾವಾಗ ಪ್ರಾರಂಭಿಸಲಾಯಿತು ; ಯಾವ ವರ್ಷದಲ್ಲಿ ಈ ಕಾಮಗಾರಿ ಪೂರ್ಣಗೊಂಡಿತ್ತು ಮತ್ತು ಎಷ್ಟು ಚದರ ಅಡಿಯಲ್ಲಿ ಈ ನೂತನ ಕಟ್ಟಡವನ್ನು ನಿರ್ಮಿಸಲು ಯೋಜಿಸಲಾಗಿತ್ತು ;

(ಆ) ರಾಜ್ಯದ ಸರ್ಕಾರದ ಅನುದಾನದಡಿ ನಿರ್ಮಾಣಗೊಂಡ ನೂತನ ಕಟ್ಟಡವು ಅಂದಾಜು ಎಷ್ಟು ಕೋಟಿ ರೂ. ಗಳಲ್ಲಿ ನಿರ್ಮಿಸಲಾಗಿದೆ ; ಸದರಿ ಕಟ್ಟಡ ನಿರ್ಮಿಸಲು ಗುತ್ತಿಗೆದಾರರಿಂದ ಒಂದು ಚದರ ಅಡಿ ಮತ್ತು ಒಂದು ಚದರ ಮೀಟರ್‌ಗೆ ಎಷ್ಟು ಮೊತ್ತ ನಿಗದಿಪಡಿಸಲಾಗಿತ್ತು ;

(ಇ) ಸದರಿ ಕಟ್ಟಡದಲ್ಲಿ ವಿಜ್ಞಾನ ಉಪಕರಣಗಳು, ಪೀಠೋಪಕರಣಗಳ ಮತ್ತು ಇತ್ತಾದಿ ಉಪಕರಣಗಳನ್ನು ಖರೀದಿಸಲು ಖರ್ಚು ಮಾಡಲಾದ ಮೊತ್ತವೆಷ್ಟು ; ಸದರಿ ಕಟ್ಟಡ ನಿರ್ಮಾಣಗೊಂಡು ಉಪಯೋಗಕ್ಕಾಗಿ ತಯಾರಾಗಿದ್ದರೂ ಸಹ ಈ ಕಟ್ಟಡಕ್ಕೆ ಇಲ್ಲಿಯವರೆಗೆ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆಯಿಂದ ಸುರಕ್ಷತಾ ಮಾನದಂಡಗಳ ಪ್ರಮಾಣಪತ್ರ ನೀಡದಿರಲು ಕಾರಣಗಳೇನು ;

(ಈ) ಈಗ ಹಾಲಿ ಇರುವ ಕಟ್ಟಡಕ್ಕೆ ನವೀಕರಣ ಕಾರ್ಯ ಕೈಗೊಳ್ಳಲಾಗಿದೆಯೇ ; ಕೈಗೊಂಡಿದ್ದಲ್ಲಿ, ಈ ನವೀಕರಣ ಕಾರ್ಯಕ್ಕೆ ಖರ್ಚಾಗಿರುವ ಬಾಬ್ತು ಎಷ್ಟು ; ಯಾವ ಯಾವ ನವೀಕರಣ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ;

(ಉ) University Grants Commission ಮಾನದಂಡಗಳನ್ವಯ ನೃಪತುಂಗ ವಿಶ್ವವಿದ್ಯಾಲಯವು ಭೂಮಿ ವಿಸ್ತೀರ್ಣವನ್ನು

ಹೊಂದಿದೆಯೇ ; ನೃಪತುಂಗ ವಿಶ್ವವಿದ್ಯಾಲಯಕ್ಕೆ ಎಷ್ಟು ಕಾಲೇಜುಗಳು ಸಂಯೋಜಿತವಾಗಿವೆ ಮತ್ತು ಈ ವಿಶ್ವವಿದ್ಯಾಲಯ ಹೊರತುಪಡಿಸಿ ಬೇರೆ ಯಾವುದಾದರೂ ವಿಶ್ವವಿದ್ಯಾಲಯವು ಕಾರ್ಯನಿರ್ವಹಿಸುತ್ತಿದೆಯೇ ; University Grants Commission ಮಾನದಂಡಗಳನ್ವಯ ಒಂದು ವಿಶ್ವವಿದ್ಯಾಲಯದಲ್ಲಿ ಮತ್ತೊಂದು ವಿಶ್ವವಿದ್ಯಾಲಯವನ್ನು ನಡೆಸಲು ಅನುಮತಿ ನೀಡಲಾಗಿದೆಯೇ ಎಂಬುದರ ಬಗ್ಗೆ ಮಾಹಿತಿ ನೀಡುವುದು ;

(ಊ) ನೃಪತುಂಗ ವಿಶ್ವವಿದ್ಯಾಲಯದಲ್ಲಿ ಖಾಯಂ ಉಪಕುಲಪತಿಯನ್ನು ಯಾವಾಗ ನೇಮಕ ಮಾಡಲಾಗುವುದು ಮತ್ತು ಈ ವಿಶ್ವವಿದ್ಯಾಲಯಕ್ಕೆ ಮಂಜೂರಾದ, ಭರ್ತಿಯಾದ ಮತ್ತು ಖಾಲಿಯಿರುವ ಹುದ್ದೆಗಳ ವಿವರ ನೀಡುವುದು, ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವವರು ಮತ್ತು ಖಾಯಂ ನೌಕರರ ಸಂಖ್ಯೆ ಎಷ್ಟು ಎಂಬುದರ ಬಗ್ಗೆ ಮಾಹಿತಿ ನೀಡುವುದು ?

## ರಾಜ್ಯದ ಶಾಲಾ ಆವರಣದಲ್ಲಿ ವಿದ್ಯುತ್ ಸಮಸ್ಯೆಗಳಿಂದ ತೊಂದರೆಯಾಗುತ್ತಿರುವ ಹಾಗೂ ಅನಾಹುತಗಳ ಕುರಿತು

**ಶ್ರೀ ಪಿ. ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೮೮ (೭೮೧) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಲವಾರು ವರ್ಷಗಳಿಂದ ರಾಜ್ಯದಲ್ಲಿ ಶಾಲಾ ಆವರಣದಲ್ಲಿ ಟ್ರಾನ್ಸ್ ಫಾರ್ಮರ್, ವಿದ್ಯುತ್ ಕಂಬ, ವಿದ್ಯುತ್ ತಂತಿಗಳು ಹಾಯ್ದು ಹೋಗಿರುವ ಕಾರಣ ವಿದ್ಯುತ್ ಸಂಬಂಧಿತ ಹಲವಾರು ಸಮಸ್ಯೆಗಳು ಸೃಷ್ಟಿಯಾಗಿ ಅನಾಹುತಗಳಾಗಿರುವ ವಿಷಯ

ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಂಥ ಶಾಲೆಗಳ ಸಂಖ್ಯೆ ಎಷ್ಟು ; (ವಿವರಗಳನ್ನು ಜಿಲ್ಲಾವಾರು, ತಾಲ್ಲೂಕುವಾರು ನೀಡುವುದು)

(ಆ) ಈ ಕುರಿತಂತೆ ಸಂಭವಿಸಿರುವ ಪ್ರಾಣಹಾನಿ, ಶಾರೀರಿಕ ಗಾಯ, ಆಸ್ತಿನಾಶ ಎಲ್ಲಾ ದುರ್ಘಟನೆಗಳ ವಿವರವನ್ನು ತಿಳಿಸುವುದು, ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಈ ರೀತಿಯಾದ ಸಮಸ್ಯೆ ಹೊಂದಿರುವ ಶಾಲೆಗಳೆಷ್ಟು ; ಎಷ್ಟು ವರ್ಷಗಳಿಂದ ಈ ಸಮಸ್ಯೆ ಇದೆ ; (ಜಿಲ್ಲಾವಾರು, ತಾಲ್ಲೂಕುವಾರು ಶಾಲೆಗಳ ಹೆಸರಿನೊಂದಿಗೆ ಮಾಹಿತಿ ನೀಡುವುದು)

(ಇ) ಇಂತಹ ಗಂಭೀರವಾದ ಸಮಸ್ಯೆಯ ಪರಿಹಾರಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ರಾಜ್ಯದಲ್ಲಿ ಬೀದಿ ನಾಯಿಗಳ ಕಡಿತದಿಂದ ಸಾವಿಗೀಡಾಗಿರುವ ಮತ್ತು ಗಾಯಗೊಂಡಿರುವ ಮಾಹಿತಿ ಕುರಿತು

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೮೯ (೬೮೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಿಂದ ರಾಜ್ಯದಲ್ಲಿ ಬೀದಿ ನಾಯಿ ಕಡಿತದಿಂದ ಸಾವಿಗೀಡಾಗಿರುವ ಮತ್ತು ಗಾಯಗೊಂಡವರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು) ಮತ್ತು ಇದಕ್ಕೆ ಪೂರಕವಾಗಿ ಬಾಗಲಕೋಟೆ ಹಾಗೂ ವಿಜಯಪುರ ಜಿಲ್ಲೆಗಳಲ್ಲಿನ ಬಗ್ಗೆ ತಾಲ್ಲುಕುವಾರು ವಿವರ ನೀಡುವುದು ;

(ಆ) ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ನಾಯಿ ಕಡಿತ ಪರಿಹಾರದ ಔಷಧಿಗಳ ಸಮರ್ಪಕ ಸರಬರಾಜು ಆಗುತ್ತಿಲ್ಲವೆಂದು ಸಾರ್ವಜನಿಕರು ದೂರುತ್ತಿರುವ ಮಾಹಿತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ರಾಜ್ಯದಲ್ಲಿ ಬೀದಿ ನಾಯಿಗಳ ಹಾವಳಿಯನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಕಳೆದ ೨ ವರ್ಷಗಳಿಂದ ಈ ಉದ್ದೇಶಕ್ಕಾಗಿ ಎಷ್ಟು ಹಣ ವೆಚ್ಚವಾಗಿದೆ ;

(ಈ) ನಾಯಿ ಕಡಿತದಿಂದ ಬರುವ ರೇಬಿಸ್ ಖಾಯಲೆಯಿಂದ ಎಷ್ಟು ಜನ ಬಳಲುತ್ತಿದ್ದಾರೆ ; ರೇಬಿಸ್ ಖಾಯಿಲೆ ನಿರ್ಮೂಲನೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಹಾಕಿಕೊಂಡಿರುವ ಕಾರ್ಯಕ್ರಮಗಳು ಯಾವುವು ;

(ಉ) ಬೀದಿ ನಾಯಿ ಹಾವಳಿ ತಡೆಗಟ್ಟುವ ವಿಚಾರಕ್ಕೆ ಸಂಬಂಧಪಟ್ಟಂತೆ ಸರ್ವೋಚ್ಛ ನ್ಯಾಯಾಲಯದ ಆದೇಶಗಳನ್ನು ಸರ್ಕಾರ ಸಕಾಲದಲ್ಲಿ ಪಾಲನೆ ಮಾಡುತ್ತಿದೆಯೇ ; ಸರ್ವೋಚ್ಛ ನ್ಯಾಯಾಲಯ ನೀಡಿರುವ ಸೂಚನೆಯಂತೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ಒದಗಿಸುವುದು)

## ಪಿ.ಎಂ. ಕುಸುಮ–ಸಿ ಯೋಜನೆಯಡಿ ರಾಜ್ಯದಲ್ಲಿ ಸೌರ ವಿದ್ಯುತ್ ಉತ್ಪಾದನೆಗೆ ಕೈಗೊಂಡಿರುವ ಕ್ರಮಗಳ ಕುರಿತು

**ಶ್ರೀ ಪಿ. ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೯೦ (೬೮೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಿ.ಎಂ. ಕುಸುಮ–ಸಿ ಯೋಜನೆಯಡಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಸೌರ ವಿದ್ಯುತ್ ಉತ್ಪಾದನೆಗೆ ಕೈಗೊಂಡಿರುವ ಕ್ರಮಗಳೇನು ; (ಜಿಲ್ಲಾವಾರು ಮಾಹಿತಿಯೊಂದಿಗೆ ವಿವರ ನೀಡುವುದು)

(ಆ) ಪಿಎಂ ಕುಸುಮ–ಸಿ ಯೋಜನೆಯಡಿ ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿಯು ಬಾಗಲಕೋಟೆ ಜಿಲ್ಲೆಯಲ್ಲಿ ಯಾವ ಯಾವ ಸ್ಥಳಗಳಲ್ಲಿ ಸೋಲಾರ್ ಪಾರ್ಕ್‌ಗಳ ಸ್ಥಾಪನೆಗೆ ಯೋಜನೆ ರೂಪಿಸಿದೆ ; (ಮಾಹಿತಿಯೊಂದಿಗೆ ವಿವರ ನೀಡುವುದು)

(ಇ) ೨೦೨೫–೨೬ ನೇ ಸಾಲಿಗೆ ಜಿಲ್ಲೆಯಲ್ಲಿ ಸದರಿ ಯೋಜನೆಯಡಿ ಎಷ್ಟು ಮೆಗಾವ್ಯಾಟ್ ಸೌರವಿದ್ಯುತ್ ಉತ್ಪಾದಿಸುವ ಗುರಿ ಇಟ್ಟುಕೊಳ್ಳಲಾಗಿತ್ತು ; ೨೦೨೬ ಫೆಬ್ರವರಿವರೆಗೆ ಎಷ್ಟು ಮೆಗಾವ್ಯಾಟ್ ಸೌರ ವಿದ್ಯುತ್ ಉತ್ಪಾದಿಸಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿರುವ ಸರ್ಕಾರಿ ಕಿರಿಯ ಪ್ರಾಥಮಿಕ ಹಾಗೂ ಹಿರಿಯ ಪ್ರಾಥಮಿಕ ಶಾಲೆಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೯೧ (೬೮೪) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಒಳಪಟ್ಟಿರುವ ಜಿಲ್ಲೆಗಳಲ್ಲಿ ಇರುವ ಒಟ್ಟು ಸರ್ಕಾರಿ ಕಿರಿಯ ಪ್ರಾಥಮಿಕ ಹಾಗೂ ಹಿರಿಯ ಪ್ರಾಥಮಿಕ ಶಾಲೆಗಳ ಸಂಖ್ಯೆ ಎಷ್ಟು ; (ಜಿಲ್ಲವಾರು ವಿವರಗಳನ್ನು ಒದಗಿಸುವುದು)

(ಆ) ಸದರಿ ಜಿಲ್ಲೆಗಳಲ್ಲಿನ ಶಾಲೆಗಳಿಗೆ ಮಂಜೂರಾದ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು; ಅದರ ಪೈಕಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು: ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು: (ಜಿಲ್ಲಾವಾರು ವಿವರಗಳನ್ನು ಒದಗಿಸುವುದು)

(ಇ) ಈ ಭಾಗದಲ್ಲಿ ಶಿಕ್ಷಕರ ಹುದ್ದೆಗಳು ಹೆಚ್ಚಿನ ಪ್ರಮಾಣದಲ್ಲಿ ಖಾಲಿ ಇರುವ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳ ಎಸ್.ಎಸ್.ಎಲ್.ಸಿ ಫಲಿತಾಂಶ ರಾಜ್ಯದಲ್ಲಿ ಅತ್ಯಂತ ಕಡಿಮೆ ಪ್ರಮಾಣದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ವಿದ್ಯಾರ್ಥಿಗಳ ಫಲಿತಾಂಶವನ್ನು ಸುಧಾರಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ಅಥವಾ ಕೈಗೊಳ್ಳಲಿದೆ; (ವಿವರಗಳನ್ನು ಒದಗಿಸುವುದು)

(ಈ) ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವಾಗ ಕ್ರಮ ಕೈಗೊಳ್ಳಲಿದೆ? (ಸ್ಪಷ್ಟವಾದ ಕಾಲಪಟ್ಟಿ (Time line) ಒದಗಿಸುವುದು)

## ಕೊಪ್ಪಳ ಜಿಲ್ಲೆಯ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಶಿಥಿಲಗೊಂಡಿರುವ ಶಾಲಾ ಕೊಠಡಿಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೯೨ (೬೮೫) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆಯಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಾಲೆಗಳ ಕೊಠಡಿಗಳು ಶಿಥಿಲಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಶಿಥಿಲಗೊಂಡಿರುವ ಶಾಲಾ ಕೊಠಡಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಶಿಥಿಲಗೊಂಡ ಕೊಠಡಿಗಳಲ್ಲಿ ಎಷ್ಟು ದುರಸ್ತಿಯಾಗಿವೆ ಮತ್ತು ದುರಸ್ತಿಗೆ ಬಾಕಿ ಇರುವ ಕೊಠಡಿಗಳ ಸಂಖ್ಯೆ ಎಷ್ಟು, ದುರಸ್ತಿಗೆ ಬಾಕಿ ಇರುವ ಕೊಠಡಿಗಳನ್ನು ದುರಸ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು: (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಇ) ಇಲ್ಲಿಯವರೆಗೆ ಹೊಸದಾಗಿ ಎಷ್ಟು ಶಾಲಾ ಕೊಠಡಿಗಳನ್ನು ನಿರ್ಮಿಸಲಾಗಿದೆ? (ತಾಲ್ಲೂಕುವಾರು ವಿವರ ಒದಗಿಸುವುದು)

## ಕೊಪ್ಪಳ ಜಿಲ್ಲೆಯಲ್ಲಿನ ಪವನ ಶಕ್ತಿ ಹಾಗೂ ಸೌರ ಶಕ್ತಿಯಿಂದ ಉತ್ಪಾದನೆಯಾಗುತ್ತಿರುವ ವಿದ್ಯುತ್ ಕುರಿತು

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೯೩ (೬೮೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆಯಲ್ಲಿ ಪವನ ಶಕ್ತಿ ಹಾಗೂ ಸೌರ ಶಕ್ತಿ ವಿದ್ಯುತ್ ಮೇಲ್ಛಾವಣಿ (ಸೋಲಾರ್ ರೂಫ್ ಟಾಪ್) ಪ್ರೋತ್ಸಾಹಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಆ) ಕೊಪ್ಪಳ ಜಿಲ್ಲೆಯಲ್ಲಿ ಪವನ ಶಕ್ತಿ ಹಾಗೂ ಸೌರ ಶಕ್ತಿ ಮುಖಾಂತರ ಎಷ್ಟು ವಿದ್ಯುತ್ ಉತ್ಪಾದನೆ ಮಾಡಲು ಗುರಿ ಇಟ್ಟುಕೊಳ್ಳಲಾಗಿದೆ: ಪ್ರತಿ ಯೂನಿಟ್‌ಗೆ ಎಷ್ಟು ದರವನ್ನು ನಿಯಂತ್ರಣ ಆಯೋಗದಿಂದ ನಿಗದಿಪಡಿಸಲಾಗಿದೆ ;

(ಇ) ಇಂಧನ ಇಲಾಖೆಯಿಂದ ಪವನ ಶಕ್ತಿ ಹಾಗೂ ಸೌರ ಶಕ್ತಿ ಮೇಲ್ಛಾವಣಿ ಘಟಕವನ್ನು ಪ್ರೋತ್ಸಾಹಿಸಲು ಬ್ಯಾಂಕ್ ಸೌಲಭ್ಯ ನೀಡಲು ಸರ್ಕಾರದಿಂದ ನಿರ್ದೇಶನ ನೀಡಲಾಗಿದೆಯೇ ?

## ಬೆಂಗಳೂರು ನಗರ ಜಿಲ್ಲೆಯ ಕೌಶಲ್ಯ ತರಬೇತಿ ಕೇಂದ್ರಗಳ ಕುರಿತು.

**ಶ್ರೀ ಹೆಚ್.ಎಸ್.ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೯೪ (೬೮೮) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಜಿಲ್ಲೆಯ ಯುವ ಜನರಿಗೆ ವಿವಿಧ ವೃತ್ತಿಪರ ಕೌಶಲ್ಯಗಳನ್ನು ಕಲ್ಪಿಸಲು ಮತ್ತು ಉದ್ಯೋಗಾವಕಾಶಗಳನ್ನು ಹೆಚ್ಚಿಸಲು ಸರ್ಕಾರ ಯಾವ ಯಾವ ಯೋಜನೆಗಳನ್ನು ಹಮ್ಮಿಕೊಂಡಿದೆ; (ಸಂಪೂರ್ಣ ವಿವರ ನೀಡುವುದು)

(ಆ) ಜಿಲ್ಲೆ ಮತ್ತು ತಾಲ್ಲೂಕು ಕೇಂದ್ರಗಳಲ್ಲಿ ನಡೆಸುವ ತರಬೇತಿ ಕೇಂದ್ರಗಳ ಸಂಖ್ಯೆ ಎಷ್ಟು; ಸದರಿ ತರಬೇತಿ ಕೇಂದ್ರಗಳು ಯಾವುವು;

(ಇ) ಕೌಶಲ್ಯಾಭಿವೃದ್ಧಿಯನ್ನು ಹೆಚ್ಚಿಸಲು ಯಾವ ರೀತಿಯ ನೂತನ ಮಾದರಿಯ ಯೋಜನೆಗಳನ್ನು ಹಮ್ಮಿಕೊಳ್ಳಲು ಸರ್ಕಾರ ಚಿಂತನೆ ನಡೆಸಿದೆ; ಇದ್ದಲ್ಲಿ ಸದರಿ ಯೋಜನೆಯಗಳ ವಿವರ ನೀಡುವುದು;

(ಈ) ಕಳೆದ ೨ ವರ್ಷಗಳಲ್ಲಿ ಕೌಶಲ್ಯಾಭಿವೃದ್ಧಿ, ಯೋಜನೆಯಡಿ ಹಿಂದುಳಿದ ವರ್ಗದ ಯುವಕರಲ್ಲಿ ಎಷ್ಟು ಯುವಕರು ಉದ್ಯೋಗ ಪಡೆದಿದ್ದಾರೆ? (ವಿವರ ನೀಡುವುದು)

## ರಾಜ್ಯದಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧಿಯ ಕೊರತೆ ಇರುವ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೯೫ (೬೮೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮತ್ತು ಬೆಂಗಳೂರು ನಗರ ಜಿಲ್ಲೆಗಳಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧಿಗಳ ಕೊರತೆ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ಪ್ರಸ್ತುತ ಸಾಲಿನಲ್ಲಿ ೮೦೦ರೂ. ಕೋಟಿ ರೂ. ಮೌಲ್ಯದ ವಿವಿಧ ಮಾದರಿಯ ೯೯೦ ಔಷಧಿಗಳನ್ನು ಖರೀದಿಸುವಂತೆ ಆರ್ಥಿಕ ಇಲಾಖೆ ಅನುಮೋದನೆ ನೀಡಿ ೭ ತಿಂಗಳಾದರೂ ಯಾವುದೇ ಔಷಧಿ ಖರೀದಿ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಇ) ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ಕೂಡಲೇ ಸರ್ಕಾರವು ಔಷಧಿಗಳನ್ನು ಖರೀದಿ ಮಾಡಲು ಕರ್ನಾಟಕ ರಾಜ್ಯ ವೈದ್ಯಕೀಯ ಸರಬರಾಜು ನಿಗಮಕ್ಕೆ ಸ್ಪಷ್ಟ ನಿರ್ದೇಶನವನ್ನು ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಈ) ಈ ತೊಂದರೆಯನ್ನು ಯಾವ ಕಾಲಮಿತಿಯೊಳಗೆ ಪೂರೈಸಲಾಗುವುದು?

## ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಡಿ–ಗ್ರೂಪ್ ಹುದ್ದೆಗಳನ್ನು ಮಂಜೂರು ಮಾಡದೇ ಇರುವ ಬಗ್ಗೆ

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೯೬ (೬೯೩) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಡಿ–ಗ್ರೂಪ್ ಹುದ್ದೆಗಳನ್ನು ಮಂಜೂರು ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಹಾಗಿದ್ದಲ್ಲಿ. ಎಷ್ಟು ಶಾಲೆಗಳಿಗೆ ಈ ಹುದ್ದೆಗಳು ಮಂಜೂರಾಗಿಲ್ಲ: (ಜಿಲ್ಲಾವಾರು ವಿವರ ನೀಡುವುದು)

(ಆ) ಡಿ–ಗ್ರೂಪ್ ನೌಕರರ ಕೊರತೆಯಿಂದಾಗಿ ಶಾಲಾ ಆವರಣದ ಸ್ವಚ್ಚತೆ, ಶೌಚಾಲಯಗಳ ನಿರ್ವಹಣೆ ಮತ್ತು ಕುಡಿಯವ ನೀರಿನ ವ್ಯವಸ್ಥೆಯಲ್ಲಿ ಉಂಟಾಗುತ್ತಿರುವ ಗಂಭೀರ ಸಮಸ್ಯೆಗಳ ಕುರಿತು ಇಲಾಖೆಗೆ ವರದಿ ಸಲ್ಲಿಕೆಯಾಗಿದೆಯೇ ;

(ಇ) ಪ್ರಸ್ತುತ ರಾಜ್ಯದ ಪ್ರಾಥಮಿಕ ಶಾಲೆಗಳಲ್ಲಿ ಮಂಜೂರು ಆಗಿರುವ ಡಿ–ಗ್ರೂಪ್ ಹುದ್ದೆಗಳೆಷ್ಟು ಮತ್ತು ಅದರಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಈ) ಶಾಲಾ ನಿರ್ವಹಣೆಯ ಹಿತದೃಷ್ಟಿಯಿಂದ ಹೊಸದಾಗಿ ಡಿ–ಗ್ರೂಪ್ ಹುದ್ದೆಗಳನ್ನು ಮಂಜೂರು ಮಾಡಲು ಅಥವಾ ನೇಮಕಾತಿ ಪ್ರಕ್ರಿಯೆ ಆರಂಭಿಸಲು ಸರ್ಕಾರದ ಸ್ಪಷ್ಟ ನಿಲುವೇನು ;

(ಉ) ಖಾಯಂ ನೇಮಕಾತಿಯಾಗುವವರೆಗೆ, ಹೊರಗುತ್ತಿಗೆ (Outsourcing) ಅಥವಾ ಸ್ಥಳೀಯ ಸಂಸ್ಥೆಗಳ (ಗ್ರಾಮ ಪಂಚಾಯತ್/ನಗರ ಸಭೆ) ಮೂಲಕ ಸ್ವಚ್ಛತಾ ಕಾರ್ಯಕರ್ತರನ್ನು ನಿಯೋಜಿಸಲು ಸರ್ಕಾರ ಯೋಜಿಸಿದೆಯೇ ;

(ಊ) ಮುಂದಿನ ಆರ್ಥಿಕ ವರ್ಷದಲ್ಲಿ ವಿದ್ಯಾರ್ಥಿಗಳ ಆರೋಗ್ಯ ಮತ್ತು ಶಾಲೆಗಳ ಶಿಸ್ತಿನ ದೃಷ್ಟಿಯಿಂದ ಹೊಸದಾಗಿ ಡಿ–ಗ್ರೂಪ್ ಹುದ್ದೆಗಳನ್ನು ಸೃಷ್ಟಿಸಿ ಅನುದಾನ ಬಿಡುಗಡೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

# ಗಡಿ ಭಾಗದ ಮರಾಠಿ ಮಾಧ್ಯಮ ಶಾಲೆಗಳನ್ನು ಕನ್ನಡ ಮಾಧ್ಯಮಕ್ಕೆ ಪರಿವರ್ತಿಸುವ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೯೭ (೬೯೪) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಗಡಿ ಭಾಗಗಳಲ್ಲಿ ವಿಶೇಷವಾಗಿ ಬೀದರ್ ಜಿಲ್ಲೆಯ ಬಸವಕಲ್ಯಾಣ ತಾಲ್ಲೂಕಿನಲ್ಲಿ ಮರಾಠಿ ಮಾಧ್ಯಮ ಶಾಲೆಗಳನ್ನು ಕನ್ನಡ ಮಾಧ್ಯಮಕ್ಕೆ ಪರಿವರ್ತಿಸುವ ಕುರಿತು ಸಾರ್ವಜನಿಕ ವಲಯದಲ್ಲಿ ವದಂತಿಗಳು ಹರಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ವಿಷಯಕ್ಕೆ ಸಂಬಂಧಿಸಿದಂತೆ ಗಡಿ ಭಾಗದ ಸಾರ್ವಜನಿಕರು ಆತಂಕಕ್ಕೊಳಗಾಗಿ ಪ್ರತಿಭಟನೆಗಳನ್ನು ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಮರಾಠಿ ಮಾಧ್ಯಮ ಶಾಲೆಗಳನ್ನು ಕನ್ನಡ ಮಾಧ್ಯಮಕ್ಕೆ ಪರಿವರ್ತಿಸಲು ಸರ್ಕಾರವು ಯಾವುದಾದರೂ ಅಧಿಕೃತ ಆದೇಶ ಅಥವಾ ಸಚಿವ ಸಂಪುಟದಲ್ಲಿ ನಿರ್ಧಾರ ಕೈಗೊಂಡಿದೆಯೇ ;

(ಈ) ಗಡಿ ಭಾಗದ ನಾಗರಿಕ ಮಾತೃ ಭಾಷೆ ಮರಾಠಿಯಾಗಿರುವುದರಿಂದ ಮತ್ತು ಶೈಕ್ಷಣಿಕ/ಸಾಮಾಜಿಕ ಕಾರಣಗಳಿಗಾಗಿ ಅವರಿಗೆ ಮರಾಠಿ ಭಾಷೆಯ ಜ್ಞಾನ ಅಗತ್ಯವಿರುವುದರಿಂದ, ಈ ಶಾಲೆಗಳನ್ನು ಯಾಥಾಸ್ಥಿತಿಯಲ್ಲಿ ಮುಂದುವರಿಸಲು ಸರ್ಕಾರದ ನಿಲುವೇನು ;

(ಉ) ಕನ್ನಡ ಮಾಧ್ಯಮ ಶಾಲೆಗಳ ಅಗತ್ಯವಿದ್ದಲ್ಲಿ, ಅಸ್ತಿತ್ವದಲ್ಲಿರುವ ಮರಾಠಿ ಶಾಲೆಗಳನ್ನು ಪರಿವರ್ತಿಸುವ ಬದಲು ಹೊಸದಾಗಿ ಕನ್ನಡ

ಮಾಧ್ಯಮ ಶಾಲೆಗಳನ್ನು ಸ್ಥಾಪಿಸುವ ಮೂಲಕ ಸಾರ್ವಜನಿಕರಿಗೆ ಆಯ್ಕೆಯ ಸ್ವಾತಂತ್ರ್ಯ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಊ) ಈ ವಿಷಯದ ಕುರಿತು ಸಾರ್ವಜನಿಕರಲ್ಲಿ ಉಂಟಾಗಿರುವ ಗೊಂದಲವನ್ನು ಪರಿಹರಿಸಲು ಮತ್ತು ಸಾರ್ವಜನಿಕ ಶಾಂತಿಯನ್ನು ಕಾಪಾಡಲು ಇಲಾಖೆಯು ಶೀಘ್ರವಾಗಿ ಲಿಖಿತ ರೂಪದ ಸ್ಪಷ್ಟೀಕರಣ ನೀಡಲಿದೆಯೇ ?

## ಬೀದರ್ ಜಿಲ್ಲೆಯಲ್ಲಿ ಮಹಿಳಾ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಸ್ಥಾಪನೆ ಹಾಗೂ ತಾಂತ್ರಿಕ ಶಿಕ್ಷಣದ ಉತ್ತೇಜನದ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೯೮ (೬೯೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಮಹಿಳೆಯರ ತಾಂತ್ರಿಕ ಶಿಕ್ಷಣವನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಪ್ರತ್ಯೇಕ "ಮಹಿಳಾ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಸ್ಥಾಪಿಸುವ ಕುರಿತು ಸರ್ಕಾರದ ಮುಂದೆ ಯಾವುದಾದರೂ ಅಧಿಕೃತ ಪ್ರಸ್ತಾವನೆ ಸಲ್ಲಿಕೆಯಾಗಿದೆಯೇ ;

(ಆ) ಒಂದು ವೇಳೆ ಪ್ರಸ್ತಾವನೆ ಸಲ್ಲಿಕೆಯಾಗಿದ್ದಲ್ಲಿ ಅದು ಪ್ರಸ್ತುತ ಯಾವ ಹಂತದಲ್ಲಿದೆ ; (ಆಡಳಿತಾತ್ಮಕ ಅನುಮೋದನೆ, ಆರ್ಥಿಕ ಇಲಾಖೆಯ ಸಹಮತಿ ಅಥವಾ ಸ್ಥಳ ಗುರುತಿಸುವಿಕೆ ಕುರಿತು ಸಂಪೂರ್ಣ ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ತಾಂತ್ರಿಕ ಶಿಕ್ಷಣಕ್ಕೆ ದಾಖಲಾಗಿರುವ ಮಹಿಳಾ ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು, ಪ್ರತ್ಯೇಕ ಮಹಿಳಾ ಕಾಲೇಜಿನ ಬೇಡಿಕೆಯನ್ನು ಪರಿಗಣಿಸಿ ಸರ್ಕಾರವು ವಿಶೇಷ ಆದ್ಯತೆ ನೀಡಲಿದೆಯೇ ;

(ಈ) ಹೊಸ ಕಾಲೇಜು ಸ್ಥಾಪನೆಗೆ ಅಗತ್ಯವಾದ ಭೂಮಿ, ಸುಸಜ್ಜಿತ ಕಟ್ಟಡದ ನಿರ್ಮಾಣ ಹಾಗೂ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹುದ್ದೆಗಳನ್ನು ಸೃಷ್ಟಿಸಿ ಮಂಜೂರು ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಗಡಿ ಭಾಗ ಹಾಗೂ ಕಲ್ಯಾಣ ಕರ್ನಾಟಕ (Article 371J) ವ್ಯಾಪ್ತಿಗೆ ಬರುವ ಬೀದರ್ ಜಿಲ್ಲೆಯಲ್ಲಿ ಮಹಿಳೆಯರ ವೃತ್ತಿಪರ ಶಿಕ್ಷಣಕ್ಕೆ ಉತ್ತೇಜನ ನೀಡಲು ವಿಶೇಷ ಪ್ಯಾಕೇಜ್ ಅಥವಾ ಕೇಂದ್ರ ಸರ್ಕಾರದ ಅನುದಾನವನ್ನು ಪಡೆಯುವ ಯೋಜನೆ ಸರ್ಕಾರದ ಮುಂದಿದೆಯೇ ;

(ಊ) ಈ ಉದ್ದೇಶಿತ ಮಹಿಳಾ ಪಾಲಿಟೆಕ್ನಿಕ್ ಕಾಲೇಜನ್ನು ಯಾವ ಶೈಕ್ಷಣಿಕ ವರ್ಷದಿಂದ ಪ್ರಾರಂಭಿಸಲು ಸರ್ಕಾರ ಕಾಲಮಿತಿಯನ್ನು ಹಾಕಿಕೊಂಡಿದೆಯೇ ?

## ಬೀದರ್ ಜಿಲ್ಲೆಯ ಘಾಟಬೋರಳ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ವಿಶೇಷ ಪ್ರಕರಣವೆಂದು ಪರಿಗಣಿಸಿ ಮೇಲ್ದರ್ಜೆಗೇರಿಸುವ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೯ (೬೯೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹುಮ್ನಾಬಾದ್ ತಾಲ್ಲೂಕಿನ ಘಾಟಬೋರಳ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವಾಗಿ ಮೇಲ್ದರ್ಜೆಗೇರಿಸಲು ಜನಸಂಖ್ಯೆಯ ಮಾನದಂಡದ ಕೊರತೆಯಿದೆ ಎಂದು ತಿಳಿಸಲಾಗಿದೆಯೇ: ಹಾಗಿದ್ದಲ್ಲಿ. ಈ ಭಾಗದ ಭೌಗೋಳಿಕ

ವಿಸ್ತೀರ್ಣ ಮತ್ತು ರೋಗಿಗಳ ಹೆಚ್ಚಿನ ಒತ್ತಡವನ್ನು ಪರಿಗಣಿಸಿ ಈ ಮಾನದಂಡವನ್ನು ಸಡಿಲಿಸುವ ಉದ್ದೇಶ ಸರ್ಕಾರದ ಮುಂದಿದೆಯೇ ;

(ಆ) ಘಾಟಬೋರಳ ಗ್ರಾಮವು ಒಂದು ಪ್ರಮುಖ ಕೇಂದ್ರವಾಗಿದ್ದು, ಸುತ್ತಮುತ್ತಲಿನ ಅನೇಕ ಹಳ್ಳಿಗಳಿಗೆ ಇದೊಂದೇ ಆಧಾರವಾಗಿರುವುದರಿಂದ, ಸಾರ್ವಜನಿಕರ ದಶಕಗಳ ಕಾಲದ ಬೇಡಿಕೆಯನ್ನು ಈಡೇರಿಸಲು ಸರ್ಕಾರಕ್ಕಿರುವ ತೊಂದರೆಗಳೇನು ;

(ಇ) ಸದ್ಯಕ್ಕೆ ಸಮುದಾಯ ಆರೋಗ್ಯ ಕೇಂದ್ರವಾಗಿ ಪರಿವರ್ತಿಸಲು ಸಾಧ್ಯವಿಲ್ಲದಿದ್ದಲ್ಲಿ, ಪ್ರಸ್ತುತ ಇರುವ ಘಾಟಬೋರಳ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಹೆಚ್ಚುವರಿ ಹಾಸಿಗೆಗಳು, ತಜ್ಞ ವೈದ್ಯರು ಮತ್ತು ಆಧುನಿಕ ಪ್ರಯೋಗಾಲಯದ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಈ) ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಗಾಗಿ ಇರುವ ವಿಶೇಷ ಅನುದಾನದ (೩೭೧ J) ಅಡಿಯಲ್ಲಿ ಅಥವಾ ಕೆ.ಕೆ.ಆರ್.ಡಿ.ಬಿ.(KKRDB) ಮೂಲಕ ಈ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸಲು ಸಾಧ್ಯವಿಲ್ಲವೇ ;

(ಉ) ಗಡಿ ಭಾಗದ ಜನರ ಆರೋಗ್ಯ ಹಿತದೃಷ್ಟಿಯಿಂದ ಈ ಕೇಂದ್ರದ ಸಾಮರ್ಥ್ಯವನ್ನು ಹೆಚ್ಚಿಸುವ ಕುರಿತು ಸರ್ಕಾರವು ಯಾವ ನಿರ್ದಿಷ್ಟ ಕಾಲಮಿತಿಯೊಳಗೆ ತೀರ್ಮಾನ ಕೈಗೊಳ್ಳಲಿದೆ?

# ಬೀದರ್ ಜಿಲ್ಲೆಯ ಔರಾದ್ ತಾಲ್ಲೂಕಿನ ಮಂಜ್ರಾ ನದಿ ತೀರದ ಗ್ರಾಮಗಳಲ್ಲಿ ರೈತರಿಗೆ ಸಮರ್ಪಕ ವಿದ್ಯುತ್ ಪೂರೈಕೆ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೬೦೦ (೯೯೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ಔರಾದ್ ತಾಲ್ಲೂಕಿನ ಮಂಜ್ರಾ ನದಿ ಪಾತ್ರದ ಗ್ರಾಮಗಳಾದ ಕೊಡಗಾಂವ, ಬಲ್ಲೂರ್(ಬಿ), ಕೌಠಾ(ಕೆ), ಕೌಠಾ(ಬಿ), ಪಾಶಾಪೂರ ಮತ್ತು ಗಡಿ ಕುಶನೂರ ಸೇರಿದಂತೆ ವಿವಿಧ ಗ್ರಾಮಗಳ ರೈತರಿಗೆ ಸಮರ್ಪಕ ವಿದ್ಯುತ್ ಪೂರೈಕೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮುಂಗಾರು ಬೆಳೆ ಹಾನಿಯಾದ ನಂತರ ಹಿಂಗಾರು ಬೆಳೆಯ ಮೇಲೆ ನಿರೀಕ್ಷೆ ಇಟ್ಟುಕೊಂಡಿರುವ ರೈತರಿಗೆ ಬೆಳಿಗ್ಗೆ ೯ ಗಂಟೆಯಿಂದ ಸಂಜೆ ೪ ಗಂಟೆಯವರೆಗೆ ತ್ರಿಫೇಸ್ ವಿದ್ಯುತ್ ನೀಡಬೇಕೆಂಬ ನಿಯಮವಿದ್ದರೂ, ಅದು ಪಾಲನೆಯಾಗದಿರಲು ಕಾರಣಗಳೇನು ;

(ಇ) ಭಾರಿ ಮಳೆ ಮತ್ತು ನದಿ ಪ್ರವಾಹದಿಂದಾಗಿ ನದಿ ಪಾತ್ರದ ಹೊಲಗಳಲ್ಲಿ ವಿದ್ಯುತ್ ಕಂಬಗಳು ಬಿದ್ದು, ತಂತಿಗಳು ಜೋತಾಡುತ್ತಿರುವುದು ಮತ್ತು ಲೈನ್‌ಮನ್‌ಗಳು ಸರಿಯಾಗಿ ಕೆಲಸ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ಭಾಗದ ಕಬ್ಬು ಮತ್ತು ಕಡಲೆ ಬೆಳೆಗಳಿಗೆ ನೀರು ಹರಿಸಲು ಸಾಧ್ಯವಾಗದೆ ರೈತರು ಅನುಭವಿಸುತ್ತಿರುವ ನಷ್ಟಕ್ಕೆ ಸರ್ಕಾರ ಕೈಗೊಂಡಿರುವ ಪರಿಹಾರ ಕ್ರಮಗಳೇನು ;

(ಉ) ಕೃಷಿ ಪಂಪ್‌ಸೆಟ್‌ಗಳಿಗೆ ಸಮರ್ಪಕ ವಿದ್ಯುತ್ ಪೂರೈಸಲು ಸರ್ಕಾರವು ಕೈಗೊಂಡಿರುವ ತುರ್ತು ಕ್ರಮಗಳೇನು ?

# ರಾಜ್ಯದ ಪ್ರೌಢ ಶಾಲೆಗಳಲ್ಲಿ ಸರ್ಕಾರದ ಕಡ್ಡಾಯ ಆದೇಶದಂತೆ ಎಲ್ಲಾ ದಾಖಲೆಗಳು, ಪೂರ್ವಸಿದ್ಧತಾ ಪರೀಕ್ಷೆಗಳ ಪ್ರಶ್ನೆಪತ್ರಿಕೆಗಳು ಪಡೆಯುವುದು ಹಾಗೂ ಇತರೆ ಕಾರ್ಯಚಟುವಟಿಕೆಗಳನ್ನು ಆನ್‌ಲೈನ್ ಮೂಲಕ ನಿರ್ವಹಣೆ ಮಾಡಲು ಅಗತ್ಯ ಪರಿಕರಗಳಿಲ್ಲದೆ ಶಿಕ್ಷಕರಿಗೆ ಆಗುತ್ತಿರುವ ಸಮಸ್ಯೆಯ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೬೦೧ (೬೯೮) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚಿನ ದಿನಗಳಲ್ಲಿ ರಾಜ್ಯದ ಪ್ರೌಢ ಶಾಲೆಗಳಲ್ಲಿ ಎಲ್ಲಾ ದಾಖಲೆಗಳನ್ನು ಸರ್ಕಾರದ ಆದೇಶದಂತೆ ಆನ್ ಲೈನ್ ಮೂಲಕ ನಿರ್ವಹಣೆ ಮಾಡಲಾಗುತ್ತಿದೆ ಮತ್ತು ಪೂರ್ವಸಿದ್ಧತಾ ಪರೀಕ್ಷೆಗಳ ಪ್ರಶ್ನೆಪತ್ರಿಕೆಗಳನ್ನು ಶಾಲೆಯಲ್ಲಿಯೇ ಡೌನ್‌ಲೋಡ್ ಮಾಡಿ ಝೆರಾಕ್ಸ್ ಮಾಡಿ ವಿತರಿಸಲು ಕಟ್ಟುನಿಟ್ಟಾಗಿ ಆದೇಶಿಸಲಾಗಿದೆ. ಈ ಕಾರ್ಯಚಟುವಟಿಕೆಗಳಿಗಾಗಿ ಪ್ರೌಢ ಶಾಲೆಗಳಿಗೆ ಅಂತರ್ಜಾಲ ಸಂಪರ್ಕ, ಝೆರಾಕ್ಸ್ ಮಷೀನ್ ಹಾಗೂ ಇತರೆ ಅಗತ್ಯ ಪರಿಕರಗಳನ್ನು ಸರ್ಕಾರದಿಂದ ಪೂರೈಕೆ ಮಾಡಲಾಗಿದೆಯೇ ;

(ಆ) ಮಾಡಿದ್ದರೆ ಪ್ರತಿ ಶಾಲೆಗೆ ಪೂರೈಕೆ ಮಾಡುವ ಪರಿಕರಗಳ ಪಟ್ಟಿ ಹಾಗೂ ನಿರ್ವಹಣೆಗೆ ನೀಡುವ ಅನುದಾನದ ಮಾಹಿತಿ ನೀಡುವುದು ;

(ಇ) ಅಗತ್ಯ ಪರಿಕರಗಳನ್ನು ಸರ್ಕಾರದಿಂದ ಪೂರೈಕೆ ಮಾಡದೇ ಇದ್ದಲ್ಲಿ ಕಾರಣವೇನು ;

(ಈ) ವಿಶೇಷವಾಗಿ ಗ್ರಾಮೀಣ ಭಾಗದ ಶಾಲೆಗಳಲ್ಲಿ ಇಂತಹ ಸಮಸ್ಯೆಗಳು ಹೆಚ್ಚುತ್ತಿದ್ದು. ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ಅಗತ್ಯ ಪರಿಕರಗಳನ್ನು ಒದಗಿಸದೇ ಕಟ್ಟುನಿಟ್ಟಾಗಿ ನಿಗದಿತ ಸಮಯದಲ್ಲಿ ಕಾರ್ಯಚಟುವಟಿಕೆ ಪೂರ್ಣಗೊಳಿಸುವಂತೆ ಶಿಕ್ಷಕ/ ಶಾಲಾ ಆಡಳಿತ ಮಂಡಳಿಯ ಮೇಲೆ ಒತ್ತಡ ಹೇರಿದರೆ ಕಾಲಮಿತಿಯಲ್ಲಿ ಕೆಲಸ ಮಾಡಲು ಸಾಧ್ಯವಾಗುವುದೇ ; ಈ ಬಗ್ಗೆ ಮಾಹಿತಿ ನೀಡುವುದು ?

## ೨೦೨೫-೨೬ನೇ ಸಾಲಿನ ಪಠ್ಯಪುಸ್ತಕ ಬೇಡಿಕೆಯಲ್ಲಿ (ಎಸ್‌ಟಿಎಸ್) ದೈಹಿಕ ಶಿಕ್ಷಣ ಪುಸ್ತಕಗಳ ಬೇಡಿಕೆಯನ್ನು ಪರಿಗಣಿಸದೆ ಇರುವ ಬಗ್ಗೆ ಹಾಗೂ ದೈಹಿಕ ಶಿಕ್ಷಣದ ಬದಲಾಗಿ ಮೌಲ್ಯ ಶಿಕ್ಷಣ ಎಂದು ಆದೇಶ ಹೊರಡಿಸಿರುವ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೬೦೨ (೬೯೯) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫-೨೬ನೇ ಸಾಲಿನ ಪಠ್ಯಪುಸ್ತಕ ಬೇಡಿಕೆಯಲ್ಲಿ (STS) ದೈಹಿಕ ಶಿಕ್ಷಣ ಪುಸ್ತಕಗಳ ಬೇಡಿಕೆಯನ್ನು ಪರಿಗಣಿಸದೆ ಕೈಬಿಡಲು ಕಾರಣಗಳೇನು ;

(ಆ) ೧ ರಿಂದ ೧೦ನೇ ತರಗತಿಯ ಶಾಲಾ ಮಕ್ಕಳಿಗೆ ದೈಹಿಕ ಶಿಕ್ಷಣದ ಪಠ್ಯಪುಸ್ತಕಗಳನ್ನು ಕೈಬಿಟ್ಟು ಕೇವಲ ಮೌಲ್ಯ ಶಿಕ್ಷಣ ಹಾಗೂ ಮರುಸಿಂಚನ ಪಠ್ಯಪುಸ್ತಕಗಳನ್ನು ವಿತರಿಸಲು ಕಾರಣವೇನು ;

(ಇ) ದೈಹಿಕ ಶಿಕ್ಷಣದ ಬದಲಾಗಿ ಮೌಲ್ಯ ಶಿಕ್ಷಣ ಎಂದು ಆದೇಶ ಹೊರಡಿಸಲು ಕಾರಣವೇನು ;

(ಈ) ಮಾನ್ಯ ಮುಖ್ಯಮಂತ್ರಿಗಳು ಹಾಗೂ ಶಾಲಾ ಶಿಕ್ಷಣ ಸಚಿವರು ಘೋಷಿಸಿದ್ದ ೧ ರಿಂದ ದ್ವಿತೀಯ ಪಿಯುಸಿ ವರೆಗಿನ ವಿದ್ಯಾರ್ಥಿಗಳಿಗೆ ಉಚಿತ ನೋಟ್ ಬುಕ್ ವಿತರಣೆ ಯೋಜನೆಯನ್ನು ಕೈಬಿಡಲು ಕಾರಣವೇನು ;

(ಉ) ಈ ಯೋಜನೆಯ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಯು ತಿರಸ್ಕರಿಸಿರುವುದು ನಿಜವೇ ; ನಿಜವಾಗಿದ್ದಲ್ಲಿ, ಕಾರಣವೇನು?

## ರಾಜ್ಯದ ಸರ್ಕಾರಿ ಪದವಿ ಮಹಾವಿದ್ಯಾಲಯಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅತಿಥಿ ಉಪನ್ಯಾಸಕರನ್ನು UGC ನಿಯಮಾವಳಿಯನ್ನು ಮುಂದಿಟ್ಟು ಕರ್ತವ್ಯದಿಂದ ಬಿಡುಗಡೆಗೊಳಿಸಿ ಉದ್ಯೋಗ ವಂಚಿತರನ್ನಾಗಿ ಮಾಡಿರುವ ಕುರಿತು

**ಶ್ರೀ ಶಶೀಲ್ ಜಿ.ನಮೋಶಿ (ಶಿಕ್ಷಕರ ಕ್ಷೇತ್ರ) :–**

೬೦೩ (೭೦೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫–೨೬ ಸಾಲಿನ ಶೈಕ್ಷಣಿಕ ವರ್ಷದಲ್ಲಿ ರಾಜ್ಯದ ವಿವಿಧ ಸರ್ಕಾರಿ ಪದವಿ ಮಹಾವಿದ್ಯಾಲಯಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅತಿಥಿ ಉಪನ್ಯಾಸಕರು ಎಷ್ಟು ; (ವಿಷಯವಾರು ಮಾಹಿತಿ ನೀಡುವುದು)

(ಆ) ೨೦೨೫–೨೬ನೇ ಸಾಲಿನವರೆಗೆ ಕಾರ್ಯನಿರ್ವಹಿಸುತ್ತಿದ್ದ Non UGC ಅತಿಥಿ ಉಪನ್ಯಾಸಕರನ್ನು ಡಿಸೆಂಬರ್ ೧೬, ೨೦೨೫ ರವರೆಗೆ ೧, ೩, ೫ನೇ ಸೆಮಿಸ್ಟರ್ ಕಾರ್ಯಭಾರ ಇದ್ದರೂ ಕೂಡ ಏಕಾಏಕಿಯಾಗಿ ದಿನಾಂಕ:೦೮.೧೨.೨೦೨೫ ರಂದು ಕರ್ತವ್ಯದಿಂದ ಬಿಡುಗಡೆಗೊಳಿಸಿ ಕೈಬಿಡಲು ಕಾರಣವೇನು ಹಾಗೂ

ಈ ಪೈಕಿ ಕಾರ್ಯನಿರ್ವಹಿಸುತ್ತಿದ್ದ ಎಷ್ಟು ಅತಿಥಿ ಉಪನ್ಯಾಸಕರನ್ನು ಕರ್ತವ್ಯದಿಂದ ಬಿಡುಗಡೆಗೊಳಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) UGC ನಿಯಮಾವಳಿಯು ೨೦೧೮ ರಲ್ಲಿ ಜಾರಿಯಾಗಿದ್ದು, ಮಾನ್ಯ ಉಚ್ಚ ನ್ಯಾಯಾಲಯವೂ ಪೂರ್ವಾನ್ವಯವಾಗುವಂತೆ ಜಾರಿಮಾಡಿ ಎಂದು ಎಲ್ಲಿಯೂ ಆದೇಶಿಸದಿದ್ದರೂ ಸಹ ಸರ್ಕಾರ ಪೂರ್ವಾನ್ವಯವಾಗುವಂತೆ ಪರಿಗಣಿಸಿ ಕಳೆದ ೧೦. ೧೫. ೨೦ ಹಾಗೂ ೨೫ ವರ್ಷಗಳಿಂದಲೂ ಕಾರ್ಯನಿರ್ವಹಿಸುತ್ತಿದ್ದ ಅತಿಥಿ ಉಪನ್ಯಾಸಕರನ್ನು ಕೈಬಿಡಲು ಕಾರಣವೇನು ; (ಪೂರ್ವಾನ್ವಯದ ಬಗ್ಗೆ ಮಾಹಿತಿ ನೀಡುವುದು)

(ಈ) ನೆರೆಯ ರಾಜ್ಯಗಳಾದ ತೆಲಂಗಾಣ, ಹರಿಯಾಣ, ಪಶ್ಚಿಮ ಬಂಗಾಳ ಹಾಗೂ ಇತರೆ ೧೫ ಕ್ಕೂ ಹೆಚ್ಚಿನ ರಾಜ್ಯಗಳು ೧೦.೧೫.೨೦ ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿದ್ದ ಅತಿಥಿ ಉಪನ್ಯಾಸಕರಿಗೆ One Time Settlement ನಂತೆ ೬೦ ವರ್ಷಗಳವರೆಗೆ ಸೇವಾ ಭದ್ರತೆಯನ್ನು ನೀಡಿವೆ ; ಅದರಂತೆ ರಾಜ್ಯದಲ್ಲಿರುವ ಅತಿಥಿ ಉಪನ್ಯಾಸಕರಿಗೂ ಸರ್ಕಾರ ಸೇವಾ ಭದ್ರತೆಯನ್ನು ಜಾರಿಗೊಳಿಸಬಹುದಲ್ಲವೇ ; ಈ ಬಗ್ಗೆ ಸರ್ಕಾರದ ನಿಲುವೇನು ; (ಮಾಹಿತಿ ನೀಡುವುದು)

(ಉ) ಪ್ರಸ್ತುತ ಉದ್ಯೋಗ ಕಳೆದುಕೊಂಡ Non UGC ಅತಿಥಿ ಉಪನ್ಯಾಸಕರನ್ನು ಪುನ: ಸೇವೆಗೆ ತೆಗೆದುಕೊಳ್ಳಲು ಸರ್ಕಾರ ಚಿಂತನೆ ನಡೆಸಿದೆಯೇ ; ಹಾಗಿದ್ದಲ್ಲಿ, ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ? (ವಿವರವಾದ ಮಾಹಿತಿ ನೀಡುವುದು)

# ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ದೈಹಿಕ ಹಾಗೂ ವಿಶೇಷ ಶಿಕ್ಷಕರ ಹುದ್ದೆಗಳ ನೇಮಕಾತಿ ಮಾಡುವ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೬೦೪ (೭೦೧) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಿಗೆ ಮಂಜೂರಾದ ಕರ್ತವ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ದೈಹಿಕ ಶಿಕ್ಷಕ ಹಾಗೂ ವಿಶೇಷ ಶಿಕ್ಷಕರ ಹುದ್ದೆಗಳು ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ದೈಹಿಕ ಹಾಗೂ ವಿಶೇಷ ಶಿಕ್ಷಕರುಗಳ (ಅತಿಥಿ ಅಥವಾ ಸರ್ಕಾರಿ ಎರಡೂ ಇಲ್ಲದ ) ಕೊರತೆಯನ್ನು ಎದುರಿಸುತ್ತಿರುವ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು; (ಖಾಲಿ ಹುದ್ದೆಗಳ ಸಹಿತ ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ದೈಹಿಕ ಶಿಕ್ಷಕರ ಹಾಗೂ ವಿಶೇಷ ಶಿಕ್ಷಕರ ನೇಮಕಾತಿ ಮಾಡಿ ದಶಕಗಳೇ ಕಳೆದುಹೋಗಿದ್ದು ಪ್ರತಿ ವರ್ಷ ಲಕ್ಷಾಂತರ ವಿದ್ಯಾರ್ಥಿಗಳು ದೈಹಿಕ ಹಾಗೂ ಕೌಶಲ್ಯ ಶಿಕ್ಷಣ ಪಡೆಯುವಲ್ಲಿ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಕೈಗೊಂಡ ಕ್ರಮಗಳೇನು ;

(ಈ) ಕಳೆದ ಡಿಸೆಂಬರ್ ಅಧಿವೇಶನದಲ್ಲಿ ಕಲ್ಯಾಣ ಕರ್ನಾಟಕ ಭಾಗದ ಶಾಲೆಗಳಲ್ಲಿ ಪ್ರಸ್ತುತ ಖಾಲಿ ಇರುವ ೫೨೬೭ ದೈಹಿಕ ಹಾಗೂ ವಿಶೇಷ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು

ದಿನಾಂಕ:೧೧.೦೭.೨೦೨೪ ರಂದು ಅನುಮತಿ ನೀಡಲಾಗಿದೆ ಎಂದು ಸರ್ಕಾರ ತಿಳಿಸಿದೆ ಆದರೆ ಎರಡು ವರ್ಷಗಳೇ ಕಳೆಯುತ್ತಿದ್ದರೂ ಇಲ್ಲಿಯವರೆಗೂ ನೇಮಕಾತಿಯನ್ನು ಮಾಡದೇ ಇರಲು ಕಾರಣವೇನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತದೆ? (ಮಾಹಿತಿ ನೀಡುವುದು)

## ರಾಜ್ಯದಲ್ಲಿ ೧೯೯೫ರ ನಂತರದಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಸಗಿ ಕನ್ನಡ ಮಾಧ್ಯಮ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೬೦೫ (೭೦೨) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಅನುದಾನಿತ ಪ್ರಾಥಮಿಕ ಪ್ರೌಢ ಶಾಲೆಗಳು ಮತ್ತು ಪದವಿಪೂರ್ವ ಕಾಲೇಜುಗಳು ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಯಾವ ವರ್ಷದವರೆಗೆ ಖಾಸಗಿ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲಾಗಿದೆ ;

(ಇ) ಈಗಾಗಲೇ ಅನುದಾನಕ್ಕೆ ಒಳಪಟ್ಟ ಶಾಲಾ ಕಾಲೇಜುಗಳಿಗೆ ೧೯೯೫ರ ನಂತರವೂ ಅನುದಾನವನ್ನು ನೀಡಲಾಗುತ್ತಿದೆಯೇ ; ಇಲ್ಲ ಎಂದಾದಲ್ಲಿ, ಯಾವ ಕಾರಣಕ್ಕೆ ಅನುದಾನವನ್ನು ನೀಡುತ್ತಿಲ್ಲ ; (ವಿವರ ನೀಡುವುದು)

(ಈ) ೧೯೯೫ರ ನಂತರ ಪ್ರಾರಂಭವಾದ ಖಾಸಗಿ ಕನ್ನಡ ಮಾಧ್ಯಮ ಶಾಲೆಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಸರ್ಕಾರ ಕ್ರಮ ಕೈಗೊಳ್ಳದೇ ಇರಲು ಕಾರಣವೇನು ; ಯಾವ ಕಾಲಮಿತಿಯಲ್ಲಿ ಸದರಿ ಶಾಲೆಗಳನ್ನು ವೇತನಾನುದಾನಕ್ಕೆ ಒಳಪಡಿಸಲಾಗುವುದು ;

(ಉ) ೧೯೯೫ ರಿಂದ ೨೦೨೪ನೇ ಸಾಲಿನವರೆಗೆ ಎಷ್ಟು ಕನ್ನಡ ಮಾಧ್ಯಮದ ಖಾಸಗಿ ಶಾಲೆಗಳು ಪ್ರಾರಂಭವಾಗಿವೆ ;

(ಊ) ಅನುದಾನಿತ ಶಾಲಾ ಕಾಲೇಜುಗಳಲ್ಲಿ ಬಿಸಿಯೂಟ, ಪುಸ್ತಕಗಳನ್ನು ಹೊರತುಪಡಿಸಿ ಸರ್ಕಾರಿ ಶಾಲಾ ಮಕ್ಕಳಿಗೆ ನೀಡುವ ಇತರೆ ಸೌಲಭ್ಯಗಳನ್ನು ನೀಡದೇ ಇರಲು ಕಾರಣವೇನು ; ಇತರೆ ಸೌಲಭ್ಯಗಳನ್ನು ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು:

(ಋ) ಅನುದಾನ ರಹಿತ ಖಾಸಗಿ ಕನ್ನಡ ಮಾಧ್ಯಮ ಶಾಲೆಗಳಲ್ಲಿ ಓದುತ್ತಿರುವ ಮಕ್ಕಳಿಗೆ ಸರ್ಕಾರದಿಂದ ಬಿಸಿಯೂಟ ಹಾಗೂ ಇನ್ನಿತರ ಸೌಲಭ್ಯಗಳನ್ನು ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಬಿಸಿಯೂಟ ಹಾಗೂ ಇನ್ನಿತರ ಸೌಲಭ್ಯಗಳನ್ನು ನೀಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಮಾನವ–ವನ್ಯಪ್ರಾಣಿ ಸಂಘರ್ಷದ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೦೬ (೭೦೩) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಾನವ–ವನ್ಯಪ್ರಾಣಿ ಸಂಘರ್ಷ ತಡೆಗೆ ಸರ್ಕಾರ ಕೈಗೊಂಡಿರುವ ಶಾಶ್ವತ ಪರಿಹಾರವೇನು ;

(ಆ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ಮಾನವ–ವನ್ಯಪ್ರಾಣಿ ಸಂಘರ್ಷದಿಂದ ಪ್ರಾಣ ಕಳೆದುಕೊಂಡಿರುವವರ ಸಂಖ್ಯೆ ಎಷ್ಟು ;

(ಇ) ಕೊಡಗು, ಚಾಮರಾಜನಗರ, ಮೈಸೂರು ಜಿಲ್ಲೆಗಳಲ್ಲಿ ಹುಲಿ ದಾಳಿಗೆ ಬಲಿಯಾಗಿರುವವರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಕಾಡು ಪ್ರಾಣಿಗಳು ನಾಡಿಗೆ ಬರಲು ಕಾರಣವೇನೆಂಬುದನ್ನು ಸರ್ಕಾರ ಮನಗಂಡಿದೆಯೇ ; (ಕಾರಣಗಳನ್ನು ವಿವರಿಸುವುದು)

(ಉ) ಅರಣ್ಯ ಪ್ರದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಕ್ರಮ ರೆಸಾರ್ಟ್‌ಗಳಿಂದ ಮತ್ತು ಅಲ್ಲಿ ನಡೆಯುತ್ತಿರುವ ಅಕ್ರಮ ಚಟುವಟಿಕೆಗಳಿಂದಾಗಿ ಕಾಡು ಪ್ರಾಣಿಗಳು ನಾಡಿಗೆ ಬರುತ್ತಿವೆ ಎಂದು ಸ್ಥಳೀಯರು ಮತ್ತು ಸಾರ್ವಜನಿಕರು ಆರೋಪಿಸುತ್ತಿದ್ದು ಇದಕ್ಕೆ ಸರ್ಕಾರ ಕೈಗೊಂಡಿರುವ ಕ್ರಮ ಮತ್ತು ನಿಲುವೇನು ?

## ಕೊಡಗು ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೦೭ (೭೦೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿರುವ ಸರ್ಕಾರಿ ಆಸ್ಪತ್ರೆಗಳ ಸಂಖ್ಯೆ ಎಷ್ಟು; ಜಿಲ್ಲಾ ಕೇಂದ್ರ, ತಾಲ್ಲೂಕು ಕೇಂದ್ರ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳೆಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಎಲ್ಲಾ ಆಸ್ಪತ್ರೆಗಳಲ್ಲಿ ನಿಗದಿತ ಹುದ್ದೆಗಳೆಷ್ಟು ; ಎಲ್ಲಾ ಆಸ್ಪತ್ರೆಗಳಲ್ಲಿ ವೈದ್ಯರು ನೇಮಕವಾಗಿದ್ದಾರೆಯೇ ; ನೇಮಕವಾಗಿಲ್ಲವಾದರೆ, ಯಾವ ಕಾಲಮಿತಿಯೊಳಗೆ ಎಲ್ಲಾ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ;

(ಇ) ಕೆಲವು ಆಸ್ಪತ್ರೆಗಳಲ್ಲಿ ನರ್ಸಿಂಗ್ ಸಮಸ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಜಿಲ್ಲೆಯಾದ್ಯಂತ ಪ್ರತಿ ಆರೋಗ್ಯ ಕೇಂದ್ರಗಳಲ್ಲಿ ಡಯಾಲಿಸಿಸ್ ಸೆಂಟರ್‌ಗಳಿವೆಯೇ ;

(ಉ) ಸರ್ಕಾರಿ ಆಸ್ಪತ್ರೆಗಳು ಸರಿಯಾಗಿ ಕಾರ್ಯನಿರ್ವಹಿಸುವ ಬಗ್ಗೆ ಸಾರ್ವಜನಿಕ ಸಹಾಯವಾಣಿ ಕೇಂದ್ರಗಳನ್ನು ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

## ಶಾಲಾ ಮಕ್ಕಳಿಗೆ ಉಚಿತ ನೋಟ್ ಪುಸ್ತಕ ಒದಗಿಸುವ ಕುರಿತು

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) :–**

೬೦೮ (೭೦೫) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಲಾ ಮಕ್ಕಳಿಗೆ ಉಚಿತ ನೋಟ್ ಪುಸ್ತಕ ಒದಗಿಸುವಲ್ಲಿ ಸರ್ಕಾರವು ಕೈಗೊಂಡ ನಿರ್ಣಯಗಳೇನು ;

(ಆ) ಮಾನ್ಯ ಮುಖ್ಯಮಂತ್ರಿಗಳೇ ರಾಜ್ಯದ ೫೦ ಲಕ್ಷಕ್ಕೂ ಹೆಚ್ಚಿನ ಸಂಖ್ಯೆಯ ವಿದ್ಯಾರ್ಥಿಗಳಿಗೆ ಉಚಿತ ನೋಟ್‌ಬುಕ್ ವಿತರಿಸಲು ಸೂಚಿಸಿದ ಬಳಿಕವೂ ಇಲ್ಲಿಯವರೆಗೂ ವಿತರಿಸದೇ ಇರುವುದಕ್ಕೆ ಕಾರಣಗಳೇನು ? (ಮಾಹಿತಿ ನೀಡುವುದು)

## ಇಂಧನ ಇಲಾಖೆಯಿಂದ **Transformer** ಗಳ ಖರೀದಿ ಬಗ್ಗೆ

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) :–**

೬೦೯ (೭೦೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ಇಂಧನ ಇಲಾಖೆಯ ವತಿಯಿಂದ ಎಷ್ಟು ಟ್ರಾನ್ಸ್‌ಫಾರ್ಮರ್‌ಗಳನ್ನು ಖರೀದಿ ಮಾಡಲಾಗಿದೆ ; ಮಾಡಲಾದ ವೆಚ್ಚ ಮತ್ತು ಯಾರಿಂದ ಖರೀದಿ ಮಾಡಲಾಗಿದೆ ; (ವಿವರ ಒದಗಿಸುವುದು)

(ಆ) ಕಳೆದ ೨ ವರ್ಷಗಳಲ್ಲಿ Transformer ಖರೀದಿಗಾಗಿ ಟೆಂಡರ್ ಕರೆಯಲಾಗಿದೆಯೇ ; ಹಾಗಿದ್ದಲ್ಲಿ, ಟೆಂಡರ್‌ನಲ್ಲಿ ಭಾಗವಹಿಸಿರುವ ಸಂಸ್ಥೆಯ ವಿವರ ಒದಗಿಸುವುದು ;

(ಇ) ಕರ್ನಾಟಕ ಸರ್ಕಾರದ ಅಂಗ ಸಂಸ್ಥೆಯಾದ KELನಿಂದ ವಿದ್ಯುತ್ Transformer ಗಳು ಖರೀದಿಸದೆ ಇರುವುದಕ್ಕೆ ಕಾರಣಗಳನ್ನು ತಿಳಿಸುವುದು ;

(ಈ) ಪ್ರಸ್ತುತ ಕೇರಳದ ಲಾಭಿಗೆ ಒಳಗಾಗಿ ಅಲ್ಲಿನ ಸಂಸ್ಥೆಯಿಂದ ವಿದ್ಯುತ್ Transformer ಗಳನ್ನು ಖರೀದಿ ಮಾಡಲಾಗುತ್ತಿದೆಯೇ ? (ವಿವರ ಒದಗಿಸುವುದು)

## ವೈದ್ಯಕೀಯ ಕ್ಷೇತ್ರದಲ್ಲಿ AI ಅನುಷ್ಠಾನದ ಬಗ್ಗೆ

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) :–**

೬೧೦ (೭೦೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) Artificial Intelligence (AI) ಆಧಾರಿತವಾಗಿ ವೈದ್ಯಕೀಯ ಕ್ಷೇತ್ರದಲ್ಲಿ ವಿವಿಧ ಸವಲತ್ತು ಹಾಗೂ ಸೌಲಭ್ಯಗಳನ್ನು ಗುಣಾತ್ಮಕವಾಗಿ ಬದಲಾವಣೆ ಮಾಡುವಲ್ಲಿ ತಂತ್ರಜ್ಞಾನಗಳ ಬಗ್ಗೆ ಸರ್ಕಾರ ವಹಿಸಿರುವ ಕ್ರಮಗಳೇನು ; (ವಿವರ ಒದಗಿಸುವುದು)

(ಆ) ಎರಡು ವೈದ್ಯಕೀಯ ಕ್ಷೇತ್ರಕ್ಕೆ ಉಪಯುಕ್ತವಾಗುವಂಥ AI ತಂತ್ರಜ್ಞಾನ ಅಭಿವೃದ್ಧಿ ಪಡಿಸುತ್ತಿರುವ start up ಗಳ ಬಗ್ಗೆ ಸರ್ಕಾರ ಯಾವ ರೀತಿಯಲ್ಲಿ ಮಾಹಿತಿ ಹೊಂದಿದೆ. ಇಲ್ಲದಿದ್ದಲ್ಲಿ, ಈ ಬಗ್ಗೆ ಸರ್ಕಾರದ ಪ್ರಯತ್ನಗಳೇನು ; (ವಿವರ ಒದಗಿಸುವುದು)

(ಇ) ಆರೋಗ್ಯ ಕ್ಷೇತ್ರದಲ್ಲಿ ಸದರಿ ತಂತ್ರಜ್ಞಾನ ಅಭಿವೃದ್ಧಿ ಪಡಿಸುತ್ತಿರುವ start up ಗಳಿಗೆ ಸರ್ಕಾರ ಯಾವ ರೀತಿಯ ಸಹಾಯ ಮತ್ತು ಸವಲತ್ತುಗಳನ್ನು ನೀಡುತ್ತಿದೆ ; (ವಿವರ ಒದಗಿಸುವುದು)

(ಈ) start up ಗಳು patent ಗಳಿಗೆ ಅರ್ಜಿ ಸಲ್ಲಿಸಿರುವ ಅಥವಾ ಪೇಟೆಂಟ್ ಪಡೆದಿರುವ start up ಗಳ ಮಾಹಿತಿಗಳನ್ನು ಸರ್ಕಾರ ಹೊಂದಿದೆಯೇ ; ಇಲ್ಲದಿದ್ದಲ್ಲಿ, ಮಾಹಿತಿ ಸಂಗ್ರಹಣೆಗೆ ಸರ್ಕಾರ ವಹಿಸಿರುವ ಕ್ರಮಗಳೇನು ?

## ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧ ಕೊರತೆ ನೀಗಿಸುವ ಬಗ್ಗೆ

**ಡಾ॥ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೧೧ (೭೦೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಔಷಧ ಉಗ್ರಾಣದಲ್ಲಿ (ವೇರ್ ಹೌಸ್) ಜೀವ ರಕ್ಷಕ ಔಷಧಗಳ ಕೊರತೆಯು ತೀವ್ರವಾಗಿ ರೋಗಿಗಳು ತೊಂದರೆ ಅನುಭವಿಸುತ್ತಿದ್ದಾರೆ ಎಂದು ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರಗಳನ್ನು ನೀಡುವುದು)

(ಆ) ರಾಜ್ಯದ ಕೆಲವು ಜಿಲ್ಲೆ ಹಾಗೂ ತಾಲ್ಲೂಕುಗಳಲ್ಲಿ ಸಾಮಾನ್ಯ ಜ್ವರಕ್ಕೆ ನೀಡಲಾಗುವ ಪ್ಯಾರಾಸಿಟಮಲ್ ಮಾತ್ರೆಗಳು, ಐ. ವಿ. ದ್ರಾವಣ (ಗ್ಲುಕೋಸ್), ಆಂಟಿಬಯೋಟಿಕ್ ಇಂಜೆಕ್ಷನ್‌ಗಳೂ ಸಿಗುತ್ತಿಲ್ಲವೆಂದು ಹಾಗೂ ಇನ್ನೂ ಕೆಲವು ಆಸ್ಪತ್ರೆಗಳಲ್ಲಿ ಹೊಲಿಗೆ, ಬ್ಯಾಂಡೇಜ್, ಔಷಧಗಳ ಕೊರತೆ ಇದೆ ಎಂದು ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಉಚಿತವಾಗಿ ನೀಡುತ್ತಿದ್ದ ಔಷಧಗಳ ಕೊರತೆಯಿಂದಾಗಿ. ಖಾಸಗಿ ಔಷಧದ ಅಂಗಡಿಯಲ್ಲಿ ಖರೀದಿಸುವಂತೆ ವೈದ್ಯರು, ಶುಶ್ರೂಷಕರು ಚೀಟಿ ನೀಡುತ್ತಿದ್ದು ನೋವು ನಿವಾರಕಗಳು. ರೋಗನಿರೋಧಕ

ಮಾತ್ರೆಗಳು. ಸಿರಪ್‌ಗಳ ಕೊರತೆ ತೀವ್ರವಾಗಿದೆ ಎಂದು ಹಾಗೂ ಮಂಡಿ ನೋವು, ಬೆನ್ನು ನೋವಿಗೆ ಹೆಚ್ಚಿನ ಜನರಿಗೆ ನೀಡುತ್ತಿದ್ದ ಔಷಧಗಳ ಪೂರೈಕೆ ಸ್ಥಗಿತಗೊಂಡಿದೆ ಎಂದು ವರದಿಯಾಗಿದೆ. ಈ ಸ್ಥಿತಿಗೆ ಕಾರಣಗಳೇನು ಹಾಗೂ ಅಗತ್ಯ ತುರ್ತಾಗಿ ಬೇಕಾಗುವ ಔಷಧಗಳ ಕೊರತೆ ನೀಗಿಸಲು ಯಾವ ಕ್ರಮಗಳನ್ನು ಆರೋಗ್ಯ ಇಲಾಖೆ ತೆಗೆದುಕೊಂಡಿದೆ ಹಾಗೂ ಮುಂದೆ ಈ ರೀತಿ ಆಗದಂತೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ? (ವಿವರಗಳನ್ನು ನೀಡುವುದು)

## ಶುಚಿ ಕಾರ್ಯಕ್ರಮದ ಜಾರಿ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೬೧೨ (೭೦೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫–೨೬ನೇ ಸಾಲಿನಲ್ಲಿ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿರುವ ಸರ್ಕಾರಿ ಅನುದಾನಿತ ಶಾಲೆಗಳು, ಕಾಲೇಜುಗಳು ಹಾಗೂ ವಸತಿ ನಿಲಯಗಳ ಹದಿಹರೆಯದ ಹೆಣ್ಣು ಮಕ್ಕಳಿಗೆ ಶುಚಿ ಕಾರ್ಯಕ್ರಮದಡಿ ನ್ಯಾಪ್ಕಿನ್ ಪ್ಯಾಡ್‌ಗಳನ್ನು ವಿತರಿಸಲು ಸರ್ಕಾರ ಕ್ರಮವಹಿಸಿದೆಯೇ ;

(ಆ) ಕ್ರಮವಹಿಸಿದ್ದಲ್ಲಿ, ಶಾಲೆಗಳು, ಕಾಲೇಜುಗಳು ಹಾಗೂ ವಿವಿಧ ಇಲಾಖೆಗಳ ವಸತಿ ನಿಲಯಗಳಿಂದ ಒಟ್ಟು ಎಷ್ಟು ಹೆಣ್ಣು ಮಕ್ಕಳಿಗೆ ನ್ಯಾಪ್ಕಿನ್ ಪ್ಯಾಡ್‌ಗಳನ್ನು ವಿತರಿಸಲಾಗಿದೆ ; ಇದಕ್ಕೆ ತಗಲುವ ವೆಚ್ಚ ಎಷ್ಟು ;

(ಇ) ಒಂದು ನ್ಯಾಪ್ಕಿನ್ ಪ್ಯಾಡ್‌ಗೆ ಅಂದಾಜು ಎಷ್ಟು ವೆಚ್ಚ ತಗಲುತ್ತದೆ ; ಒಂದು ಹೆಣ್ಣು ಮಗುವಿಗೆ ವರ್ಷಕ್ಕೆ ಎಷ್ಟು ನ್ಯಾಪ್ಕಿನ್ ಪ್ಯಾಡ್‌ಗಳನ್ನು ವಿತರಿಸಲಾಗುತ್ತದೆ ;

(ಈ) ಸ್ಯಾನಿಟರಿ ನ್ಯಾಪ್ಕಿನ್ ಪ್ಯಾಡ್‌ಗಳನ್ನು ವಿತರಿಸುವಲ್ಲಿ ವಿಳಂಬವಾಗಿದೆಯೇ ; ಆಗಿದ್ದಲ್ಲಿ, ಕಾರಣವೇನು ?

## ವಿಶ್ವವಿದ್ಯಾನಿಲಯಗಳ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೬೧೩ (೭೧೧) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಶಿವಮೊಗ್ಗ ಜಿಲ್ಲೆಯಲ್ಲಿರುವ ಕುವೆಂಪು ವಿಶ್ವವಿದ್ಯಾನಿಲಯ ಹಾಗೂ ದಾವಣಗೆರೆ ವಿಶ್ವವಿದ್ಯಾನಿಲಯದಲ್ಲಿ ೧೦ಕ್ಕಿಂತ ಕಡಿಮೆ ವಿದ್ಯಾರ್ಥಿಗಳು ಪ್ರವೇಶ ಪಡೆದಿರುವ ಸ್ನಾತಕೋತ್ತರ ವಿಭಾಗಗಳ ವಿವರ ನೀಡುವುದು ;

(ಆ) ವಿಶ್ವವಿದ್ಯಾನಿಲಯದ ಆರ್ಥಿಕ ಹೊರೆ ತಗ್ಗಿಸುವ ನಿಟ್ಟಿನಲ್ಲಿ ಅಂತಹ ವಿಭಾಗಗಳನ್ನು ಸಮೀಕರಿಸಿ ಒಂದೇ ವಿಶ್ವವಿದ್ಯಾನಿಲಯದಲ್ಲಿ ಉಳಿಸಿಕೊಳ್ಳುವ ಸಂಬಂಧದಲ್ಲಿ ಸರ್ಕಾರ ಅನುಸರಿಸುತ್ತಿರುವ ಕ್ರಮಗಳೇನು ;

(ಇ) ಕುವೆಂಪು ವಿಶ್ವವಿದ್ಯಾನಿಲಯಕ್ಕೆ ಮಂಜೂರಾಗಿರುವ ಅಗತ್ಯಕ್ಕಿಂತ ಹೆಚ್ಚಿರುವ ಉಪಕುಲಸಚಿವರ ಹುದ್ದೆಗಳನ್ನು ಸರ್ಕಾರ ಹಿಂದಕ್ಕೆ ಪಡೆದುಕೊಂಡು ಆ ಹುದ್ದೆಗಳನ್ನು ಅಗತ್ಯವಿರುವ ವಿಶ್ವವಿದ್ಯಾನಿಲಯಗಳಿಗೆ ವರ್ಗಾಯಿಸುವ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಸಾಕಷ್ಟು ಲೋಪದೋಷದಿಂದ ಕೂಡಿರುವ ಹಾಗೂ ವಿಶ್ವವಿದ್ಯಾನಿಲಯಕ್ಕೆ ಆರ್ಥಿಕ ಹೊರೆಯಾಗಿರುವ "ಡಿಜಿಟಲ್ ಮೌಲ್ಯಮಾಪನ" ಪದ್ಧತಿಯನ್ನು ರದ್ದುಪಡಿಸುವ ಸಂಬಂಧ ಸರ್ಕಾರದ ನಿಲುವೇನು ?

## ಅರಣ್ಯ ಭೂಮಿ ಒತ್ತುವರಿ ಬಗ್ಗೆ

**ಶ್ರೀ ಶರವಣ ಟಿ.ಎ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೧೪ (೭೧೨) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒತ್ತುವರಿ ಆಗಿರುವ ಒಟ್ಟು ಅರಣ್ಯ ಪ್ರದೇಶಗಳ ವಿಸ್ತೀರ್ಣದ ಬಗ್ಗೆ ಜಿಲ್ಲಾವಾರು ಸಮಗ್ರ ವಿವರ ನೀಡುವುದು ;

(ಆ) ಈ ಒತ್ತುವರಿ ತೆರವು ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಇಲ್ಲಿಯವರೆಗೆ ಎಷ್ಟು ಅರಣ್ಯ ಭೂಮಿಯನ್ನು ವಶಪಡಿಸಿಕೊಂಡಿದೆ ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಒತ್ತುವರಿ ಮಾಡಿಕೊಂಡಿರುವ ವ್ಯಕ್ತಿ, ಸಂಸ್ಥೆಗಳ ಹೆಸರು, ಒತ್ತುವರಿ ವಿಸ್ತೀರ್ಣ ಸಹಿತ ಸಮಗ್ರ ವಿವರಗಳನ್ನು ಒದಗಿಸುವುದು, ಹಾಗೂ ಮುಂದೆ ಒತ್ತುವರಿ ತಡೆಯಲು ಸರ್ಕಾರ ಕೈಗೊಂಡ ಕ್ರಮಗಳ ಸಂಪೂರ್ಣ ಮಾಹಿತಿ ನೀಡುವುದು ?

## ರಾಜ್ಯದಲ್ಲಿರುವ Cancer Care Unit ಗಳ ಸ್ಥಿತಿಗತಿ ಬಗ್ಗೆ

**ಶ್ರೀ ಶರವಣ ಟಿ.ಎ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೧೫ (೭೧೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ರಾಜ್ಯದಲ್ಲಿ ಎಷ್ಟು ಜನರು ಕ್ಯಾನ್ಸರ್ ರೋಗಕ್ಕೆ ತುತ್ತಾಗುತ್ತಿದ್ದಾರೆ ;

(ಆ) ರಾಜ್ಯದಲ್ಲಿ ಒಟ್ಟು ಎಷ್ಟು ಕ್ಯಾನ್ಸರ್ ಯೂನಿಟ್‌ಗಳಿವೆ ; ಎಲ್ಲಿವೆ ; ರಾಜ್ಯದ ಹಲವು ಕಡೆಗಳಲ್ಲಿ ಕ್ಯಾನ್ಸರ್ ಕೇರ್ ಯೂನಿಟ್‌ಗಳಲ್ಲಿ CET ಮತ್ತು PET ಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ಸೌಲಭ್ಯಗಳನ್ನು ಒದಗಿಸದಿರಲು ಕಾರಣಗಳೇನು ;

(ಇ) ಹುಬ್ಬಳ್ಳಿ ಕ್ಯಾನ್ಸರ್ ಕೇರ್ ಘಟಕವನ್ನು ಪ್ರಾದೇಶಿಕ ಕ್ಯಾನ್ಸರ್ ಕೇಂದ್ರವೆಂದು ಘೋಷಿಸುವ ಪ್ರಸ್ತಾಪ ಸರ್ಕಾರದ ಮುಂದೆ ಇದೆಯೇ ; ಇದ್ದಲ್ಲಿ, ಯಾವ ಕಾಲಮಿತಿಯಲ್ಲಿ ಘೋಷಿಸಲಾಗುವುದು ;

(ಈ) ಹಾಸನ ಮತ್ತು ಕಾರವಾರ ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಕ್ಯಾನ್ಸರ್ ಘಟಕ ಸ್ಥಾಪಿಸಲು ಇರುವ ಅಡೆತಡೆಗಳೇನು ; ಯಾವ ಕಾಲಮಿತಿಯಲ್ಲಿ ಸದರಿ ಸ್ಥಳಗಳಲ್ಲಿ Cancer Care Unitಗಳನ್ನು ಪ್ರಾರಂಭಿಸಲಾಗುವುದು ?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ "ಡೇ–ನಲ್ಮ್" ಯೋಜನೆಯ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೧೬ (೫೫೪) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕೌಶಲ್ಯಾಭಿವೃದ್ಧಿ ಇಲಾಖೆಯಲ್ಲಿ "ಡೇ–ನಲ್ಮ್" ಯೋಜನೆಯಡಿ ಗುತ್ತಿಗೆ ಆಧಾರದಲ್ಲಿ ಕೆಲಸ ಮಾಡುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಈ ಯೋಜನೆಯನ್ನು ರಾಜ್ಯದಲ್ಲಿ ಎಂದಿನಿಂದ ಜಾರಿಗೆ ತರಲಾಗಿದೆ ;

(ಆ) ಸದರಿ ಸಿಬ್ಬಂದಿಗಳ ಕೆಲಸ ಕಾರ್ಯಗಳೇನು ; ಇವರಿಗೆ ನೀಡುತ್ತಿರುವ ವೇತನ/ಗೌರವಧನ ಎಷ್ಟು ಹಾಗೂ ಯಾವ ಲೆಕ್ಕ ಶೀರ್ಷಿಕೆ ಅಡಿಯಲ್ಲಿ ನೀಡಲಾಗುತ್ತಿದೆ ; ಇವರನ್ನು ಎಂದಿನಿಂದ ನೇಮಕ ಮಾಡಿಕೊಳ್ಳಲಾಗಿದೆ ; (ಮಾಹಿತಿ ನೀಡುವುದು)

(ಇ) "ಡೇ–ನಲ್ಮ್" ಯೋಜನೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಕಳೆದ ೭ ತಿಂಗಳುಗಳಿಂದ ವೇತನ/ಗೌರವಧನ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸಿಬ್ಬಂದಿಗಳ ಸಂಬಳವನ್ನು ನೀಡದಿರಲು ಕಾರಣವೇನು ಮತ್ತು ಯಾವಾಗ ನೀಡಲಾಗುವುದು ;

(ಈ) ಈ ಮೇಲ್ಕಂಡ ಯೋಜನೆಯಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಕನಿಷ್ಠ ವೇತನ ಜಾರಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಅನ್ನಭಾಗ್ಯ ಯೋಜನೆಯಡಿ ಪಡಿತರ ಚೀಟಿದಾರರಿಗೆ ಅಕ್ಕಿ ವಿತರಣೆ ಆಗುತ್ತಿರುವ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೧೭ (೫೫೫) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಬಿಪಿಎಲ್ ಪಡಿತರ ಚೀಟಿಯನ್ನು ಹೊಂದಿರುವ ಕುಟುಂಬಗಳು ಎಷ್ಟು ;

(ಆ) ಅನ್ನಭಾಗ್ಯ ಯೋಜನೆಯಡಿ ಪಡಿತರ ಚೀಟಿದಾರರಿಗೆ ಪ್ರತಿ ತಿಂಗಳು ಎಷ್ಟು ಕೆಜಿ ಅಕ್ಕಿ ಹಾಗೂ ಇತರೆ ಪದಾರ್ಥಗಳನ್ನು ವಿತರಿಸಲಾಗುತ್ತಿದೆ ;

(ಇ) ಕೆಲವು ಕುಟುಂಬಗಳು ಪಡೆಯುತ್ತಿರುವ ಅಕ್ಕಿ ಪ್ರಮಾಣವು ತಿಂಗಳ ಬಳಕೆಯಾಗಿ ಹೆಚ್ಚುವರಿಯಾಗಿ ಉಳಿಯುವ ಅಕ್ಕಿಯನ್ನು ಕಾಳಸಂತೆಯಲ್ಲಿ ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಅಕ್ಕಿಯ ದುರುಪಯೋಗವಾಗದಂತೆ ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ಸರ್ಕಾರಿ ಶಾಲೆಗಳಲ್ಲಿರುವ ಅನಾನುಕೂಲತೆ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೧೮ (೫೫೬) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ಸರ್ಕಾರಿ ಶಾಲೆಗಳಲ್ಲಿರುವ ಕೊಠಡಿಗಳ ಕೊರತೆ, ಶೌಚಾಲಯಗಳ ಕೊರತೆ ನಿವಾರಿಸಲು ಹಾಗೂ ಶೀಥಿಲಾವಸ್ಥೆ ಕಟ್ಟಡಗಳ ದುರಸ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಕಳೆದ ೩ ವರ್ಷಗಳಲ್ಲಿ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಸಿ.ಎಸ್.ಆರ್. ನಿಧಿಯಲ್ಲಿ ಅಭಿವೃದ್ಧಿ ಪಡಿಸಿದ ಶಾಲೆಗಳ ಸಂಖ್ಯೆ ಎಷ್ಟು ; ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ;

(ಇ) ಈ ಮೇಲ್ಕಂಡ ಜಿಲ್ಲೆಗಳಿಗೆ ಕಳೆದ ಮೂರು ವರ್ಷಗಳಲ್ಲಿ ಡಿ.ಎಂ.ಎಫ್ ನಿಧಿ ಮತ್ತು ಸಿ .ಎಸ್. ಆರ್ ನಿಧಿಯಿಂದ ಹಾಗೂ ಸರ್ಕಾರದಿಂದ ಶಾಲೆಗಳ ನೂತನ ಕಟ್ಟಡ ಮತ್ತು ದುರಸ್ತಿಗಾಗಿ ಮಂಜೂರಾದ ಅನುದಾನ ಎಷ್ಟು ?

## ಅರಣ್ಯ ಇಲಾಖೆ ಹೊರಡಿಸಿರುವ ಸುತ್ತೋಲೆ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೧೯ (೫೮೬) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದ ಅರಣ್ಯ ಇಲಾಖೆಯ ಸುತ್ತೋಲೆ ಸಂಖ್ಯೆ.೪೫ಎಫ್ ಜಿಎಲ್ ೨೦೧೫: ದಿನಾಂಕ:೧೩.೦೩.೨೦೧೫ ರ ಪ್ರಕಾರ ೩ ಎಕರೆಗಿಂತ ಕಡಿಮೆ ವಿಸ್ತೀರ್ಣ ಹೊಂದಿರುವ ವ್ಯವಸಾಯದ ಭೂಮಿಗೆ ಸಂಬಂಧಿಸಿದಂತೆ ಸರ್ಕಾರ ನಿಗದಿಪಡಿಸಿದ ಮಾನದಂಡಗಳೇನು ; ರಾಜ್ಯದ ಯಾವ ಯಾವ ಪ್ರದೇಶಗಳಲ್ಲಿ ಸರ್ಕಾರದ ಸುತ್ತೋಲೆಯ ಪ್ರಯೋಜನ ಪರಿಶಿಷ್ಠ ಜಾತಿಯ ರೈತರಿಗೆ ಒದಗಿಸಲಾಗಿವೆ ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು) ;

(ಆ) ಸರ್ಕಾರದ ಈ ಅಧಿಸೂಚನೆಯಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಾಪ್ತಿ, ಅಭಿವೃದ್ಧಿ ಪ್ರಾಧಿಕಾರಿಗಳ ವ್ಯಾಪ್ತಿ, ನಗರಸಭೆ ಮತ್ತು ಪುರಸಭೆ ವ್ಯಾಪ್ತಿ ಹೊರತುಪಡಿಸಿ ಯಾವ

ಯಾವ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಈ ಸುತ್ತೋಲೆಯ ಪ್ರಕಾರ ರೈತರು ಪ್ರಯೋಜನ ಪಡೆದಿದ್ದಾರೆ ; (ಪೂರ್ಣ ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು) ;

(ಇ) ಅರಣ್ಯ ಇಲಾಖೆಗೆ ಸಂಬಂಧಿಸಿದಂತೆ ಮಾನ್ಯ ಉಚ್ಚನ್ಯಾಯಾಲಯ ಆದೇಶ ಸಂಖ್ಯೆ BHRWP NO ೯೫೭೩/೧೯೯೯ ಮತ್ತು WA೧೪೫೩-೬೪/೨೦೦೫, KLR ೨೦೧೩-೨೦೧೪ ರ ಆದೇಶದ ಪ್ರಕಾರ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು ೧೯೬೩ ರ ಕರ್ನಾಟಕ ಅರಣ್ಯ ಕಾಯ್ದೆ ದಿನಾಂಕ ೨೭.೦೨.೧೯೬೪ ರಿಂದ ಜಾರಿಗೆ ಬಂದಿದ್ದು ಅದಕ್ಕೂ ಮುನ್ನ ಭೂಮಿ ಸಾಗುವಳಿ ಮುಖಾಂತರ ಮಂಜೂರಾತಿ ಪಡೆದವರಿಗೆ ಅರಣ್ಯ ಇಲಾಖೆ ಪರಿಗಣಿಸಬೇಕಾಗುತ್ತದೆ ಎಂದು ಮಾನ್ಯ ಉಚ್ಚನ್ಯಾಯಾಲಯದ ಆದೇಶವಿದ್ದರೂ ಅರಣ್ಯ ಇಲಾಖೆಯವರು ಸರ್ಕಾರದ ಸುತ್ತೋಲೆ ಇದ್ದರೂ ಪರಿಶಿಷ್ಠ ಜನಾಂಗದ ರೈತರಿಗೆ ಅರಣ್ಯ ಇಲಾಖೆಯ ಕಂದಾಯ ಇಲಾಖೆಯಿಂದ ಮಂಜೂರಾದ ಭೂಮಿ ಪಡೆದ ರೈತರಿಗೆ ತೊಂದರೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು ;

(ಈ) ಈ ಹಿಂದಿನ ಕಂದಾಯ ಸಚಿವರು ಆನೇಕಲ್ ತಾಲ್ಲೂಕು ಜಿಗಣಿ ಹೋಬಳಿ ಭೂತನಹಳ್ಳಿ ಗ್ರಾಮದ ಸರ್ವೆ ನಂಬರ್ ೬೭ ರಲ್ಲಿನ ಜಮೀನು ಪರಿಶಿಷ್ಠ ಜಾತಿಯುವರಿಗೆ ಮಂಜೂರಾಗಿದ್ದರೆ ಅರಣ್ಯವೆಂದು ಘೋಷಣೆಯಾಗಿರುವುದನ್ನು ಕೈಬಿಡಲು ಪ್ರಸ್ತಾವನೆ ಸಲ್ಲಿಸಲು ೩೦.೦೮.೨೦೧೬ ರಂದು ಸೂಚಿಸಿದ್ದು ಅದರ ಪ್ರಕಾರ ಜಂಟಿ ಸರ್ವೆಯಾಗಿದ್ದು ಪ್ರಸ್ತಾವನೆ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು ; (ಸಂಪೂರ್ಣ ಮಾಹಿತಿ ನೀಡುವುದು) ;

(ಉ) ವಲಯ ಅರಣ್ಯಾಧಿಕಾರಿಯೊಬ್ಬರು ಬನ್ನೇರುಘಟ್ಟ (ಬಯೋಲಾಜಿಕಲ್ ಪಾರ್ಕ್) ಭೂತನಹಳ್ಳಿ ಸರ್ವೆ ನಂಬರ್ ೬೪ ಪಿ/೪೪ ಎಕರೆ ಮತ್ತು ೬೭ಪಿ ಅಲ್ಲಿ ೫೦ ಎಕರೆ ಒಟ್ಟು ೯೫ ಎಕರೆ ಅರಣ್ಯ ಇಲಾಖಾ ವ್ಯಾಪ್ತಿಗೆ ಸೇರಿಲ್ಲವೆಂಬ ಹಿಂಬರಹ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ? (ಸಂಪೂರ್ಣ ಮಾಹಿತಿ ನೀಡುವುದು)

## ಅರಣ್ಯ ಇಲಾಖೆಯ ಮಹದೇಶ್ವರ ಬೆಟ್ಟದಲ್ಲಿ ಹುಲಿಗಳ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೨೦ (೫೮೭) ಮಾನ್ಯ ಅರಣ್ಯ, ಜೀವಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚೆಗೆ ಮಲೆ ಮಹದೇಶ್ವರ ಬೆಟ್ಟದ ವ್ಯಾಪ್ತಿಯ ಅರಣ್ಯದಲ್ಲಿ ಹುಲಿಗಳಿಗೆ ವಿಷ ಇಟ್ಟು ಕೊಂದಿರುವ ಪ್ರಕರಣದಲ್ಲಿ ಹಂತಕರ ದಸ್ತಗಿರಿ ಮಾಡಲಾಗಿದೆಯೇ ಹಾಗೂ ಈ ಪ್ರಕರಣ ಪ್ರಸ್ತುತ ಯಾವ ಹಂತದಲ್ಲಿದೆ ;

(ಆ) ಬೆಳಗಾವಿಯಲ್ಲಿ ಸುಮಾರು ೩೦ ಕೃಷ್ಣ ಮೃಗಗಳು ಅನುಮಾನಸ್ಪದವಾಗಿ ಸಾವನ್ನಪ್ಪಿರುವ ಘಟನೆ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಸಾವುಗಳಿಗೆ ಕಾರಣವೇನು ಎಂಬ ಬಗ್ಗೆ ತನಿಖೆ ನಡೆಸಲಾಗಿದೆಯೇ ;

(ಇ) ರಾಜ್ಯದಲ್ಲಿ ಅರಣ್ಯ ಇಲಾಖೆಯಲ್ಲಿ ಎಲ್ಲಾ ವೃಂದದ ಮಂಜೂರಾದ ಒಟ್ಟು ಹುದ್ದೆಗಳು ಎಷ್ಟು ಹಾಗೂ ಪ್ರಸ್ತುತ ಯಾವ ಯಾವ ವೃಂದ ಅಧಿಕಾರಿ/ನೌಕರರು ಕಾರ್ಯನಿರ್ವಹಿಸುತ್ತಿದ್ದಾರೆ ; (ಜಿಲ್ಲಾವಾರು ಮಂಜೂರಾದ ಮತ್ತು ಕಾರ್ಯನಿರತ ವೃಂದಾವಾರು ಹುದ್ದೆಗಳ ಮಾಹಿತಿ ನೀಡುವುದು)

(ಈ) ಅರಣ್ಯ ಸಿಬ್ಬಂದಿಗೆ ಕಾಡು ಪ್ರಾಣಿಗಳಿಂದ ರಕ್ಷಿಸಿಕೊಳ್ಳಲು ಯಾವ ಆಯುಧವನ್ನು ಸರ್ಕಾರ ಒದಗಿಸಿದೆ ; ಈ ತರಹ ಕಾಡು ಪ್ರಾಣಿಗಳಿಂದ ಮೃತಪಟ್ಟ ಅರಣ್ಯ ಇಲಾಖೆಯ ಸಿಬ್ಬಂದಿ ಮತ್ತು ಸಾರ್ವಜನಿಕರ ಸಂಖ್ಯೆ ಎಷ್ಟು ಹಾಗೂ ಅವರ ಕುಟುಂಬದವರಿಗೆ ಸರ್ಕಾರ ಕೊಟ್ಟ ಪರಿಹಾರ ಎಷ್ಟು ? (ಕಳೆದ ಮೂರು ವರ್ಷಗಳ ಸಂಪೂರ್ಣ ಮಾಹಿತಿಯನ್ನು ಜಿಲ್ಲಾವಾರು ನೀಡುವುದು)

## ವಿಶ್ವವಿದ್ಯಾಲಯಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೨೧ (೫೮೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿಯ ಗುಲ್ಬರ್ಗಾ ವಿಶ್ವವಿದ್ಯಾಲಯದ ೨೦೨೪ರ ಡಿಸೆಂಬರ್‌ನಲ್ಲಿ ನಡೆದ ಬಿ.ಇಡಿ ೨ ಮತ್ತು ೪ ನೇ ಸೆಮಿಸ್ಟರ್‌ಗಳಿಗೆ ಅಕ್ರಮವಾಗಿ ಅಂಕಗಳನ್ನು ತಿರುಚಲಾಗಿದೆ ಎಂಬ ಆರೋಪ ಕೇಳಿಬರುತ್ತಿರುವುದಕ್ಕೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಉತ್ತರ ಪತ್ರಿಕೆಗಳನ್ನು ಮೌಲ್ಯಮಾಪನ ಪ್ರಕ್ರಿಯೆಯನ್ನು ತನಿಖೆ ಮಾಡಬೇಕೆಂದು ವಿದ್ಯಾರ್ಥಿಗಳು ಕೇಳುತ್ತಿದ್ದು ಇದನ್ನು ಸರ್ಕಾರ ಪರಿಗಣಿಸಿದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಕಲಬುರಗಿಯ ಗುಲ್ಬರ್ಗಾ ವಿಶ್ವವಿದ್ಯಾಲಯದ ೨೦೨೧ ರಿಂದ ವಿದ್ಯಾರ್ಥಿಗಳಿಗೆ ಅಂಕಪಟ್ಟಿ ನೀಡಿಲ್ಲ ಮತ್ತು ಅಂಕಪಟ್ಟಿ ಮುದ್ರಣದ ನಿಯಮಗಳು ಉಲ್ಲಂಘನೆಯಾಗಿದೆ ಎಂಬ ದೂರುಗಳು ಕೇಳಿಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ರಾಜ್ಯದಲ್ಲಿ ಎಲ್ಲಾ ವಿಶ್ವವಿದ್ಯಾಲಯಗಳ ಹೊರಗುತ್ತಿಗೆ ಆಧಾರದ ಮೇಲೆ ಎಷ್ಟು ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ ; (ಹೆಸರು ಮತ್ತು ಹುದ್ದೆಯ ಹೆಸರು, ದೂರವಾಣಿ ಸಂಖ್ಯೆಯೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು) ಖಾಯಂ ಸಿಬ್ಬಂದಿಗಳನ್ನು ನೀಡಲು ಸರ್ಕಾರ ವಿಫಲವಾಗುತ್ತಿರುವುದಕ್ಕೆ ಕಾರಣವೇನು ;

(ಈ) ರಾಜ್ಯದಲ್ಲಿ ಯಾವ ವಿಶ್ವವಿದ್ಯಾಲಯಗಳಲ್ಲಿ ಅಕ್ರಮ ನಡೆದು ಸಿಬ್ಬಂದಿ ಆಯ್ಕೆ ಪ್ರಕ್ರಿಯೆಯಲ್ಲಿ ಭ್ರಷ್ಟಾಚಾರ ನಡೆದಿರುವ ಪ್ರಕರಣಗಳು ಯಾವುವು ; ತನಿಖೆ ನಡೆಯುತ್ತಿರುವ ಪ್ರಕರಣಗಳು ಎಷ್ಟು ?

## ಕುಸುಮ್–ಬಿ ಸೌರ ಯೋಜನೆಯ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೨೨ (೫೮೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕುಸುಮ್–ಬಿ ಸೌರ ವಿದ್ಯುತ್ ಯೋಜನೆಯಡಿಯಲ್ಲಿ ಸದುಪಯೋಗ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು; ಫಲಾನುಭವಿಗಳಿಗೆ ನೀಡಲಾಗುವ ಸಹಾಯಧನದ ಮೊತ್ತ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಅದರಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರ ನೀಡಿರುವ ಅನುದಾನ ಮತ್ತು ಫಲಾನುಭವಿ ಪಾವತಿಸಬೇಕಾದ ಮೊತ್ತ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಸೋಲಾರ್ ಪಂಪ್ ಸೆಟ್‌ಗಳ ಅರ್ಜಿಗಳಲ್ಲಿ ಪ್ರವರ್ಗವಾರು ಆಯ್ಕೆಯಾಗುವ ಫಲಾನುಭವಿಗಳು ಎಷ್ಟು ; (ಪರಿಶಿಷ್ಟ ಜಾತಿ/ಪಂಗಡ, ಸಾಮಾನ್ಯ ವರ್ಗವಾರು ಮಾಹಿತಿ ನೀಡುವುದು)

(ಈ) ಈ ಯೋಜನೆಯಲ್ಲಿ ನೀಡಲಾಗುವ ಸೋಲಾರ್ ಪಂಪ್‌ಸೆಟ್‌ಗಳು ಎಷ್ಟು ; ಎಷ್ಟು ಹೆಚ್.ಪಿ ವರೆಗೆ ವಿದ್ಯುತ್ ಒದಗಿಸಬಲ್ಲದು; ಹಾಗೂ ಈ ಯೋಜನೆಯಲ್ಲಿ ಈಗಾಗಲೇ ಸಲ್ಲಿಸಿರುವ ಅರ್ಜಿಗಳಲ್ಲಿ ಕಲ್ಯಾಣ ಕರ್ನಾಟಕ ಭಾಗದ ಅರ್ಜಿಗಳು ಎಷ್ಟು ?

## ಕಲಬುರಗಿಯ ೧೦ನೇ ತರಗತಿ ಫಲಿತಾಂಶದ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೨೩ (೫೯೦) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ ಫಲಿತಾಂಶದ ಕುರಿತು ತಯಾರಿ ಯಾವ ಹಂತದಲ್ಲಿ ಇದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ೧೦ನೇ ತರಗತಿ ಮಕ್ಕಳಿಗೆ ಶಿಕ್ಷಕರಿಂದ ತಯಾರಿ ರೂಪದಲ್ಲಿ ಮಾದರಿ ಪ್ರಶ್ನೆ ಪತ್ರಿಕೆಯಲ್ಲಿ (ಹಿಂದೆ ನಡೆದ ಪ್ರಶ್ನೆ ಪತ್ರಿಕೆ) ತಯಾರಿ ಮಾಡಿಸಲಾಗುತ್ತಿದೆಯೇ ;

(ಇ) ಕಲಬುರಗಿ ಜಿಲ್ಲೆಯಲ್ಲಿ ಸರ್ಕಾರಿ ಆಂಗ್ಲ ಮಾಧ್ಯಮ ಶಾಲೆಗಳು ಎಷ್ಟು ಮಕ್ಕಳಿಗೆ, ಪೋಷಕರಿಗೆ ಮನವೊಲಿಸಿ ಆಂಗ್ಲ ಮಾಧ್ಯಮಕ್ಕೆ ಕರೆತರಲು ಯಾವ ನಿರ್ಣಯ ಕೈಗೊಳ್ಳಲಾಗಿದೆ ;

(ಈ) ಮುಂಬರುವ ದಿನಗಳಲ್ಲಿ ಸರ್ಕಾರದಿಂದ ಆಂಗ್ಲ ಮಾಧ್ಯಮವನ್ನು ಹೆಚ್ಚಿಸಲು ಸರ್ಕಾರ ಚಿಂತಿಸಿದೆಯೇ ? (ಜಿಲ್ಲಾವಾರು ಮಾಹಿತಿ ನೀಡುವುದು)

# ಅನ್ನಭಾಗ್ಯ ಯೋಜನೆಯಡಿಯಲ್ಲಿ ವಿತರಿಸುತ್ತಿರುವ ಪಡಿತರ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೨೪ (೬೭೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಡಿತರ ಚೀಟಿ ಹೊಂದಿರುವ ಫಲಾನುಭವಿಗಳಿಗೆ ಎಷ್ಟು ಪ್ರಮಾಣದ ಆಹಾರ ಧಾನ್ಯಗಳನ್ನು ಹಾಗೂ ಯಾವ ಯಾವ ಆಹಾರ ಧಾನ್ಯ/ ಪಡಿತರಗಳನ್ನು ನೀಡಲಾಗುತ್ತಿದೆ ; ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರ ನೀಡುತ್ತಿರುವ ಪ್ರಮಾಣವೆಷ್ಟು ; (ಪ್ರತ್ಯೇಕವಾಗಿ ಸಂಪೂರ್ಣ ಮಾಹಿತಿ ನೀಡುವುದು)

(ಆ) ಅನ್ನಭಾಗ್ಯ ಯೋಜನೆಯಡಿಯಲ್ಲಿ ಯಾವ ಆಹಾರ ಧಾನ್ಯ/ ಪಡಿತರಗಳನ್ನು ವಿತರಿಸಲಾಗುತ್ತಿದೆ ; ಎಷ್ಟು ಪಡಿತರ ಚೀಟಿಗಳಿಗೆ ಯಾವ ದಿನಾಂಕದಿಂದ ವಿತರಿಸಲಾಗುತ್ತಿದೆ ;

(ಇ) ೫ ಕೆಜಿ ಅಕ್ಕಿಯ ಬದಲಾಗಿ ಎಷ್ಟು ಮೊತ್ತವನ್ನು ಪಾವತಿ ಮಾಡಲಾಗುತ್ತಿದೆ ; ೨೦೨೩ ಏಪ್ರಿಲ್ ನಿಂದ ಫೆಬ್ರವರಿ ೨೦೨೬ ರವರೆಗೆ ಎಷ್ಟು ಪಡಿತರ ಚೀಟಿಗಳಿಗೆ ಎಷ್ಟು ಮೊತ್ತವನ್ನು ಪಾವತಿ ಮಾಡಲಾಗಿದೆ ; (ತಿಂಗಳವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಒಂದು ವೇಳೆ ಪಾವತಿ ಮಾಡದಿದ್ದಲ್ಲಿ, ಯಾವ ಕಾರಣಕ್ಕಾಗಿ ಬಾಕಿ ಇದೆ ; ಬಾಕಿ ಪಾವತಿಸಲು ಏನು ಕ್ರಮ ಕೈಗೊಳ್ಳಲಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)

# ಗೃಹಜ್ಯೋತಿ ಯೋಜನೆಯಡಿ ವಿದ್ಯುತ್ ಬಳಕೆ, ವೆಚ್ಚ ಹಾಗೂ ಬಾಕಿ ಪಾವತಿಯ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೨೫ (೬೭೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗೃಹಜ್ಯೋತಿ ಯೋಜನೆಯಡಿ ೨೦೨೩ ಏಪ್ರಿಲ್ ತಿಂಗಳಿನಿಂದ ಫೆಬ್ರವರಿ ೨೦೨೬ ರವರೆಗೆ ನೋಂದಾವಣೆಯಾದ ಕುಟುಂಬಗಳ ಸಂಖ್ಯೆ ಎಷ್ಟು ; ಬಳಕೆ ಮಾಡಿದ ವಿದ್ಯುತ್ ಪ್ರಮಾಣ ಹಾಗೂ ವೆಚ್ಚವೆಷ್ಟು ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಇಂಧನ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಎಸ್ಕಾಂಗಳಲ್ಲಿ ಇಲ್ಲಿಯವರೆಗೆ ಗೃಹಜ್ಯೋತಿ ಯೋಜನೆಯಡಿ ಬಳಕೆಯಾದ ವಿದ್ಯುತ್ ಪ್ರಮಾಣವೆಷ್ಟು ಹಾಗೂ ಅದಕ್ಕೆ ತಗುಲಿದ ವೆಚ್ಚವೆಷ್ಟು ; (ಎಲ್ಲಾ ಎಸ್ಕಾಂಗಳವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಗೃಹಜ್ಯೋತಿ ಯೋಜನೆಯಡಿ ಬಳಕೆಯಾದ ವಿದ್ಯುತ್ ಪ್ರಮಾಣದ ಮೊತ್ತವನ್ನು ರಾಜ್ಯ ಸರ್ಕಾರ ಎಸ್ಕಾಂ ಗಳಿಗೆ ಪಾವತಿ ಮಾಡಿದೆಯೇ ; ಎಷ್ಟು ಮೊತ್ತವನ್ನು ಯಾವ ದಿನಾಂಕದಂದು ಪಾವತಿ ಮಾಡಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಒಂದು ವೇಳೆ ಪಾವತಿಯಾಗದೆ ಬಾಕಿ ಉಳಿದುಕೊಂಡಲ್ಲಿ, ಎಷ್ಟು ಮೊತ್ತ, ಯಾವ ಸಮಯದಿಂದ ಬಾಕಿ ಇದೆ; ಬಾಕಿ ಇರಲು ಕಾರಣಗಳೇನು ? (ಆರ್ಥಿಕ ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

## ಸರ್ಕಾರಿ ಶಾಲೆಗಳ ಸಮಸ್ಯೆಗಳ ಕುರಿತು

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೨೬ (೬೮೦) ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಶಿಥಿಲಾವಸ್ಥೆಯ ಕಟ್ಟಡಗಳನ್ನು ಹೊಂದಿರುವ ಶಾಲೆಗಳ ಸಂಖ್ಯೆ ಎಷ್ಟು ; ಶೌಚಾಲಯಗಳನ್ನು ಹೊಂದಿರದೆ ಇರುವ ಶಾಲೆಗಳ ಸಂಖ್ಯೆ ಎಷ್ಟು ; ಗ್ರಂಥಾಲಯಗಳನ್ನು ಹೊಂದಿರದೆ ಇರುವ ಶಾಲೆಗಳ ಸಂಖ್ಯೆ ಎಷ್ಟು ; ಕುಡಿಯುವ ನೀರಿನ ಸಮಸ್ಯೆ ಇರುವ ಶಾಲೆಗಳ ಸಂಖ್ಯೆ ಎಷ್ಟು ; ಆಟದ ಮೈದಾನ ಇಲ್ಲದೆ ಇರುವ ಶಾಲೆಗಳ ಸಂಖ್ಯೆ ಎಷ್ಟು ; ಬೇಡಿಕೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುವ ಶಾಲೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಪ್ರತ್ಯೇಕವಾಗಿ ಸಂಪೂರ್ಣ ಮಾಹಿತಿ ನೀಡುವುದು)

(ಆ) ಮೇಲ್ಕಾಣಿಸಿದ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ನಕಲಿ ಔಷಧಿ ಪೂರೈಕೆ ಮಾರಾಟವನ್ನು ತಡೆಗಟ್ಟುವ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೨೭ (೬೯೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಔಷಧಿ ಮಾರುಕಟ್ಟೆಯಲ್ಲಿ ನಕಲಿ ಔಷಧಿಗಳ ಪೂರೈಕೆ ಮತ್ತು ಮಾರಾಟ ಜಾಲ ವ್ಯಾಪಕವಾಗಿ ಹೆಚ್ಚುತ್ತಿರುವುದು ಸರ್ಕಾರದ

ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕಳೆದ ೩ ವರ್ಷಗಳಲ್ಲಿ ಗುರುತಿಸಲಾದ ನಕಲಿ ಔಷಧಿ ತಯಾರಿಕ ಕಂಪನಿಗಳನ್ನು ಪತ್ತೆ ಮಾಡಲಾಗಿದೆಯೇ ; ಮಾಡಿದ್ದಲ್ಲಿ, ಇಂತಹ ನಕಲಿ ಔಷಧಿ ತಯಾರಿಕ ಕಂಪನಿಗಳು ಯಾವುವು ; (ಸಂಪೂರ್ಣ ವಿವರ ನೀಡುವುದು)

(ಆ) ಇಂತಹ ನಕಲಿ ಔಷಧಿ ತಯಾರಿಕ ಕಂಪನಿ/ಔಷಧಿ ಪೂರೈಕೆದಾರರ ಮತ್ತು ಮಾರಾಟಗಾರರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಶಿವಮೊಗ್ಗ ಜಿಲ್ಲೆಯ ಪ್ರಾಥಮಿಕ ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರ ಕೊರತೆಯ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೨೮ (೬೯೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ ಜಿಲ್ಲೆಯ ಪ್ರಾಥಮಿಕ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ವೈದ್ಯಾಧಿಕಾರಿಗಳ ಕೊರತೆಯಿಂದಾಗಿ ರೋಗಿಗಳಿಗೆ ಸೂಕ್ತ ಚಿಕಿತ್ಸೆ ಪಡೆಯಲು ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮಗಳೇನು ;

(ಆ) ಜಿಲ್ಲೆಯಲ್ಲಿರುವ ಒಟ್ಟು ಪ್ರಾಥಮಿಕ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳು ಎಷ್ಟು ಮತ್ತು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಜಿಲ್ಲೆಯ ಪ್ರಾಥಮಿಕ ಸಮುದಾಯ ಆರೋಗ್ಯ ಕೇಂದ್ರಗಳಿಗೆ ಮಂಜೂರಾಗಿರುವ ವೈದ್ಯರ ಹುದ್ದೆ, ಭರ್ತಿ ಮಾಡಲಾಗಿರುವ ಹುದ್ದೆಗಳು ಮತ್ತು ಖಾಲಿ ವೈದ್ಯಾಧಿಕಾರಿಗಳ ಹುದ್ದೆ ಎಷ್ಟು ಮತ್ತು ಯಾವುವು ? (ತಾಲ್ಲೂಕುವಾರು ಮಾಹಿತಿ ನೀಡುವುದು)

# ರಾಜ್ಯದಲ್ಲಿನ ಯುವ ನಿಧಿ ಯೋಜನೆ ಕುರಿತು

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೨೯ (೬೯೨) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಯುವ ನಿಧಿ ಕಾರ್ಯಕ್ರಮದಡಿ ಈವರೆವಿಗೂ ಎಷ್ಟು ಮಂದಿ ನಿರುದ್ಯೋಗ ಭತ್ಯೆಗಾಗಿ ನೋಂದಣಿ ಮಾಡಿಕೊಂಡಿದ್ದಾರೆ ; ಹೆಸರು ಹಾಗೂ ವಿಳಾಸವಾರು ಮಾಹಿತಿ ನೀಡುವುದು ;

(ಆ) ಯೋಜನೆಗಾಗಿ ಎಷ್ಟು ಮಂದಿಗೆ ಈವರೆಗೂ ನಿರುದ್ಯೋಗ ಭತ್ಯೆ ನೀಡಲಾಗಿದೆ ; (ಹೆಸರು ಹಾಗೂ ವಿಳಾಸದ ಮಾಹಿತಿ ನೀಡುವುದು)

(ಇ) ಇನ್ನು ಎಷ್ಟು ಅರ್ಜಿಗಳು ನಿರುದ್ಯೋಗ ಭತ್ಯೆಗಾಗಿ ಸರ್ಕಾರದ ಮುಂದೆ ಬಾಕಿ ಇವೆ ; (ಹೆಸರು ಹಾಗೂ ವಿಳಾಸವಾರು ಮಾಹಿತಿ ನೀಡುವುದು)

(ಈ) ಕೌಶಲ್ಯ ಅಭಿವೃದ್ಧಿ ಇಲಾಖೆಯಡಿ ೨೦೨೫–೨೬ನೇ ಹಣಕಾಸಿನ ವರ್ಷದಲ್ಲಿ ಎಷ್ಟು ಮಂದಿಗೆ ಕೌಶಲ್ಯ ತರಬೇತಿ ನೀಡಲಾಗಿದೆ ? (ವಿವರ ನೀಡುವುದು)

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. O172/500 ಪ್ರತಿಗಳು/23–02–2026